ಸಂಪುಟ: 21, ಸಂಚಿಕೆ: 222, ಪುಟಗಳು: 8, ಮಂಗಳವಾರ, 21 ಮೇ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ಇತರರು ನಿಮ್ಮ ಬಗ್ಗೆ ಅರಿತಿಲ್ಲ ಎಂದು ಚಿಂತಿಸಬೇಡಿ.ನೀವು ಅವರನ್ನು ಸರಿಯಾಗಿ ಅರಿಯದೇ ಇರುವುದರ ಬಗ್ಗೆ ಚಿಂತಿಸಿ.

। ಕನ್‌ಫ್ಯೂಷಿಯಸ್

### ಪಂಚಾಂಗ

(ಮಂಗಳವಾರ 21, ಮೇ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಶುಕ್ಲ ಪಕ್ಷ,
- ವಾರ: ಮಂಗಳವಾರ, ತಿಥಿ: ತ್ರಯೋದಶಿ
- ನಕ್ಷತ್ರ: ಸ್ವಾತಿ
- ರಾಹುಕಾಲ: 3.31 ರಿಂದ 5.07
- ಗುಳಿಕಕಾಲ: 12.20 ರಿಂದ 1.55
- ಯಮಗಂಡ ಕಾಲ: 9.08 ರಿಂದ 10.44

# ಇಂದು ರಾಜೀವ್ ಗಾಂಧಿ 33ನೇ ಪುಣ್ಯತಿಥಿ



**ನವದೆಹಲಿ:** ಇಂದು ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ 33 ನೇ ಪುಣ್ಯತಿಥಿ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಸಂಸದ ರಾಹುಲ್ ಗಾಂಧಿಯವರು ವೀರಭೂಮಿಯಲ್ಲಿ ರಾಜೀವ್ ಗಾಂಧಿಸಮಾಧಿಗೆ ಪುಷ್ಪನಮನಸಲ್ಲಿಸಿದರು. ಈ ಸಂದರ್ಭದಲ್ಲಿ ಸಚಿನ್ ಪೈಲಟ್, ಪಿ ಚಿದಂಬರಂ, ಕೆಸಿ ವೇಣುಗೋಪಾಲ್ ಸೇರಿದಂತೆ ಇತರ ಹಿರಿಯ ಕಾಂಗ್ರೆಸ್ ನಾಯಕರು ಉಪಸ್ಥಿತರಿದ್ದರು.ಪ್ರಿಯಾಂಕಾ ಗಾಂಧಿ ಪತಿ ರಾಬರ್ಟ್ ವಾದ್ರಾ, ಸಾಥ್ ನೀಡಿದರು.

ಪುಟ 2



ಖರ್ಗೆ, ಸೋನಿಯಾ ಸೇರಿ ಗಣ್ಯರಿಂದ ಪುಷ್ಪ ನಮನ

## ಸಂಕ್ಷಿಪ್ತ ಸುದ್ದಿ

### ಬೀದಿ ನಾಯಿ ದಾಳಿ 4 ವರ್ಷದ ಬಾಲಕಿ ಸಾವು



**ರಾಯಚೂರು:** ಜಿಲ್ಲೆಯಲ್ಲಿ ಬೀದಿ ನಾಯಿ ಕಚ್ಚಿ ನಾಲ್ಕು ವರ್ಷದ ಬಾಲಕಿ ಮೃತಪಟ್ಟ ಘಟನೆ ನಡೆದಿದೆ. 15 ದಿನದ ಹಿಂದೆ ಬೀದಿ ನಾಯಿ ದಾಳಿಯಿಂದ ಗಾಯಗೊಂಡಿದ್ದ ಬಾಲಕಿ ಲಾವಣ್ಯ (4) ಮೃತಪಟ್ಟಿದ್ದಾಳೆ. ರಾಯಚೂರು ತಾಲೂಕಿನ ಕೊರವಿಹಾಳ ಗ್ರಾಮದಲ್ಲಿ ಕಳೆದ 15 ದಿನಗಳ ಹಿಂದೆ ಒಂದೇ ದಿನ ಏಳು ಮಕ್ಕಳಿಗೆ ಬೀದಿ ನಾಯಿ ಕಚ್ಚಿತ್ತು. ಮನೆ ಬಳಿ ಆಟವಾಡುತ್ತಿದ್ದ ಮಕ್ಕಳ ಮೇಲೆ ಏಕಾಏಕಿ ನಾಯಿ ದಾಳಿ ಮಾಡಿತ್ತು. ದಾಳಿಗೊಳಗಾದವರ ಪೈಕಿ ಕೀರಲಿಂಗ ಎಂಬುವವರ 4 ವರ್ಷದ ಪುತ್ರಿ ಲಾವಣ್ಯ ಮೃತಪಟ್ಟಿದ್ದಾಳೆ. ಮೃತ ಲಾವಣ್ಯಳ ಕತ್ತಿನ ಹಿಂಭಾಗಕ್ಕೆ ಬೀದಿ ನಾಯಿ ಕ್ರೂರವಾಗಿ ಕಚ್ಚಿತ್ತು.ನಾಯಿ ದಾಳಿಯಿಂದ ತೀವ್ರ ರಕ್ತಸ್ರಾವಕ್ಕೊಳಗಾಗಿದ್ದ ಲಾವಣ್ಯಳನ್ನು ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ಕೊಡಿಸಲಾಗಿತ್ತು, ಚಿಕಿತ್ಸೆ ಬಳಿಕ ಡಿಸ್ಚಾರ್ಜ್ ಆಗಿ ಮನೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಏಕಾಏಕಿ ಸಾವು ಸಂಭವಿಸಿದೆ.

### ಜೂ.28 ರಂದು ಇರಾನ್‌ನಲ್ಲಿ ಅಧ್ಯಕ್ಷೀಯ ಚುನಾವಣೆ



ಟೆಹ್ರಾನ್: ಅಧ್ಯಕ್ಷ ಇಬ್ರಾಹಿಂ ರೈಸಿ ಹೆಲಿಕಾಪ್ಟರ್ ಅಪಘಾತದಲ್ಲಿ ನಿಧನರಾದ ನಂತರ ಇರಾನ್ ದೊಡ್ಡ ಘೋಷಣೆಯೊಂದನ್ನು ಮಾಡಿದೆ.ರೈಸಿ ಅವರ ಸಾವಿನ ಬಳಿಕ ದೇಶದಲ್ಲಿ ಅಧ್ಯಕ್ಷೀಯ ಚುನಾವಣೆ ನಡೆಸಲು ಇರಾನ್ ನಿರ್ಧರಿಸಿದೆ.ಜೂನ್ 28 ರಂದು ಇರಾನ್‌ನಲ್ಲಿ ಅಧ್ಯಕ್ಷೀಯ ಚುನಾವಣೆ ನಡೆಯಲಿದೆ ಎಂದು ಹೇಳಿಕೆ ತಿಳಿಸಿದೆ. ಸರ್ಕಾರ ಮತ್ತು ಸಂಸತ್ತಿನ ಮುಖ್ಯಸ್ಥರ ಸಭೆಯಲ್ಲಿ 14 ನೇ ಅಧ್ಯಕ್ಷೀಯ ಚುನಾವಣೆಯನ್ನು ಜೂನ್ 28 ರಂದು ನಡೆಸಲು ನಿರ್ಧರಿಸಲಾಯಿತು ಎಂದು ಇರಾನ್ ಮಾಧ್ಯಮಗಳು ವರದಿ ಮಾಡಿವೆ. ಈ ನಡುವೆ ಉಪಾಧ್ಯಕ್ಷ ಮೊಹಮ್ಮದ್ ಮೊಖ್ಬರ್ ಅವರನ್ನು ದೇಶದ ಹಂಗಾಮಿ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.

ಪುಟ 2

# ರಾಜ್ಯದಲ್ಲಿ ಮುಂಗಾರು ಪೂರ್ವ ಅಬ್ಬರ

## 5 ಜಿಲ್ಲೆಗಳಲ್ಲಿ ಆರೆಂಜ್

# ಅಲರ್ಟ್



**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಭಾಗಗಳಲ್ಲಿ ಕಳೆದ ಕೆಲವು ದಿನಗಳಿಂದ ಪೂರ್ವ ಮುಂಗಾರುಮಳೆ ಅಬ್ಬರಿಸುತ್ತಿದೆ. ಇಂದಿನಿಂದ ರಾಜ್ಯದ ಹಲವೆಡೆ 7 ದಿನಗಳ ಕಾಲ ಮಳೆಯಾಗಲಿದೆ. ಇಂದು ರಾಜ್ಯದ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಭಾರೀ ಮಳೆಯ ಸಾಧ್ಯತೆ ಹಿನ್ನೆಲೆ 5 ಜಿಲ್ಲೆಗಳಿಗೆ ಇಂದು ಹಾಗೂ ನಾಳೆ (ಮೆ 21, 22) ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲಿ ಇಂದು ಮುಂಜಾನೆಯಿಂದ ಮೋಡ ಕವಿದ ವಾತವರಣವಿದ್ದು, ಇಂದಿನಿಂದ ಎರಡು ದಿನಗಳ ಕಾಲ ಗಾಳಿ, ಗುಡುಗು ಮಿಂಚಿನಿಂದ ಕೂಡಿದ ಸಾಧಾರಣ ಮಳೆಯಾಗಲಿದೆ ಎಂದು ಇಲಾಖೆ ಎಚ್ಚರಿಸಿದೆ.

**ರಾಜ್ಯದ ಹಲವೆಡೆ 7 ದಿನಗಳ ಮಳೆ ಮುನ್ಸೂಚನೆ**

**ಮೇ 20ರಂದು ಬೆಂಗಳೂರಲ್ಲಿ ಎಲ್ಲೆಲ್ಲಿ ಎಷ್ಟು ಮಳೆಯಾಗಿತ್ತು?**

- ಹೆಚ್.ಗೊಲ್ಲಹಳ್ಳಿ- 2 ಸೆಂ.ಮೀ
- ರಾಜರಾಜೇಶ್ವರಿನಗರ- 2 ಸೆಂ.ಮೀ
- ಹಮ್ಮಿಗೆಪುರ- 2 ಸೆಂ.ಮೀ
- ಗೊಟ್ಟಿಗೆರೆ- 1.2 ಸೆಂ.ಮೀ

## ಪ್ರಜ್ವಲ್ ರೇವಣ್ಣ ಪಾಸ್‌ಪೋರ್ಟ್ ರದ್ದು ಮಾಡಲು ಚಿಂತನೆ

**ಬೆಂಗಳೂರು:** ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಅತ್ಯಾಚಾರ ಪ್ರಕರಣಕ್ಕೆ ವಿಶೇಷ ತನಿಖಾ ತಂಡ ಅರೆಸ್ಟ್ ವಾರೆಂಟ್ ಅನ್ನು ಪಡೆದಿದ್ದಾಗಿದೆ.ಈಗ ಎಸ್‌ಐಟಿ ಮುಂದೆ ಇರೋದು ಪಾಸ್‌ಪೋರ್ಟ್ ರದ್ದು ಮಾಡೋದು. ಎಸ್‌ಐಟಿ ಪಾಸ್‌ಪೋರ್ಟ್ ರದ್ದಿಗೆ ಕೇಂದ್ರ ವಿದೇಶಾಂಗ ಇಲಾಖೆಗೆ ಪತ್ರ ಬರೆದಿದೆ.ತತಕ್ಷಣವೇ ಪ್ರಜ್ವಲ್ ಹೊಂದಿರೋ ರಾಜತಾಂತ್ರಿಕ ಪಾಸ್ ಪೋರ್ಟ್ ರದ್ದು ಮಾಡುವಂತೆ ಮನವಿ ಮಾಡಿದೆ.

ಪುಟ 2




### ವಿಡಿಯೋ ಹರಿಬಿಟ್ಟವರ ವಿರುದ್ಧ ಕಾನೂನು ಹೋರಾಟ



**ಬೆಂಗಳೂರು:** ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾಗಿರುವ ಅಶ್ಲೀಲ ವಿಡಿಯೋ ಪ್ರಕರಣ ರಾಷ್ಟ್ರ ಮಟ್ಟದಲ್ಲಿ ಸದ್ದು ಮಾಡಿದ್ದು, ರಾಜಕೀಯ ವಾಗ್ಯುದ್ಧಕ್ಕೂ ಕಾರಣವಾಗಿದೆ. ಅಶ್ಲೀಲ ವಿಡಿಯೋಗಳ ಪೆನ್‌ಡ್ರೈವ್ ಪ್ರಕರಣವನ್ನು ಸಿಬಿಐಗೆ ನೀಡಬೇಕೆಂದು ಬಿಜೆಪಿಮತ್ತು ಜೆಡಿಎಸ್ ನಾಯಕರು ಸರ್ಕಾರಕ್ಕೆ ಒತ್ತಾಯಿಸುತ್ತಿದ್ದಾರೆ. ಆದರೆ ರಾಜ್ಯ ಸರ್ಕಾರ ಇದಕ್ಕೆ ಒಪ್ಪುತ್ತಿಲ್ಲ. ಈ ಹಿನ್ನೆಲೆಯಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿಕಾನೂನುಹೋರಾಟ ಮಾಡಲು ನಿರ್ಧರಿಸಿದ್ದಾರೆ.

ಪ್ರಜ್ವಲ್ ರೇವಣ್ಣ ಅವರವಿರುದ್ಧ ಕೇಳಿ ಬಂದಿರುವ ಆರೋಪದ ಬಗ್ಗೆ ಈಗಾಗಲೆ ತನಿಖೆ ನಡೆಯುತ್ತಿದೆ. ಆದರೆಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾಗಿರುವ ಅಶ್ಲೀಲ ವಿಡಿಯೋಗಳನ್ನು ಸಾಮಾಜಿಕ ಜಾಲತಾಣ ಹಾಗೂ ಪೆನ್‌ಡ್ರೈವ್ ಮೂಲಕ ವಿವಿಧಡೆ ಹರಿಬಿಡಲಾಗಿದೆ. ಹೀಗೆ ಈ ವಿಡಿಯೋಗಳನ್ನು ಹರಿಬಿಟ್ಟು ಮಹಿಳೆಯರ ಮಾನ ಹಾನಿ ಮಾಡಲಾಗಿದೆ. ಅಷ್ಟೇ ಅಲ್ಲದೆ ಇದರಿಂದ ಹಲವು ಕುಟುಂಬಗಳು ಹಾಳಾಗಿವೆ. ಹೀಗಾಗಿ ವಿಡಿಯೋ ಹರಿಬಿಟ್ಟವರ ವಿರುದ್ಧ ಕ್ರಮ ಕೈಗೊಳ್ಳಲು ಜೆಡಿಎಸ್ ಲೀಗಲ್ ಟೀಮ್ ಈಗಾಗಲೇ ವಕೀಲರ ಜೊತೆ ಮಾತುಕತೆ ನಡೆಸಿದೆ. ಹೀಗಾಗಿ ಈ ಪ್ರಕರಣವನ್ನು ವಿಡಿಯೋಗಳನ್ನು ಹರಿಬಿಟ್ಟವರ ವಿರುದ್ಧ ಕಾನೂನು ಹೋರಾಟ ನಡೆಸಲು ಹೆಚ್‌ಡಿ ಕುಮಾರಸ್ವಾಮಿ ಸಜ್ಜಾಗಿದ್ದಾರೆ. ಪ್ರಕರಣವನ್ನು ಸಿಬಿಐಗೆ ನೀಡುವಂತೆ ಹೆಚ್.ಡಿ.ಕುಮಾರಸ್ವಾಮಿಯವರು ನ್ಯಾಯಾಲಯದ ಮೂಲಕ ಸರ್ಕಾರದ ಮೇಲೆ ಒತ್ತಡ ತರಲು ತೀರ್ಮಾನಿಸಿದ್ದಾರೆ.

**ಕಾನೂನು ಹೋರಾಟ ಮಾಡಲು ಕುಮಾರಸ್ವಾಮಿ ನಿರ್ಧಾರ**

### ಬೆಳ್ತಂಗಡಿಯ ಕಾರ್ಯಕರ್ತರನ್ನ ಮುಟ್ಟಿದ್ರೆ ಪೊಲೀಸರ ಕಾಲರ್ ಹಿಡಿಯಲೂ ರೆಡಿ

**ಮಂಗಳೂರು:** ಬೆಳ್ತಂಗಡಿಯ ಬಿಜೆಪಿ ಕಾರ್ಯಕರ್ತರನ್ನ ಮುಟ್ಟಿದ್ರೆ ಪೊಲೀಸರ ಕಾಲರ್ ಹಿಡಿಯಲು ನಾನು ರೆಡಿ ಎಂದು ಶಾಸಕ ಹರೀಶ್ ಪೂಂಜಾ ವಿವಾದಾತ್ಮಕ ಹೇಳಿಕೆಯನ್ನು ನೀಡಿದ್ದಾರೆ.

ಬೆಳ್ತಂಗಡಿ ತಾಲೂಕು ಕಚೇರಿ ಮುಂಭಾಗದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ದಕ್ಷಿಣ ಕನ್ನಡ ಎಸಿಪಿಗೆ ಬುದ್ಧಿ ಇಲ್ಲ. ಕಾಂಗ್ರೆಸ್ ಏಜೆಂಟ್ ರೀತಿ ಕೆಲಸ ಮಾಡುತ್ತಿದ್ದಾರೆ ಎಂದು ಪ್ರತಿಭಟನೆಯಲ್ಲಿ ಪೊಲೀಸರಿಗೆ ಹರೀಶ್ ಪೂಂಜಾ ಅವಾಜ್ ಹಾಕಿದ್ದಾರೆ. ನನ್ನ ಕಾರ್ಯಕರ್ತರನ್ನ, ಬಿಜೆಪಿ ಕಾರ್ಯಕರ್ತರನ್ನು ಅರೆಸ್ಟ್ ಮಾಡಿ ವಿನಾಕಾರಣ ಒಳಗೆ ಕೂರಿಸಿದಾಗ ನಾನು ಅಧಿಕಾರಯುತವಾಗಿಯೇ ಮಾತನಾಡೋದು.

ಪುಟ 2



### ಸಾಲ ಮರುಪಾವತಿಸುವಂತೆ ಪತ್ನಿ, ಪುತ್ರನಿಗೆ 2 ದಿನ ಗೃಹ ಬಂಧನ ರೈತ ಆತ್ಮಹತ್ಯೆ

**ಚಿಕ್ಕೋಡಿ:** ಸಾಲ ಮರುಪಾವತಿ ವಿಳಂಬವಾಗಿದ್ದಕ್ಕೆ ಮಹಿಳೆಯೊಬ್ಬಳು ರೈತನ ಪತ್ನಿ ಹಾಗೂ ಪುತ್ರನನ್ನು ಗೃಹ ಬಂಧನದಲ್ಲಿಟ್ಟಿದ್ದಕ್ಕೆ ಮನನೊಂದು



ರೈತ ವಿಷಸೇವಿಸಿ ಆತ್ಮಹತ್ಯೆಗೆ ಶರಣಾದ ಘಟನೆ ಹುಕ್ಕೇರಿಯ ಇಸ್ಲಾಂಪುರದಲ್ಲಿ ನಡೆದಿದೆ. ಆತ್ಮಹತ್ಯೆಗೆ ಶರಣಾದ ವ್ಯಕ್ತಿಯನ್ನು ರಾಜು ಖೋತಗಿ ಎಂದು ಗುರುತಿಸಲಾಗಿದೆ.ಮೃತ ರಾಜು ರೈತನಾಗಿದ್ದು, ಭೀಕರ ಬರದಿಂದ ಬೆಳೆ ನಷ್ಟದಿಂದ ಅದೇ ಗ್ರಾಮದ ಸಿದ್ದವ್ವ ಬಯ್ಯನವರ ಎಂಬ ಮಹಿಳೆ ಬಳಿ 5 ತಿಂಗಳ ಹಿಂದೆ 1.5 ಲಕ್ಷ ರೂ.ಸಾಲ ಮಾಡಿದ್ದರು.ಎರಡು ದಿನದ ಹಿಂದೆ ಒಂದೇ ಬಾರಿಗೆ ಹಣ ಕೊಡುವಂತೆ ಸಿದ್ದವ್ವ ಕೇಳಿದ್ದಾಳೆ. ಹಣ ಕೊಡುವ ತನಕ ರೈತನ ಪತ್ನಿ ಹಾಗೂ ಪುತ್ರನನ್ನು ಮನೆಯಲ್ಲಿ ಬಿಟ್ಟು ಹೋಗುವಂತೆ ಹೇಳಿದ್ದಳು.ಬಳಿಕ ರೈತನ ಪತ್ನಿ ಹಾಗೂ ಪುತ್ರನನ್ನು ಎರಡು ದಿನದಿಂದ ಗೃಹ ಬಂಧನದಲ್ಲಿಟ್ಟಿದ್ದಳು.

ಪುಟ 2



### ಕೆರಗೋಡು ವಿವಾದಿತ ಅರ್ಜುನ ಸ್ತಂಭದಲ್ಲಿ ನೂತನ ಧ್ವಜಾರೋಹಣ

**ಮಂಡ್ಯ:** ಇಲ್ಲಿನ ಕೆರಗೋಡಿನ ವಿವಾದಿತ ಅರ್ಜುನ ಸ್ತಂಭದಲ್ಲಿ ಹಾರಿಸಲಾಗಿದ್ದ ತ್ರಿವರ್ಣ ಧ್ವಜವನ್ನು ಇಂದು ಬೆಳ್ಳಂ ಬೆಳಗ್ಗೆ ಮಂಡ್ಯ ಜಿಲ್ಲಾಡಳಿತ ಪೊಲೀಸರ ಭದ್ರತೆಯಲ್ಲಿ ಇಳಿಸಿ ಹೊಸ ತ್ರಿವರ್ಣ ಧ್ವಜವನ್ನು ಹಾರಿಸಿದೆ. ಜ.28 ರಂದು ಕೆರಗೋಡಿನ ಅರ್ಜುನ ಸ್ತಂಭದಲ್ಲಿದ್ದ ಹನುಮ ಧ್ವಜವನ್ನು ಕೆಳಗಿಳಿಸಿ ಆತುರಾತುವಾಗಿ ರಾಷ್ಟ್ರ ಧ್ವಜವನ್ನು ಹಾರಿಸಿತ್ತು. ಈ ವೇಳೆ ಗ್ರಾಮದಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿತ್ತು.ಕೆರಗೋಡಿನ ಗ್ರಾಮಸ್ಥರ ತೀವ್ರ ವಿರೋಧದ ನಡುವೆ ಮಂಡ್ಯ ಜಿಲ್ಲಾಡಳಿತ ಅಂದು ರಾಷ್ಟ್ರ ಧ್ವಜವನ್ನು ಹಾರಿಸಲಾಗಿತ್ತು.ಈ ವೇಳೆ 108 ಅಡಿಯ ಅರ್ಜುನ ಸ್ತಂಭಕ್ಕೆ ಚಿಕ್ಕದಾದ ಧ್ವಜವನ್ನು ಜಿಲ್ಲಾಡಳಿತ ಹಾರಿಸಿತ್ತು. ಇದಾದ ಬಳಿಕ ಕೆರಗೋಡು ಗ್ರಾಮಸ್ಥರು 108 ಅಡಿಯ ಸ್ತಂಭಕ್ಕೆ ಚಿಕ್ಕದಾದ ಧ್ವಜ ಹಾಕುವ ಮೂಲಕ ಜಿಲ್ಲಾಡಳಿತ ತ್ರಿವರ್ಣ ಧ್ವಜಕ್ಕೆ ಅವಮಾನ ಮಾಡುತ್ತಿದೆ ಎಂದು ಆಕ್ರೋಶ ಹೊರ ಹಾಕಿದ್ದರು. ಇದಾದ ಬೆನ್ನಲ್ಲೇ ಇಂದು ಜಿಲ್ಲಾಡಳಿತ ಮಳೆ ಹಾಗೂ ಬಿಸಿಲಿಗೆ ಧ್ವಜ ಬಣ್ಣ ಕಡಿಮೆ ಆಗಿದೆ ಮತ್ತು ಒಂದು ಗಂಟೆನಿಂದ ಧ್ವಜ ಹಾರಾಡುತ್ತಿಲ್ಲ ಎಂಬ ಕಾರಣ ಹೇಳಿ ಹೊಸ ಧ್ವಜ ಹಾರಿಸಿದೆ. ಮುಂಜಾನೆ ಕೆರಗೋಡು ಗ್ರಾಮಕ್ಕೆ ಬಂದ ಪೊಲೀಸರು ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತೆ ಕೈಗೊಂಡರು. ಬಳಿಕ 6:45ರ ವೇಳೆಯಲ್ಲಿ ಹಳೆದ ರಾಷ್ಟ್ರ ಧ್ವಜ ಇಳಿಸಿ ಎಡಿಸಿ ನಾಗರಾಜ್ ಅವರು ಹೊಸ ಧ್ವಜಾರೋಹಣ ಮಾಡಿದರು.

### ಕಳ್ಳತನದ ಕೆಲಸಕ್ಕೆ 20 ಸಾವಿರ ಸಂಬಳ- ಆರೋಪಿಗಳ ಬಂಧನ

**ತುಮಕೂರು:** ನಾವು ಸಂಬಳಕ್ಕೆ ಕೆಲಸ ಮಾಡುವ ಶಿಕ್ಷಕ, ವೈದ್ಯ, ಎಂಜಿನಿಯರ್ ಈ ರೀತಿಯ ವೃತ್ತಿಗಳನ್ನ ಕೇಳಿರ್ತೀವಿ, ಕಂಪನಿಗಳು ಸಂಬಳಕ್ಕೆ ಸಿಬ್ಬಂದಿ ಅನ್ನು ನೇಮಕ ಮಾಡುತ್ತವೆ ಎಂದು ನೋಡಿರ್ತೀವಿ.ಆದರೆ ತುಮಕೂರಿನಲ್ಲಿ ಕಳ್ಳತನಕ್ಕೆಂದೇ ಸಂಬಳಕ್ಕೆ ನೇಮಕ ಮಾಡಿಕೊಂಡ ಅಪರೂಪದ ಕೆಲಸವೊಂದನ್ನು ಪತ್ತೆ ಹಚ್ಚಿದ್ದಾರೆ.

ಇಂತಹ ಅಪರೂಪದ ಪ್ರಕರಣ ನೋಡಿ ಗೃಹ ಸಚಿವರ ತವರು ಕ್ಷೇತ್ರ ಕೊರಟಗೆರೆ ಪೊಲೀಸರೇ ಒಂದು ಕ್ಷಣ ದಂಗಾಗಿದ್ದಾರೆ.ಬೆಂಗಳೂರು ಮೂಲದ ರಾಘವೇಂದ್ರ ಎಂಬಾತ ವೆಂಕಟೇಶ್ ಎಂಬಾತನನ್ನ ಕಳ್ಳತನಕ್ಕಾಗಿ ಕೆಲಸಕ್ಕೆ ಇಟ್ಟುಕೊಂಡಿದ್ದಾನೆ. ವೆಂಕಟೇಶನಿಗೆ 20 ಸಾವಿರ ರೂ. ಸಂಬಳ ಕೂಡ ಫಿಕ್ಸ್ ಮಾಡಿದ್ದಾನೆ. 20 ಸಾವಿರ ಸಂಬಳ ಪಡೆದ ಮೇಲೆ ಸುಮ್ನೆ ಕುಳಿತ್ತುಕೊಳ್ಳೊಕ್ಕೆ ಆಗುತ್ತಾ?. ಅದಕ್ಕೆ ಕಳ್ಳ ವೆಂಕಟೇಶ್ ಕೊರಟಗೆರೆ ಸುತ್ತಮುತ್ತ ರಾತ್ರಿ ಹೊತ್ತು ಕೊಳವೆ ಬಾವಿಯಲ್ಲಿದ್ದ ವೈರ್ ಗಳನ್ನ ಕದ್ದು ರಾಘವೇಂದ್ರನಿಗೆ ಕೊಡ್ತಿದ್ನಂತೆ.ಈ ಕದ್ದ ಕೇಬಲ್ ವೈರ್ ಗಳನ್ನ ರಾಘವೇಂದ್ರನು ವಿನೇಶ್ ಪಟೇಲ್ ಎಂಬಾತನಿಗೆ ಮಾರಾಟ ಮಾಡ್ತಿದ್ನಂತೆ.ಸರಣಿ ಕಳ್ಳತನದ ಮೇಲೆ ಕಣ್ಣಿಟ್ಟು ಕಾದು ಕುಳಿತಿದ್ದ ಪೊಲೀಸರಿಗೆ ವಡ್ಡಗೆರೆಯಲ್ಲಿ ಈ ಐನಾತಿ



ಖದೀಮರು ತೋರಿದ ಕಳ್ಳತನದ ಕೈ ಚಳಕ ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ಇದನ್ನೇ ಆಧಾರವಾಗಿ ಇಟ್ಟುಕೊಂಡು ತನಿಖೆ ನಡೆಸಿದ ಪೊಲೀಸರು ವೆಂಕಟೇಶ್, ರಾಘವೇಂದ್ರ, ವಿನೇಶ್ ಪಟೇಲನನ್ನು ಬೆಂಗಳೂರಿನ ಕಾಮಾಕ್ಷಿಪಾಳ್ಯದಲ್ಲಿ ಬಂಧಿಸಿ ವಿಚಾರಣೆ ನಡೆಸಿದ್ದಾರೆ.ಈ ವಿಚಾರಣೆಯಲ್ಲಿ ಸಂಬಳ ಪಡೆದು ಕಳ್ಳತನ ಮಾಡುತ್ತಿರುವ ವಿಚಾರವನ್ನ ವೆಂಕಟೇಶ್ ಬಾಯ್ಬಿಟ್ಟಿದ್ದಾನೆ. ಕೊರಟಗೆರೆ ಪೊಲೀಸರು ಈ ಮೂವರನ್ನ ಜೈಲಿಗಟ್ಟಿದ್ದಾರೆ. ಒಟ್ಟಾರೆ ವಿಚಿತ್ರ ಮತ್ತು ಅಪರೂಪದ ಪ್ರಕರಣಕ್ಕೆ ಕೊರಟಗೆರೆ ಠಾಣೆ ಸಾಕ್ಷಿಯಾಗಿದೆ.ಗೃಹ ಸಚಿವರ ತವರು ಕ್ಷೇತ್ರದಲ್ಲೇ ಈ ಪ್ರಕರಣ ಬಯಲಿಗೆ ಬಂದಿರೋದು ಇನ್ನಷ್ಟು ಕುತೂಹಲ ಕೆರಳಿಸಿದೆ.

# ಬಸವೇಶ್ವರ ಜಯಂತಿ: ಪ್ರತಿಭಾ ಪುರಸ್ಕಾರ



**ಮೈಸೂರು:** ಜನಚೈತನ್ಯ ಫೌಂಡೇಶನ್ ಆಶ್ರಯದಲ್ಲಿ ಪುರಭವನದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಬಸವೇಶ್ವರ ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ ಜರುಗಿತು.

ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ತಳವರ್ಗದ ಜನತೆಯ ಉತ್ತೇಜನಕ್ಕೆ ಪ್ರೋತ್ಸಾಹ ಮಾಡುವಂತಹ ಕಾರ್ಯಕ್ರಮಗಳನ್ನು ರೂಪಿಸುವುದು ಮಹತ್ತರವಾದ ಕೆಲಸ. ಪೌರಕಾರ್ಮಿಕರ ಮಕ್ಕಳು ಒಂದು ರೀತಿಯಲ್ಲಿ ಬೆಂಕಿಯಲ್ಲಿ ಅರಳಿದ ಹೂವುಗಳು. ಏಕೆಂದರೆ ಪೋಷಕರು ಕಾಯಕದಲ್ಲಿ ತಲ್ಲೀನರಾಗಿದ್ದರೂ ಶಿಕ್ಷಣ ಪಡೆದು ಇಂದು ಅತ್ಯುತ್ತಮ ಸಾಧನೆ ಮಾಡುತ್ತಿದ್ದಾರೆ. ಅಂಬೇಡ್ಕರ್ ಪಟ್ಟಂತಹ ಕಷ್ಟಗಳನ್ನು ಇವತ್ತಿನ ಮಕ್ಕಳು ಪಡುತ್ತಿಲ್ಲ. ಹೀಗಾಗಿ ಅವರು ತಳವರ್ಗದ ಜನತೆಯ ಉದ್ಧಾರಕ್ಕಾಗಿ ಅಂಬೇಡ್ಕರ್ ಅವರು ಹಕ್ಕುಗಳು, ಅವಕಾಶಗಳನ್ನು ಕಲ್ಪಿಸಿದ್ದಾರೆ. ಆ ನಿಟ್ಟಿನಲ್ಲಿ ಒಳ್ಳೆಯ ಗುರಿಗಳನ್ನು ಇಟ್ಟುಕೊಂಡು ನಡೆಯಬೇಕು. ಆಗ ಮಾತ್ರ ಜೀವನದಲ್ಲಿ ಯಶಸ್ಸುಗಳಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಮನುಷ್ಯನಿಗೆ ಹಲವಾರು ಕೆಟ್ಟ ಮತ್ತು ಒಳ್ಳೆಯ ಆಲೋಚನೆಗಳು ಬರುತ್ತವೆ. ಆದರೆ, ಒಳ್ಳೆಯ ಆಲೋಚನೆಗಳು ನಮ್ಮನ್ನು ಸಮಾಜದ ಎತ್ತರ ಸ್ಥಾನಕ್ಕೆ ಕೊಂಡೊಯ್ಯುತ್ತವೆ. ಯಾರು ನೋವು ಮತ್ತು ಬೆಂಕಿಯಲ್ಲಿ ಬೇಯುತ್ತಾರೆ ಅವರು ಸಮಾಜದಲ್ಲಿ ಉನ್ನತ ಮಟ್ಟಕ್ಕೆ ಏರುತ್ತಾರೆ. ವಿದ್ಯಾಭ್ಯಾಸದ ಸಾಧನೆ ಜತೆಗೆ ಮಾನವೀಯತೆ ಅಳವಡಿಸಿಕೊಂಡು ಸಾಗಿದಾಗ ಭವಿಷ್ಯದ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳುತ್ತೀರಿ ಎಂದು ಪ್ರತಿಭಾ ಪುರಸ್ಕೃತರಿಗೆ ತಿಳಿಸಿದರು. ರಂಗಕರ್ಮಿ ಜನಾರ್ಧನ್ ಮಾತನಾಡಿ, ಸಾಂಸ್ಕೃತಿಕ ಕಾರ್ಯಕ್ರಮದ ನಡುವೆ ಮಹಾನ್ ಚೇತನಗಳಾದ ಬುದ್ಧ ಬಸವ ಅಂಬೇಡ್ಕರ್ ಅವರನ್ನು ನೆನೆಯುವ ಕೆಲಸ ಶ್ಲಾಘನೀಯವಾದದ್ದು. ಮಾನವೀಯ ಮೌಲ್ಯಗಳನ್ನು ಬಿತ್ತಿದ ಮಹನೀಯರ ಹಾದಿಯಲ್ಲಿ ನಡೆಯಬೇಕಿದೆ. ಇವತ್ತಿನ ಮಕ್ಕಳು ಬುದ್ಧ ಬಸವ ಅಂಬೇಡ್ಕರ್ ತತ್ವಗಳನ್ನು ಅರ್ಥ ಮಾಡಿಕೊಳ್ಳಬೇಕಿದೆ. ಬಹುಸಂಸ್ಕೃತಿಯ ಭಾರತದಲ್ಲಿ ಮನು ಸಂಸ್ಕೃತಿ ಹರಡುವ ಹುನ್ನಾರ ನಡೆಯುತ್ತಿದೆ. ಇದನ್ನು ಗಂಭೀರವಾಗಿ ತೆಗೆದುಕೊಂಡು ಸಂವಿಧಾನ ನೀಡಿರುವ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ವಿದ್ಯಾರ್ಥಿಗಳು ಜಾಗೃತರಾಗಬೇಕು ಎಂದು ತಿಳಿಸಿದರು. ಚಿಂತಕ ಪ್ರೊ.ಗೋವಿಂದಯ್ಯ, ಮಾಜಿ ಮೇಯರ್ ನಾರಾಯಣ್, ಫೌಂಡೇಶನ್ ಅಧ್ಯಕ್ಷ ಲಕ್ಷ್ಮಣ್ ಮತ್ತಿತರರು ಉಪಸ್ಥಿತರಿದ್ದರು.

# ಗುರಿ ಇಟ್ಟುಕೊಂಡು ಸಾಧನೆ ಮಾಡಿ



**ಮೈಸೂರು:** ವಿದ್ಯಾರ್ಥಿಗಳು ಗುರಿ ಇಟ್ಟುಕೊಂಡು ಶ್ರದ್ಧೆಯಿಂದ ಶ್ರಮಪಟ್ಟರೆ ಸಾಧನೆ ಮಾಡಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಘವೇಂದ್ರ ಕರೆ ನೀಡಿದರು.

ಕುವೆಂಪುನಗರದಲ್ಲಿರುವ ಡಿ.ದೇವರಾಜು ಅರಸು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ನಡೆದ 2023-24ನೇ ಸಾಲಿನ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಇಂದು ಸರ್ಕಾರದ ಉನ್ನತ ಹುದ್ದೆಗಳಲ್ಲಿರುವ ಅಧಿಕಾರಿಗಳೆಲ್ಲಾ ಸರ್ಕಾರಿ ಶಾಲೆ ಬಿಸಿಎಂ ವಿದ್ಯಾರ್ಥಿನಿಲಯಗಳಲ್ಲಿ ಓದಿದಂತವರು. ಎಸ್ ಎಸ್ಎಲ್‌ಸಿ ಫೇಲಾದವರು ಸಹ ಇಂದು ಉನ್ನತ ಹುದ್ದೆಯಲ್ಲಿದ್ದಾರೆ. ಬಿಸಿಎಂ ಹಾಸ್ಟೆಲ್‌ಗೆ ಬರುವ ವಿದ್ಯಾರ್ಥಿಗಳೆಲ್ಲಾ ಸಾಮಾನ್ಯವಾಗಿ ಗ್ರಾಮೀಣ ಭಾಗದಿಂದ ಬಂದಿರುವ ವಿದ್ಯಾರ್ಥಿಗಳಾಗಿದ್ದು ಬಡತನದಿಂದ ಬಂದಿದವರಾಗಿದ್ದೀರಿ. ನಿಮ್ಮ ತಂದೆ ತಾಯಿಯವರು ನಿಮ್ಮನ್ನು ಕಷ್ಟಪಟ್ಟು ಓದಿಸಿದ್ದಾರೆ. ನಿಮ್ಮ ಮೇಲೆ ಅಪಾರ ವಿಶ್ವಾಸವಿಟ್ಟುಕೊಂಡಿದ್ದಾರೆ. ಆ ವಿಶ್ವಾಸಕ್ಕೆ ಧಕ್ಕೆ ಬರದ ಹಾಗೆ ನೋಡಿಕೊಳ್ಳಿರಿ. ಪದವಿ ಮುಗಿದ ನಂತರ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ತೆಗೆದುಕೊಂಡು ಉನ್ನತ ಹುದ್ದೆಗಳನ್ನು ಅಲಂಕರಿಸಿ ಎಂದು ಸಲಹೆ ನೀಡಿದರು. ಸಮಾರಂಭದಲ್ಲಿ ನಿಲಯಪಾಲಕರಾದ ಜಗದೀಶ್‌ಕೋರಿ, ಪರಶುರಾಂ, ಯಶವಂತ್, ನಾಗರಾಜ್, ನಾಗರತ್ನ, ರಮ್ಯ, ತೇಜಸ್ವಿನಿ, ಯಶೋಧ, ಪರಮೇಶ್ವರಪ್ಪ, ಭಾಗ್ಯಲಕ್ಷ್ಮಿ, ವಸಂತ ಹಾಜರಿದ್ದರು. ಇದೇ ಸಂದರ್ಭದಲ್ಲಿ ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.

# ಬೆಂಗಳೂರು ಪದವೀಧರ, ಕರ್ನಾಟಕ ಆಗ್ನೇಯ ಶಿಕಕರ ಕ್ಷೇತ್ರದ ಮತದಾರರ ಪಟ್ಟಿ ಪ್ರಕಟ

**ಬೆಂಗಳೂರು:** ಭಾರತ ಚುನಾವಣಾ ಆಯೋಗದ 2023ನೇ ಆಗಸ್ಟ್ 09, ವೇಳಾಪಟ್ಟಿಯ ಅನುಸಾರ ಬೆಂಗಳೂರು ಪದವೀಧರರ ಕ್ಷೇತ್ರ ಮತ್ತು ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ತಯಾರಿಸಲಾಗಿದ್ದು 2023ನೇ ಡಿಸೆಂಬರ್ 30 ರಂದು ಅಂತಿಮ ಮತದಾರರ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿರುತ್ತದೆ. ಪ್ರಸ್ತುತ ಭಾರತ ಚುನಾವಣಾ ಆಯೋಗದ 2024ನೇ ಮೇ 2ರ ಪ್ರಕಟಣೆಯಂತೆ ಬೆಂಗಳೂರು ಪದವಿಧರರ ಕ್ಷೇತ್ರ ಮತ್ತು ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಪರಿಷ್ಕರಿಸಿ 2024ನೇ ಮೇ 16ಕ್ಕೆ ಅಂತಿಮಗೊಳಿಸಿ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಮತದಾರರ ನೋಂದಣಾಧಿಕಾರಿಗಳು ತಿಳಿಸಿದ್ದಾರೆ.

# ಬರ ಪರಿಹಾರವನ್ನು ಸಾಲಕ್ಕೆ ಹೊಂದಾಣಿಕೆ ಮಾಡುವಂತಿಲ್ಲ

**ಮಂಡ್ಯ:** ರಾಜ್ಯ ಸರ್ಕಾರವು 2023-24 ನೇ ಸಾಲಿಗೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ತೀವ್ರ ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿದ್ದು ಈ ವರೆಗೆ 79,839 ರೈತರಿಗೆ 34.94 ಕೋಟಿ ಹಣವನ್ನು ಡಿಬಿಟಿ ಮೂಲಕ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗಿರುತ್ತದೆ. ಆದರೆ ಜಮೆಯಾದ ಹಣವನ್ನು ಬ್ಯಾಂಕುಗಳಲ್ಲಿ ರೈತರ ಸಾಲಗಳಿಗೆ ಹೊಂದಾಣಿಕೆ ಮಾಡಿಕೊಳ್ಳುತ್ತಿರುವುದಾಗಿ ದೂರುಗಳು ಬರುತ್ತಿದ್ದು, ಪ್ರಸ್ತುತ ಜಿಲ್ಲೆಯ ರೈತರು ತೀವ್ರ ಬರದಿಂದಾಗಿ ಆರ್ಥಿಕವಾಗಿ ಸಂಕಷ್ಟದಲ್ಲಿದ್ದು ಬ್ಯಾಂಕುಗಳು ಸದರಿ ಬರ ಪರಿಹಾರದ ಹಣವನ್ನು ರೈತರ ಯಾವುದೇ ಸಾಲಕ್ಕೆ ಹೊಂದಾಣಿಕೆ ಮಾಡದೆ ರೈತರಿಗೆ ಬರಪರಿಹಾರದ ಹಣವನ್ನು ನೀಡುವಂತೆ ಜಿಲ್ಲೆಯ ಎಲ್ಲಾ ಬ್ಯಾಂಕ್ ಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಮಂಡ್ಯ ಜಿಲ್ಲೆ ಜಿಲ್ಲಾಧಿಕಾರಿ ತಿಳಿಸಿರುತ್ತಾರೆ.

# ಬೇಸಿಗೆ ವಿಜ್ಞಾನ ಶಿಬಿರ

**ಬೆಂಗಳೂರು:** ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನಿಂದ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ 5 ದಿನಗಳ ವಿಶೇಷ ಬೇಸಿಗೆ ವಿಜ್ಞಾನ ಶಿಬಿರವನ್ನು ಮೇ 23 ರಿಂದ 27 ರವರೆಗೆ ಪ್ರತಿದಿನ ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಪ್ರೊ?ರ. ಎಂ.ಎ. ಸೇತುರಾವ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಉದ್ದೇಶಿತ ಶಿಬಿರದಲ್ಲಿ ಮಕ್ಕಳಿಗೆ ವಿಜ್ಞಾನ ಮಾದರಿಗಳನ್ನು ಸಿದ್ಧಪಡಿಸುವ ಹಾಗೂ ವಿವಿಧ ವೈಜ್ಞಾನಿಕ ಸಂಗತಿಗಳನ್ನು ಪ್ರಾತ್ಯಕ್ಷಿಕೆ ಮೂಲಕ ತಿಳಿಸಿಕೊಡಲಾಗುವುದು. ಪಠ್ಯಕ್ಕೆ ಪೂರಕವಾಗುವ ಹಲವಾರು ದೈನಂದಿನ ಚಟುವಟಿಕೆಗಳ ವೈಜ್ಞಾನಿಕ ಹಿನ್ನೆಲೆಯನ್ನು ಪ್ರಯೋಗಗಳ ಮೂಲಕ ಮಕ್ಕಳು ಅರಿಯಲು ಶಿಬಿರದಲ್ಲಿ ಅವಕಾಶ ನೀಡಲಾಗುತ್ತಿದೆ. ಈ ವಿಶೇಷ ಬೇಸಿಗೆ ವಿಜ್ಞಾನ ಶಿಬಿರದಲ್ಲಿ 6, 7, 8 ಹಾಗೂ 9ನೇ ತರಗತಿಯ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಶಿಬಿರಕ್ಕೆ ಮೊದಲು ಬಂದವರಿಗೆ ಆದ್ಯತೆಯ ಮೇರೆಗೆ ಗರಿಷ್ಠ 30 ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುವುದು. ಆಸಕ್ತ ಪಾಲಕರು ಹಾಗೂ ವಿದ್ಯಾರ್ಥಿಗಳು ಮೇ 22ರ ಒಳಗಾಗಿ ಖುದ್ದಾಗಿ ವಿಜ್ಞಾನಭವನ. ನಂ.24/2. 21ನೇ ಮುಖ್ಯ ರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು - 560 070 ಈ ವಿಳಾಸಕ್ಕೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 080-26718939 ಪ್ರಭು ಎಸ್. ಮಠ, ಮೊಬೈಲ್ ಸಂಖ್ಯೆ: 9448569245 ಗೆ ಸಂಪರ್ಕಿಸಬಹುದಾಗಿದೆ.

# ಇಂದು ವಿದ್ಯುತ್ ವ್ಯತ್ಯಯ

**ಮಂಡ್ಯ:** 66/11 ಕೆ.ವಿ ಬಸರಾಳು ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆಯನ್ನು ಮೇ 21 ರಂದು ಹಮ್ಮಿಕೊಳ್ಳಲಾಗಿದ್ದು, ಸದರಿ ದಿನದಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಬಸರಾಳು, ಶಿವಪುರ, ಬೇಬಿ, ಕಂಬದಹಳ್ಳಿ, ಬಿದರಕಟ್ಟೆ, ಮಾರಸಿಂಗನಹಳ್ಳಿ, ಅಂಕುಶಾಪುರ, ಬೆನ್ನಹಟ್ಟಿ, ಶಾನಭೋಗನಹಳ್ಳಿ, ಬೊಮ್ಮನಹಳ್ಳಿ, ಅನುಕುಪ್ಪೆ, ಮನುಗನಹಳ್ಳಿ, ಎಂ ಹಟ್ನ, ಗಣಿಗ, ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಮಂಡ್ಯ ಸೆಸ್ಕ್, ಕಾ ಮತ್ತು ಪಾ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ಕಾಣೆಯಾದವರ ಪತ್ತೆಗಾಗಿ

**ಮಂಡ್ಯ:** ಮಂಡ್ಯ ಸರಹದ್ದಿನ ಮರಕಾಡುದೊಡ್ಡಿ ಗ್ರಾಮದ ಪುಷ್ಪ ಎಚ್,ಎನ್ (32), ಮತ್ತು ಮಕ್ಕಳಾದ ಚಿರಂಜೀವಿ ಎಂ,ಎಸ್ (11), ವಿನೀತ್ ಎಂ,ಎಸ್ (9) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ. ಕಾಣೆಯಾದ ಮಹಿಳೆಯು 5.3 ಅಡಿ ಎತ್ತರ, ಸಾಧಾರಣ ಶರೀರ, ಗೋದಿ ಮೈ ಬಣ್ಣ, ಕಪ್ಪು ಬಣ್ಣದ ಉದ್ದನೆಯ ತಲೆ ಕೂದಲು, ದುಂಡುಮುಖ ಹೊಂದಿರುತ್ತಾರೆ ಮತ್ತು ಮಕ್ಕಳಾದ ಚಿರಂಜೀವಿ ಎಂ.ಎಸ್ (11) 3ಅಡಿ ಎತ್ತರ, ಸಾಧಾರನ ಶರೀರ, ಗೋದಿ ಮೈಬಣ್ಣ, ಕಪ್ಪು ತಲೆ ಕೂದಲು, ಕೋಲುಮುಖ ಹೊಂದಿರುವನು. ವಿನೀತ್ (9) 2.5 ಅಡಿ ಎತ್ತರ, ಸಾಧಾರಣ ಶರೀರ, ಬಿಳಿ ಮೈ ಬಣ್ಣ, ಕಪ್ಪು ತಲೆ ಕೂದಲು, ಕೋಲುಮುಖ ಹೊಂದಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 9480804800, 08232-224200 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆ ಠಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಚಾಮರಾಜೇಂದ್ರ ಮೃಗಾಲಯ ಸಾರ್ವಜನಿಕರ ವೀಕ್ಷಣೆಗೆ ಲಭ್ಯ

**ಬೆಂಗಳೂರು:** ಬೇಸಿಗೆ ರಜೆಯ ಪ್ರಯುಕ್ತ ಪ್ರವಾಸಿಗರು, ಜನಸಾಮಾನ್ಯರು ಹಾಗೂ ಸ್ಥಳೀಯರಿಗೆ ಮೃಗಾಲಯವನ್ನು ವೀಕ್ಷಿಸಲು ಅನುಕೂಲವಾಗುವಂತೆ ಮೇ 21 ರ ಮಂಗಳವಾರದಂದು ಶ್ರೀ ಚಾಮರಾಜೇಂದ್ರ ಮೃಗಾಲಯ ಹಾಗೂ ಕಾರಂಜಿಕೆರೆ ಪ್ರಕೃತಿ ಉದ್ಯಾನವನವನ್ನು ಸಾರ್ವಜನಿಕರ ವೀಕ್ಷಣೆಗೆ ಲಭ್ಯವಿದೆ ಎಂದು ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾನತೆಗೆ ಅನುಭವ ಮಂಟಪ ಕಟ್ಟಿದ ಬಸವಣ್ಣ



**ಹುಲ್ಲಹಳ್ಳಿ:** 12ನೇ ಶತಮಾನದಲ್ಲಿ ಬಸವಣ್ಣನವರು ಸಾಮಾಜಿಕ ಸಮಾನತೆಗಾಗಿ ಸಾಮಾಜಿಕ ಜಾಗೃತಿಯ ಅನುಭವ ಮಂಟಪ ಸ್ಥಾಪಿಸಿ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸಿದರು ಎಂದು ಚಾಮರಾಜನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕ ಡಾ.ಸುರೇಶ್.ಆರ್. ಎಸ್ ಹೇಳಿದರು.

ಹುಲ್ಲಹಳ್ಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಯುಎಸಿ ಮತ್ತು ಕನ್ನಡ ವಿಭಾಗದ ವತಿಯಿಂದ ಏರ್ಪಡಿಸಿದ ವಿಶ್ವಗುರು ಕ್ರಾಂತಿಕಾರಿ ಬಸವೇಶ್ವರರ ಜಯಂತಿಯ ಅಧ್ಯಕ್ಷತೆ ವಹಿಸಿ ಮಾತನಾಡಿದ, ವಚನ ಕ್ರಾಂತಿಯ ಮೂಲಕ ಸಮಾಜದಲ್ಲಿ ಮೂಢನಂಬಿಕೆಗಳನ್ನು ಹೋಗಲಾಡಿಸಲು ಪ್ರಯತ್ನಿಸಿದ ಮಹಾಕ್ರಾಂತಿ ಯೋಗಿ ವಚನಗಳ ಮೂಲಕ ವೇದದ ಸಾರವನ್ನು ಜನರಿಗೆ ತಿಳಿಸಿದ ಬಸವಣ್ಣನವರು ವೈದಿಕ ಧರ್ಮದಲ್ಲಿ ಸಾಮಾಜಿಕ ಅನಿಷ್ಠಗಳ ವಿರುದ್ಧ ಧ್ವನಿ ಎತ್ತಿ ಧರ್ಮ ಸುಧಾಕರಾದರು ಅನುಭವ ಎಂಬ ಮಂಟಪ ಸ್ಥಾಪಿಸಿ ಮಹಿಳೆಯರಿಗೆ ಸಮಾನತೆ ದೊರಕಿಸಿ ಕೊಟ್ಟ ಆದರ್ಶ ಪುರುಷರಾಗಿರುವ ಜಗಜ್ಯೋತಿ ಬಸವಣ್ಣನವರ ಆದರ್ಶಗಳನ್ನು ಎಲ್ಲರೂ ಮೈ ಕುಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಜೀವನದಲ್ಲಿ ಬೆಳಕು ಮೂಡಲು ಬಸವಣ್ಣನವರ ಚಿಂತನೆ ಸಂದೇಶ ವಚನಗಳ ಅಧ್ಯಯನ ಅತ್ಯಗತ್ಯ ಇದರಿಂದ ಜಗತ್ತಿನ ಭವಿಷ್ಯ ಜ್ಞಾನದತ್ತ ಬದಲಾವಣೆಯಾಗಲಿದೆ. ಬಸವಣ್ಣನವರು ಜ್ಞಾನ ಭಂಡಾರವಿದ್ದಂತೆ ಅವರ ಚಿಂತನೆ ಮತ್ತು ಮೌಲ್ಯಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕೆಂದರು.

ಸಾಂಸ್ಕೃತಿಕ ಹರಿಕಾರ ಬಸವಣ್ಣನವರ ವಚನಗಳು ಕರ್ನಾಟಕಕ್ಕೆ ಮಾತ್ರ ಸೀಮಿತವಾಗದೆ ಅವರು ನೀಡಿದ ವಚನಗಳ ಪುಸ್ತಕಗಳನ್ನು ಜಗತ್ತಿನಾದ್ಯಂತ ನೋಡಬಹುದು. ಕಾಯಕವೇ ಕೈಲಾಸ ಎಂಬ ತತ್ವವನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರೊ.ಪ್ರಾಂಶುಪಾಲ ನಾಗರಾಜು.ಬಿ.ಎಂ, ಗ್ರಂಥಪಾಲಕ ಡಾ.ಜಯಕುಮಾರ್, ಕನ್ನಡ ವಿಭಾಗದ ಮುಖ್ಯಸ್ಥ ಮಂಜುನಾಥ್ ಡಾ.ಲೋಕೇಶ್, ಡಾ.ಲೋಕೇಶ್, ಡಾ.ಬಿಂದು, ಲತಾ ಡಾ.ಶಿವರಾಜ್, ಡಾ.ಸಂಧ್ಯಾ ರಾಣಿ ಪ್ರೊ.ಚಿನ್ನಸ್ವಾಮಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ರಂಗಭೂಮಿಯಿಂದ ಶಿಸ್ತು ಕರಗತ



**ಮೈಸೂರು:** ರಂಗಭೂಮಿ ನಮಗೆ ಧೈರ್ಯ ಹಾಗೂ ಶಿಸ್ತನ್ನು ಕಲಿಸುತ್ತದೆ. ಜೀವನದಲ್ಲಿ ಎಲ್ಲವನ್ನು, ಎಲ್ಲರನ್ನು ಅರ್ಥಮಾಡಿಕೊಳ್ಳುವ ಸಾಮರ್ಥ್ಯವನ್ನು ರಂಗಭೂಮಿ ನಮಗೆ ಕಲಿಸಿಕೊಟ್ಟಿದೆ ಎಂದು ರಂಗಕರ್ಮಿ, ಕಲಾವಿದ ಯತೀಶ್.ಎನ್ ಕೊಳ್ಳೇಗಾಲ ತಿಳಿಸಿದರು.

ನಗರದ ಎಸ್‌ಬಿಆರ್‌ಆರ್ ಮಹಾಜನ ಪ್ರಥಮ ದರ್ಜೆ ಕಾಲೇಜಿನ (ಸ್ವಾಯತ್ತ) ಎವಿಸಿ-3 ಸಭಾಂಗಣದಲ್ಲಿ ಕನ್ನಡ ವಿಭಾಗ ಮತ್ತು ಪ್ರತಿಭಾ ವೇದಿಕೆ ಹಾಗೂ ಐಕ್ಯೂಎಸಿ ಸಹಯೋಗದೊಂದಿಗೆ ರಂಗಭೂಮಿ ಒಳನೋಟ ಎಂಬ ವಿಷಯ ಕುರಿತು ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಂಗಭೂಮಿ ಒಂದು ಸಾಮುದಾಯಿಕ ಕಲೆ. ಅದು ಮನುಷ್ಯನ ಪರಿಶ್ರಮ, ಶಿಸ್ತನ್ನು ಬಯಸುತ್ತದೆ. ಕಳೆದ ಇಪ್ಪತ್ತು ವರ್ಷದಿಂದ ನಾನು ರಂಗಭೂಮಿ ಕಲಾವಿದ. ರಂಗಭೂಮಿ ಒಂದು ಅದ್ಭುತ ವ್ಯಕ್ತಿತ್ವ ನಿರ್ಮಾಣ ಮಾಡುವ ವಲಯವಾಗಿದೆ ಎಂದು ಹೇಳಿದರು. ರಂಗಭೂಮಿ ಬದುಕುವ ಶೈಲಿ ನಿರ್ಮಾಣ ಮಾಡಿಕೊಡುತ್ತದೆ. ನಾಟಕದ ಚಟುವಟಿಕೆಗಳಲ್ಲಿ ನಮ್ಮನ್ನು ನಾವು ತೊಡಗಿಸಿಕೊಂಡಾಗ ನಾವು ಜೀವನ ಶೈಲಿ ರೂಢಿಸಿಕೊಳ್ಳುತ್ತೇವೆ. ರಂಗಭೂಮಿ ಜೀವನ ಕಲಿಸುವ ಅಪರೂಪದ ಪಾಠಶಾಲೆಯಾಗಿದೆ. ನಾಟಕ ಒಂದು ಕಾರ್ಯಕ್ರಮದಂತೆ ಅದನ್ನು ಯಶಸ್ವಿಗೊಳಿಸುವಲ್ಲಿ ನಮ್ಮೆಲ್ಲರ ವೈಯಕ್ತಿಕ ಆಸೆ-ಆಕಾಂಕ್ಷೆಗಳನ್ನು ಬದಿಗಿರಿಸಿ ದುಡಿಯಬೇಕು. ಒಂದು ನಾಟಕದ ಯಶಸ್ಸು ಇಡೀ ತಂಡದ ವಿಜಯವಾಗಿ ಕಾಣುತ್ತದೆ ಎಂದು ಹೇಳಿದರು.

ಒಂದು ಗುಂಪಿನೊಂದಿಗೆ ಬೆರೆಯುವ ಕಲೆಯನ್ನು ನಾಟಕ ಕಲಿಸುತ್ತದೆ. ಎಲ್ಲರನ್ನು ಬಿಟ್ಟು ಏಕಾಂಗಿ ತನದಲ್ಲಿ ಬದುಕುತ್ತಿರುವ ಮನುಷ್ಯನಿಗೆ, ರಂಗಭೂಮಿ ಇಂದು ಕೂಡಿ ಬದುಕುವ ಕಲೆಯನ್ನು ಕಲಿಸಿಕೊಡುತ್ತದೆ. ತಂಡ ಎಷ್ಟು ಸದೃಢವಾಗುತ್ತದೆಯೋ, ನಾಟಕವೂ ಅಷ್ಟು ಪರಿಣಾಮಕಾರಿಯಾಗಿ ರಂಗದ ಮೇಲೆ ಪ್ರದರ್ಶಿತವಾಗುತ್ತದೆ ಎಂದು ಅಭಿಪ್ರಾಯಿಸಿದರು.

ರಂಗಭೂಮಿ ಒಂದು ವ್ಯಕ್ತಿತ್ವ ನಿರ್ಮಾಣದ ಶಿಬಿರವಾಗಿಯೂ ಇಂದು ಬಳಕೆಗೊಳ್ಳುತ್ತಿದೆ. ನಿರಂತರ ಅಧ್ಯಯನದ ಕ್ರಮವನ್ನು ರಂಗಭೂಮಿ ನಮಗೆ ಕಲಿಸುತ್ತದೆ. ಸುಮಾರು ಇಪ್ಪತ್ತು ವರ್ಷದ ಅನುಭವ ರಂಗಭೂಮಿಯೊಡನೆ ನನಗಿದೆ. ನಾನು ಮೊದಲು ರಂಗಭೂಮಿಗೆ ಹೋಗುತ್ತೇನೆಂದು ತಿಳಿಸಿದಾಗ, ನಮ್ಮ ಮನೆಯಲ್ಲಿಯೂ ಎಲ್ಲರ ಮನೆಯಂತೆ ವಿರೋಧ ವ್ಯಕ್ತಪಡಿಸಿದರು. ಅದರೊಂದಿಗೆ ಮಡದಿ ಬಂದ ಮೇಲೆ ನನ್ನ ತಂದೆ ಮತ್ತಷ್ಟು ನನ್ನನ್ನು ರಂಗಭೂಮಿ ಕಾರಣದಿಂದ ದೂಷಿಸಿದರು. ಛಲ ಬಿಡದೇ ರಂಗಭೂಮಿಯನ್ನು ಆಶ್ರಯಿಸಿದ ಕಾರಣ ಒಂದು ಹಂತದ ಗೆಲ್ಲುವು ನನ್ನನ್ನು ಅಪ್ಪಿಕೊಂಡಾಗ ನಮ್ಮ ತಂದೆ ಸಾಯುವ ಕೊನೆಯ ಸಂದರ್ಭದಲ್ಲಿ ನನ್ನ ಮೇಲೆ ಅಭಿಮಾನಪೂರ್ಣದ ಭಾವನೆಯನ್ನು ವ್ಯಕ್ತಪಡಿಸಿದರು ಎಂದು ರಂಗಭೂಮಿಯೊಡನೆ ತಮ್ಮ ವೈಯಕ್ತಿಕ ಒಡನಾಟದ ಸಂಬಂಧವನ್ನು ಹಂಚಿಕೊಂಡರು. ರಂಗಭೂಮಿ ನನಗೆ ಜೀವನದ ಪ್ರೀತಿ ಕಲಿಸಿಕೊಟ್ಟಿದೆ. ಮನುಷ್ಯನ ಭಾವನೆಗಳನ್ನು ನಿರ್ಧರಿಸಿ ಅವುಗಳಿಗೆ ಸ್ಪಂದಿಸುವ ಅಭಿವ್ಯಕ್ತಿಯನ್ನು ರಂಗಭೂಮಿ ನಮಗೆ ಕಲಿಸಿಕೊಟ್ಟಿದೆ ಎಂದು ಹೇಳಿದರು. ರಂಗಭೂಮಿ ಭಾವನೆಗಳಿಗೆ ಸ್ಪಂದಿಸುವ ಸುಂದರ ವಲಯ ಎಂದು ಅಭಿಪ್ರಾಯಿಸಿದರು. ಕಾರ್ಯಕ್ರಮದಲ್ಲಿ ಮಹಾಜನ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲೆ ಡಾ.ಬಿ.ಆರ್ .ಜಯಕುಮಾರಿ, ಸಹಾಯಕ ಪ್ರಾಧ್ಯಾಪಕ ಸಿ.ಎಂ.ಕಿರಣ್ ಕುಮಾರ್, ಕನ್ನಡ ವಿಭಾಗದ ಮುಖ್ಯಸ್ಥ ಡಾ.ಎಚ್. ಆರ್.ತಿಮ್ಮೇಗೌಡ, ಸಹಾಯಕ ಪ್ರಾಧ್ಯಾಪಕ ಮನೋಜ್ ಕುಮಾರ್.ಜೆ, ಪ್ರತಿಭಾ ವೇದಿಕೆ ಸಂಚಾಲಕ ನಾಗೇಶ್. ಎಂ, ಕಾಲೇಜಿನ ಸಾರಂತ ತಂಡದ ಸಂಚಾಲಕ ರಾಧೇಶ್ ಉಪಸ್ಥಿತರಿದ್ದರು.

# ಹವಾಮಾನ ಬದಲಾವಣೆಯ ಪರಿಣಾಮ ಕುರಿತು ಪ್ರಬಂಧ ಸ್ಪರ್ಧೆ

**ರಾಮನಗರ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಬೆಂಗಳೂರು ಪರಿಸರ ಸಂಘ ಜಂಟಿಯಾಗಿ ಜೂನ್ 8 ರಂದು ವಿಶ್ವ ಪರಿಸರ ದಿನವನ್ನು ಆಯೋಜಿಸಿರುತ್ತಾರೆ. ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸೃಜನಶೀಲತೆ, ನಾವೀನ್ಯತೆ ಮತ್ತು ವಿಶ್ವ ಪರಿಸರ ದಿನಾಚರಣೆಯಲ್ಲಿ ವಿದ್ಯಾರ್ಥಿಗಳ ಸಕ್ರಿಯತೆಯನ್ನು ಉತ್ತೇಜಿಸಲು ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಇದು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು, ಮಣ್ಣು ಮತ್ತು ಭೂಮಿಯ ಮೇಲೆ ಹವಾಮಾನ ಬದಲಾವಣೆಯ ಪರಿಣಾಮಗಳ ಬಗ್ಗೆ ತಮ್ಮ ಕೊಡುಗೆ ನೀಡಲು ಅವಕಾಶವನ್ನು ಒದಗಿಸುತ್ತದೆ.

ಕರ್ನಾಟಕ ರಾಜ್ಯದ ಯಾವುದೇ ಮಂಡಳಿಯಲ್ಲಿ ಪ್ರಸ್ತುತ ದಾಖಲಾದ ಪ್ರೌಢಶಾಲಾ ವಿದ್ಯಾರ್ಥಿಗಳು ಈ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಕನ್ನಡ ಅಥವಾ ಇಂಗ್ಲಿಷ್ ಭಾಷೆಯಲ್ಲಿ ಪ್ರಬಂಧ ಸಲ್ಲಿಸಬಹುದು. ಒಂದು ಭಾಷೆಗೆ ಒಬ್ಬ ಸ್ಪರ್ಧಿಗೆ ಕೇವಲ ಒಂದು ಪ್ರಬಂಧವನ್ನು ಮಾತ್ರ ಸಲ್ಲಿಸಲು ಅವಕಾಶವಿದೆ. ಯಾವುದೇ ಸ್ಪರ್ಧಿಯು ಒಂದು ನಿರ್ದಿಷ್ಟ ಭಾಷೆಯಲ್ಲಿ ಒಂದಕ್ಕಿಂತ ಹೆಚ್ಚು ಪ್ರಬಂಧಗಳನ್ನು ಸಲ್ಲಿಸಿರುವುದು ಕಂಡುಬಂದರೆ ಅವರು ಸಲ್ಲಿಸಿದ ಎಲ್ಲಾ ಪ್ರಬಂಧಗಳನ್ನು ಅಮಾನ್ಯವೆಂದು ಪರಿಗಣಿಸಲಾಗುತ್ತದೆ. ಪ್ರಬಂಧದ ಕೊನೆಯಲ್ಲಿ ಹೆಸರು, ವಿಳಾಸ. ಸಂಪರ್ಕ ಸಂಖ್ಯೆ ಮತ್ತು ಇ-ಮೇಲ್ ವಿವರಗಳನ್ನು ಒದಗಿಸಬೇಕು. ಪ್ರಬಂಧವನ್ನು ಸಲ್ಲಿಸಲು ಕೊನೆಯ ದಿನಾಂಕ ಇದೇ ಮೇ 27 ಅಥವಾ ಅದಕ್ಕೂ ಮೊದಲು. ಮೂಲ ಪ್ರಬಂಧ ಮಾತ್ರ ಅರ್ಹ ಮತ್ತು ಬೇರೆ ಯಾವುದೇ ಸ್ಪರ್ಧೆ (ಗಳಿಗೆ) ಸಲ್ಲಿಸಿರಬಾರದು ಅಥವಾ ಬೇರೆ ರೀತಿಯಲ್ಲಿ ಪ್ರಕಟಿಸಿರಬಾರದು. ಕೃತಿಚೌರ್ಯಕ್ಕಾಗಿ ಎಲ್ಲಾ ಪ್ರಬಂಧಗಳನ್ನು ಪರಿಶೀಲಿಸಲಾಗುತ್ತದೆ. ಪ್ರಬಂಧವನ್ನು ಒಮ್ಮೆ ಸಲ್ಲಿಸಿದ ನಂತರ, ಸ್ಪರ್ಧಿಗಳಿಗೆ ಯಾವುದೇ ಪರಿಷ್ಕರಣೆಗಳನ್ನು ಮಾಡಲು ಅನುಮತಿಸಲಾಗುವುದಿಲ್ಲ. ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಬೆಂಗಳೂರು ಪರಿಸರ ಸಂಘ ರಚಿಸಿದ ತಜ್ಞರ ಸಮಿತಿಯು ಪ್ರಬಂಧಗಳನ್ನು ಮೌಲ್ಯಮಾಪನ ಮಾಡುತ್ತದೆ. ಸಮಿತಿಯ ನಿರ್ಧಾರವು ಅಂತಿಮವಾಗಿದ್ದು, ಎಲ್ಲರೂ ಇದಕ್ಕೆ ಬದ್ಧರಾಗಿರಬೇಕು. ಮೊದಲ ಮೂರು ಸ್ಥಾನ ಪಡೆದ ಪ್ರಬಂಧಗಳಿಗೆ ನಗದು ಬಹುಮಾನಗಳನ್ನು ನೀಡಲಾಗುವುದು. 1ನೇ ಬಹುಮಾನ 5,000 ರೂ.ಗಳು, 2ನೇ ಬಹುಮಾನ 3,000 ರೂ.ಗಳು ಮತ್ತು 3ನೇ ಬಹುಮಾನ 2.000 ರೂ.ಗಳು. ಇಂಗ್ಲಿಷ್ ಮತ್ತು ಕನ್ನಡ ಪ್ರಬಂಧಗಳಿಗೆ ಪ್ರತ್ಯೇಕವಾಗಿ ಬಹುಮಾನಗಳನ್ನು ನೀಡಲಾಗುವುದು. ಸ್ಪರ್ಧೆಯ ವಿಜೇತರನ್ನು ಇಮೇಲ್ ಮೂಲಕ ಸಂಪರ್ಕಿಸಲಾಗುತ್ತದೆ.

# ವಿಫಲ ಕೊಳವೆಬಾವಿ ಮುಚ್ಚಲು ಜಿಲ್ಲಾಧಿಕಾರಿ ಡಾ.ಎನ್. ಶಿವಶಂಕರ್ ಅಧಿಕಾರಿಗಳಿಗೆ ಸೂಚನೆ

**ಬೆಂಗಳೂರು ಗ್ರಾಮಾಂತರ:** ಪ್ರಸ್ತುತ ಮಳೆ ಪ್ರಮಾಣ ಕಡಿಮೆಯಾಗಿದ್ದು, ಬರಗಾಲ ಇರುವುದರಿಂದ ಅಂತರ್ಜಲ ಬಳಕೆ ಹೆಚ್ಚಾಗಿರುವ ಕಾರಣ ಹಾಗೂ ಭೂವೈಜ್ಞಾನಿಕ ಕಾರಣಗಳಿಂದ ಕೊಳವೆಬಾವಿಗಳು ವಿಫಲವಾಗುತ್ತಿವೆ. ವಿಫಲ ಕೊಳವೆಬಾವಿಗಳನ್ನು ಸರಿಯಾದ ಕಾಲಕ್ಕೆ ಮುಚ್ಚದೇ ಇರುವುದರಿಂದ ಈಗಾಗಲೇ ಅನೇಕ ಅವಘಡಗಳು ಮರುಕಳಿಸುತ್ತಿವೆ.

ವಿಫಲ/ನಿರುಪಯುಕ್ತ ಕೊಳವೆಬಾವಿಗಳನ್ನು ಸುರಕ್ಷಿತವಾಗಿ ಮುಚ್ಚಬೇಕು. ನಗರ, ಪಟ್ಟಣ ಪ್ರದೇಶಗಳಲ್ಲಿ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೊಳವೆ ಬಾವಿ ಕೊರೆಯುವ ಮುನ್ನ ಜಮೀನಿನ ಮಾಲೀಕರು ಮತ್ತು ರೀಗ್ ಮಾಲೀಕರು ಸಂಬಂಧಪಟ್ಟ

ನಗರ, ಪಟ್ಟಣ, ಗ್ರಾಮ ಪಂಚಾಯತಿಗೆ ಕೊಳವೆಬಾವಿ ಕೊರೆಯಿಸುವ ಕುರಿತು ಮಾಹಿತಿಯನ್ನು ನೀಡಬೇಕಾಗಿರುತ್ತದೆ. ಅದೇ ರೀತಿ ಜಮೀನಿನ ಮಾಲೀಕರು ಮತ್ತು ರಿಗ್ ಮಾಲೀಕರು ಕೊಳವೆಬಾವಿ ವಿಫಲವಾದಲ್ಲಿ ಸಂಬಂಧಪಟ್ಟ ನಗರ, ಪಟ್ಟಣ, ಗ್ರಾಮ ಪಂಚಾಯತಿಗೆ ಮಾಹಿತಿ ನೀಡಬೇಕಾಗಿರುತ್ತದೆ. ನಗರ, ಪಟ್ಟಣ ಪ್ರದೇಶಗಳಲ್ಲಿನ ಕ್ಷೇತ್ರ, ಅಧಿಕಾರಿಗಳು, ಗ್ರಾಮ ಪಂಚಾಯತಿಯ ಪಿ.ಡಿ.ಒ, ಗ್ರಾಮ ಪಂಚಾಯತ್‌ನ ಕಾರ್ಯದರ್ಶಿ ಇವರು ವಿಫಲ/ನಿರುಪಯುಕ್ತ/ದುರಸ್ಥಿಯಲ್ಲಿರುವ ಕೊಳವೆಬಾವಿಗಳ ಬಗ್ಗೆ ನಿಗಾವಹಿಸಿ, ಸಂಭವಿಸಬಹುದಾದ ಅಪಘಾತಗಳನ್ನು ತಡೆಯಲು ಪೂರ್ಣ ಪ್ರಮಾಣದಲ್ಲಿ ಮುಚ್ಚಲ್ಪಟ್ಟಿರುವ ಬಗ್ಗೆ ಖಚಿತಪಡಿಸಿಕೊಂಡು, ವಹಿಯಲ್ಲಿ ಸರಿಯಾದ ರೀತಿಯಲ್ಲಿ ದಾಖಲಿಸಿ ಮಾಹಿತಿ ನೀಡಬೇಕಾಗಿರುತ್ತದೆ. ಇದೇ ರೀತಿ ನಗರ ಪಟ್ಟಣ ಪ್ರದೇಶದಲ್ಲಿ ಆಯಾ ಸಂಬಂಧಪಟ್ಟ ವಾರ್ಡ್ ಇಂಜಿನಿಯರ್ ಸಹ ಕ್ರಮ ವಹಿಸಬೇಕಾಗಿರುತ್ತದೆ.

ಆದ್ದರಿಂದ ವಿಫಲ ಕೊಳವೆಬಾವಿಗಳನ್ನು ಮುಚ್ಚಿಸಲು ನಗರ, ಪಟ್ಟಣ ಪ್ರದೇಶದಲ್ಲಿ ಮತ್ತು ಗ್ರಾಮೀಣ ಪ್ರದೇಶದಲ್ಲಿ ಬರುವ ಸ್ಥಳೀಯ ಅಧಿಕಾರಿಗಳಿಗೆ ಸರ್ಕಾರದ ಸುತ್ತೋಲೆಗಳನ್ವಯ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿರುತ್ತದೆ. ಪ್ರಸ್ತುತ ಬರಗಾಲವಿರುವುದರಿಂದ ಕೊಳವೆಬಾವಿಗಳು ವಿಫಲವಾಗುವ ಸಂಭವ ಹೆಚ್ಚಿರುವುದರಿಂದ ವಿಫಲ ಕೊಳವೆಬಾವಿಗಳು ಯಾವುದಾದರೂ ಇದ್ದಲ್ಲಿ ತಕ್ಷಣವೇ ಮುಚ್ಚಲು ಕ್ರಮ ಕೈಗೊಳ್ಳುವಂತೆ ಹಾಗೂ ಸದರಿ ವಿಫಲ ಕೊಳವೆಬಾವಿ ಮುಚ್ಚದೇ ಇರುವ ರಿಗ್ ಮಾಲೀಕರು ಮತ್ತು ಜಮೀನು ಮಾಲೀಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸುವುದು.

# ಮಳೆ ವಿಪತ್ತು ನಿರ್ವಹಣೆಗೆ ಸಕಲ ಸಿದ್ಧತೆ

**ಬೆಂಗಳೂರು ಗ್ರಾಮಾಂತರ:** ಮುಂಗಾರು ಪೂರ್ವ ಮಳೆಯಿಂದಾಗುವ ವಿಪತ್ತು ನಿರ್ವಹಿಸಲು ಜಿಲ್ಲಾಡಳಿತ ವತಿಯಿಂದ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ಅವರು ಹೇಳಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ಇಂದು ನಡೆದ ಬರ ನಿರ್ವಹಣೆ ಹಾಗೂ ಪೂರ್ವ ಮುಂಗಾರು ಮಳೆಯ ಸಿದ್ಧತೆ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಾದ್ಯಂತ ಮುಂಗಾರು ಪೂರ್ವ ಉತ್ತಮ ಮಳೆಯಾಗುತ್ತಿದ್ದು, ರೈತರ ಜಮೀನುಗಳಿಗೆ ಹಾಗೂ ಜನನಿಬಿಡ ಪ್ರದೇಶಗಳಿಗೆ ನೀರು ನುಗ್ಗುವುದನ್ನು ತಪ್ಪಿಸಲು ಮಳೆ ನೀರು ಸರಾಗವಾಗಿ ಹರಿದು ಹೋಗಲು ಜಿಲ್ಲೆಯ ನಗರ ಪ್ರದೇಶಗಳಲ್ಲಿ ಹಾಗೂ ಗ್ರಾಮೀಣ ಪ್ರದೇಶದಲ್ಲಿನ ಚರಂಡಿ, ರಾಜ ಕಾಲುವೆಗಳ ತ್ಯಾಜ್ಯವನ್ನು ಒಂದು ವಾರದೊಳಗೆ ತೆರವುಗೊಳಿಸಿ ವರದಿ ನೀಡಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಕುಡಿಯುವ ನೀರಿನ ಸಮಸ್ಯೆ ಉಂಟಾಗುವ ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಿ ನೀರು ಪೂರೈಸಲು ಮೊದಲ ಆದ್ಯತೆ ನೀಡಲಾಗಿದೆ. ಅವಶ್ಯವಿದ್ದಲ್ಲಿ ಖಾಸಗಿ ಟ್ಯಾಂಕರ್ಗಳ ಮೂಲಕ ನೀರನ್ನು ಪೂರೈಸಲು ಕ್ರಮ ವಹಿಸಿ. ಕುಡಿಯುವ ನೀರು ಸಮಸ್ಯೆ ಕಂಡುಬಂದಲ್ಲಿ ತಕ್ಷಣ ಜಿಲ್ಲಾಡಳಿತ ಗಮನಕ್ಕೆ ತರಬೇಕು. ಸರ್ಕಾರಿ ಆಸ್ಪತ್ರೆಗಳಲ್ಲಿ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮ ವಹಿಸಿ ಎಂದು ಹೇಳಿದರು. ರೈತರು ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದು ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಮರ್ಪಕವಾಗಿ ರೈತರಿಗೆ ಸಿಗುವಂತೆ ಕ್ರಮ ಕೈಗೊಳ್ಳಿ ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಮುಂಗಾರು ಪೂರ್ವ ಮಳೆಯಿಂದ 14.92 ಹೆಕ್ಟೇರ್ ತೋಟಗಾರಿಕೆ ಬೆಳೆ ನಾಶವಾಗಿದೆ. ಪ್ರಮುಖವಾಗಿ ಬಾಳೆ, ಮಾವು, ತರಕಾರಿ ಬೆಳೆ ಹಾಳಾಗಿದೆ ಎಂದು ತೋಟಗಾರಿಕೆ ಇಲಾಖೆ ನಿರ್ದೇಶಕರು ಮಾಹಿತಿ ನೀಡಿದರು. ಬರ ಪರಿಹಾರ ಹಣ ಅರ್ಹ ರೈತರಿಗೆ ನೀಡಲಾಗಿದೆ. ಬೆಳೆ ನಷ್ಟ ಆಗಿರುವ ಪ್ರದೇಶಗಳಲ್ಲಿ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ವರದಿ ಸಿದ್ಧಪಡಿಸಿದ ನಂತರ ಶೀಘ್ರ ಪರಿಹಾರ ನೀಡಲು ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಹೇಳಿದರು. ಉಪವಿಭಾಗಾಧಿಕಾರಿ ಶ್ರೀನಿವಾಸ್ ಎಂ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

# ಶಿಕ್ಷಕರ ಬೇಡಿಕೆ ಈಡೇರಿಸಲು ಪ್ರಾಮಾಣಿಕ ಪ್ರಯತ್ನ



**ಮೈಸೂರು:** ಶಿಕ್ಷಣ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಸದನದ ಒಳಗೆ-ಹೊರಗೆ ಪ್ರಾಮಾಣಿಕವಾಗಿ ಹೋರಾಟ ಮಾಡಿದ್ದೇನೆ. 24 ವರ್ಷಗಳಿಂದ ಸಣ್ಣ ಕಪ್ಪುಚುಕ್ಕೆ ಇಲ್ಲದೆ ಸ್ಪಂದಿಸಿ ಕೆಲಸ ಮಾಡಿದ್ದೇನೆ. ಕಾಂಗ್ರೆಸ್ ಸರ್ಕಾರದಲ್ಲಿ ಹಲವಾರು ಬೇಡಿಕೆಗಳನ್ನು ಈಡೇರಿಸಲು ಮತ್ತೊಮ್ಮೆ ಗೆಲ್ಲಿಸುವಂತೆ ದಕ್ಷಿಣ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮರಿತಿಬ್ಬೇಗೌಡ ಹೇಳಿದರು.

ನಗರದ ವಿದ್ಯಾವರ್ಧಕ ಇಂಜಿನಿಥಿರಿಂಗ್ ಕಾಲೇಜಿಗೆ ಭೇಟಿ ನೀಡಿ ಶಿಕ್ಷಕರ ಮತದಾರರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಜೂನ್ 3ರಂದು ನಡೆಯಲಿರುವ ಚುನಾವಣೆಯಲ್ಲಿ ನನ್ನನ್ನು ಬೆಂಬಲಿಸುವಂತೆ ಶಿಕ್ಷಕರಲ್ಲಿ ಮನವಿ ಮಾಡಿದರು. ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನಲ್ಲಿ ಗುಣಮಟ್ಟದ ಶಿಕ್ಷಣ ನೀಡಿದ್ದರಿಂದ ದೇಶದಲ್ಲಿ ಗಮನ ಸೆಳೆದಿದೆ. ಸ್ಪರ್ಧಾತ್ಮಕ ಯುಗದಲ್ಲಿ ಗುಣಮಟ್ಟದ ಶಿಕ್ಷಣ ನೀಡಿದರೆ ಮಕ್ಕಳ ಬೇಡಿಕೆ ಹೆಚ್ಚಾಗಿದೆ. ಸರ್ಕಾರದ ನೀತಿಗಳಿಗೆ ಹೊಂದಾಣಿಕೆ ಮಾಡಿಕೊಂಡು ಸಾಗಬೇಕಿದೆ. ಸರ್ಕಾರ ಗುಣಮಟ್ಟದ ಶಿಕ್ಷಣಕ್ಕಾಗಿ ಹಲವಾರು ಬದಲಾವಣೆ ಮಾಡಿದಾಗ ಹೊಂದಿಕೊಂಡು ಬೋಧನೆ ಮಾಡಬೇಕಿದೆ. ತಾಂತ್ರಿಕ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಇನ್ನೂರಕ್ಕೂ ಹೆಚ್ಚು ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಿವೆ. ಪ್ರತಿದಿನ ಹೊಸ ಹೊಸ ಆವಿಷ್ಕಾರ ನಡೆಯುತ್ತಿದೆ. ಆಧುನಿಕ ಸೌಲಭ್ಯಗಳನ್ನು ಕಲ್ಪಿಸಿ ಸಂಶೋಧನೆ ನಡೆಯುತ್ತಿದೆ ಎಂದರು. ಕಳೆದ ನಾಲ್ಕು ಚುನಾವಣೆಯಿಂದಲೂ ನನ್ನನ್ನು ಬೆಂಬಲಿಸಿಕೊಂಡು ಬರಲಾಗಿದೆ. ಪಕ್ಷ ನೆಪಮಾತ್ರವಾದರೂ ಶಿಕ್ಷಕರು ನನ್ನ ಮೇಲೆ ಇಟ್ಟಿರುವ ನಂಬಿಕೆಯಿಂದ ಜಯಗಳಿಸಿ ಕೆಲಸ ಮಾಡುತ್ತಾ ಬಂದಿದ್ದೇನೆ. ಶಾಸನ ಸಭೆಯಲ್ಲಿ ಇಂಜಿನಿಯರಿಂಗ್, ಐಟಿಐ, ವಿಶ್ವವಿದ್ಯಾಲಯ, ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಕರ ಸಮಸ್ಯೆಗಳನ್ನು ಪ್ರಸ್ತಾಪಿಸಿ ನ್ಯಾಯ ಒದಗಿಸುವ ಕೆಲಸ ಮಾಡಿದ್ದೇನೆ. ಶಿಕ್ಷಕರ ನ್ಯಾಯಯುತ ಬೇಡಿಕೆ ಬಗ್ಗೆ ಯಾವುದೇ ರಾಜಿ ಮಾಡಿಕೊಳ್ಳದೆ ಸದನದ ಒಳಗೆ ಮತ್ತು ಹೊರಗೆ ಕೆಲಸ ಮಾಡಿದ್ದೇನೆ ಎಂದರು. ಐಟಿ-ಬಿಟಿಯಲ್ಲಿ ಕರ್ನಾಟಕದ ಕಡೆಗೆ ನೋಡುವಂತೆ ಮಾಡಿದೆ. ಸ್ವಾಯತ್ತತೆ ಪಡೆದುಕೊಂಡಿರುವ ಕಾರಣ ಮುಂದೆ ಪ್ರತ್ಯೇಕ ವಿವಿಯ ಸ್ಥಾನವನ್ನು ಹೊಂದಲಿದೆ. ನಾಲ್ಕು ಜಿಲ್ಲೆಗಳ 28 ಕ್ಷೇತ್ರದಲ್ಲಿ ಪ್ರೋತ್ಸಾಹ ಬೆಂಬಲ ನೀಡಿರುವ ಕಾರಣ ಅತ್ಯಧಿಕ ಮತಗಳ ಅಂತರದಿಂದ ಗೆಲುವು ಸಾಧಿಸುವ ವಿಶ್ವಾಸ ಇದೆ ಎಂದು ನುಡಿದರು. ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪ ಗೌಡ, ಕಾರ್ಯದರ್ಶಿ ಪಿ.ವಿಶ್ವನಾಥ್ ಹಾಜರಿದ್ದರು. ಇದಕ್ಕೂ ಮೊದಲು ಕಡಕೊಳದಲ್ಲಿರುವ ಮಹಾರಾಜ ತಾಂತ್ರಿಕ ಕಾಲೇಜು ಸೇರಿದಂತೆ ಅನೇಕ ಕಾಲೇಜುಗಳಿಗೆ ತೆರಳಿ ಪ್ರಚಾರ ನಡೆಸಿ ಮತಯಾಚಿಸಿದರು.

# 20 ದಿನಗಳಲ್ಲಿ ಪರಿಹಾರ ನೀಡದಿದ್ದರೆ ಹೋರಾಟ



**ಮೈಸೂರು:** 20 ದಿನದಲ್ಲಿ ರೈತರಿಗೆ ಬರ ಪರಿಹಾರವನ್ನು ನ್ಯಾಯಯುತವಾಗಿ ಬಿಡುಗಡೆ ಮಾಡದಿದ್ದರೆ ರಾಜ್ಯಾದ್ಯಂತ ಹೋರಾಟ ಮಾಡುವುದಾಗಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಎಚ್ಚರಿಕೆ ನೀಡಿದರು.

ಜಿಲ್ಲೆಯಾದ್ಯಂತ ಮಳೆ ಹಾಗೂ ಬಿರುಗಾಳಿ ಹಾನಿಯಿಂದ ರೈತರ ದನ, ಕರು ಕೊಟ್ಟಿಗೆ, ಕೋಳಿ ಫಾರಂ, ಬಾಳೆ ಬೆಳೆ, ತರಕಾರಿ ಬೆಳೆ ನಾಶವಾಗಿದೆ. ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಕೂಡಲೆ ನಷ್ಟ ಪರಿಹಾರ ಬಿಡುಗಡೆಗೊಳಿಸುವಂತೆ ಜಿಲ್ಲಾಡಳಿತವನ್ನು ಒತ್ತಾಯಿಸ ಲಾಯಿತು. ನಂತರ ರೈತರ ಸಭೆಯಲ್ಲಿ ಮಾತನಾಡಿದ ಅವರು, ಬರ ಹಾಗೂ ಮಳೆ ಹಾನಿ, ಬೆಳೆ ನಷ್ಟ ಪರಿಹಾರ ನ್ಯಾಯಯುತವಾಗಿ ನೀಡಲು ಸರ್ಕಾರಕ್ಕೆ ಸಾಧ್ಯವಾಗದಿದ್ದರೆ ಎಲ್ಲಾ ಬೆಳೆಗಳಿಗೂ ಬೆಳೆ ವಿಮೆ ಜಾರಿ ಮಾಡಿ ಈ ಮೂಲಕ ವಿಮಾ ಪರಿಹಾರ ಕೊಡಿಸಲಿ. ನಾಟಕೀಯವಾಗಿ ರೈತರ ಬಗ್ಗೆ ಮೊಸಳೆ ಕಣ್ಣೀರು ಸುರಿಸುವುದು ಬೇಡ. ರಾಜ್ಯದ ಎಲ್ಲಾ ಕೆರೆಗಳ ಊಳು ತೆಗೆಸಿ ರೈತರ ಜಮೀನುಗಳಿಗೆ ಸರಬರಾಜು ಮಾಡಿ ಭೂಮಿ ಫಲವತ್ತತೆಗೆ ಒತ್ತು ನೀಡಲು ಕಾರ್ಯ ಯೋಜನೆ ರಾಜ್ಯ ಸರ್ಕಾರ ಸಮರೋಪಾದಿಯಲ್ಲಿ ಕೈಗೊಳ್ಳಲಿ ಎಂದು ಆಗ್ರಹಿಸಿದರು.

ಕಾವೇರಿ ಅಚ್ಚುಕಟ್ಟು ಭಾಗದಲ್ಲಿ ಮಳೆ ಕಡಿಮೆಯಾಗಿರುವ ಕಾರಣ ನಾಲೆಗಳಿಗೆ ನೀರು ಹರಿಸಲು ಸಾಧ್ಯವಿಲ್ಲ. ಯಾರು ಬೆಳೆ ಬೆಳೆಯಬಾರದು ಎಂದು ಅಧಿಸೂಚನೆ ಹೊರಡಿಸಿದ ಸರ್ಕಾರ ಈ ಭಾಗದ ಎಲ್ಲಾ ತಾಲೂಕು ಬರಗಾಲ ಎಂದು ಘೋಷಣೆ ಮಾಡಿದೆ. ಇದೇ ಸರ್ಕಾರ ಬರಗಾಲದ ಬೆಳೆ ನಷ್ಟ ಅಂದಾಜು ಸಮೀಕ್ಷೆ ಮಾಡಿ ವರದಿ ಕಳಿಸಿ ಎಂದು ಸೂಚಿಸಿದೆ. ಈ ಕಾರಣ ಕಾವೇರಿ ಅಚ್ಚುಕಟ್ಟು ಭಾಗದ ಬಹುತೇಕ ರೈತರಿಗೆ ಬರ ಪರಿಹಾರ ನಷ್ಟ ಸಿಕ್ಕಿಲ್ಲ ಇದು ಸರ್ಕಾರದ ಇಬ್ಬಗೆ ನೀತಿಯಾಗಿದೆ ಎಂದು ಕಿಡಿ ಕಾರಿದರು.

ಎನ್‌ಆರ್‌ಇಜಿ ಯಿಂದ ಕೆಲಸ ಮಾಡಿದ ಕಾರ್ಮಿಕರಿಗೆ ಮೂರು ತಿಂಗಳಾದರೂ ಹಣ ಬಿಡುಗಡೆಯಾಗಿಲ್ಲ. ಖಾಸಗಿ ಫೈನಾನ್ಸ್ ಗಳು ಸಾಲ ವಸೂಲಾತಿಗಾಗಿ ಖಾಸಗಿ ಗೂಂಡಾಗಳ ಬಲ ಪ್ರಯೋಗ ನಿಲ್ಲಿಸಬೇಕು ಎಂದು ಸಭೆಯಲ್ಲಿ ಒತ್ತಾಯಿಸಲಾಯಿತು.

ಸಭೆಯಲ್ಲಿ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಕಿರಗಸೂರ ಶಂಕರ್, ಉಡಿಗಾಲ ರೇವಣ್ಣ, ಬರಡನಪುರ ನಾಗರಾಜ್, ಮಾರ್ಬಳ್ಳಿ ನೀಲಕಂಠಪ್ಪ, ಬಿ.ಪಿ.ಪರಶಿವಮೂರ್ತಿ, ಕುರುಬೂರ್ ಸಿದ್ದೇಶ್, ಲಕ್ಷ್ಮೀಪುರ ವೆಂಕಟೇಶ್, ದೇವನೂರು ವಿಜೇಂದ್ರ, ರಾಜೇಶ, ಸುನೀಲ್, ಅಂಬಳೆ ಮಂಜುನಾಥ, ರೂಪ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಶೈಕ್ಷಣಿಕ ಪ್ರಗತಿ ನಾಡಿನ ಅಭಿವೃದ್ಧಿಯ ಸಂಕೇತ

**ಪಾಂಡವಪುರ:** ಗ್ರಾಮೀಣ ಮಕ್ಕಳ ಶೈಕ್ಷಣಿಕ ಪ್ರಗತಿ ನಾಡಿನ ಅಭಿವೃದ್ಧಿಯ ಸಂಕೇತವಾಗಿದೆ ಎಂದು ಹಿರಿಯ ಸಾಹಿತಿ ಡಾ.ಬೋರೇಗೌಡ ಚಿಕ್ಕಮರಳಿ ಹೇಳಿದರು.



ತಾಲೂಕಿನ ಕುಂತಿಬೆಟ್ಟದ ಕುವೆಂಪು ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಹೆಚ್ಚಿನ ಅಂಕ ಗಳಿಸಿದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ನಾಗರಿಕ ಶ್ರೇಯಸ್ಸಿಗೆ ಕಾರಣವಾಗುತ್ತಾರೆ. ಸಾಮಾನ್ಯವಾಗಿ ಮುಂದಿನ ತರಗತಿಗೆ ಹೋಗುತ್ತಿದ್ದಂತೆಯೇ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿಯಲ್ಲಿ ಹಿಂದೆ ಬೀಳುವುದು ಸಹಜ. ವಯಸ್ಸು ಹೆಚ್ಚಾದಂತೆ, ತರಗತಿಯಿಂದ ತರಗತಿಗೆ ಹೋದಂತೆ ವಿದ್ಯಾರ್ಥಿಗಳು ಇನ್ನು ಹೆಚ್ಚು ಶ್ರಮ ಪಡಬೇಕು. ಶೈಕ್ಷಣಿಕ ಪ್ರಗತಿ ಸಾಧಿಸಿ ಮುಂದೆ ಬರಬೇಕೆಂಬ ಛಲ, ಹಠ ಮನಸ್ಸಿನಲ್ಲಿ ಮೂಡಬೇಕು ಎಂದರು.

ಶಿಕ್ಷಣ ಹಾಗೂ ಬದುಕಿನ ರಂಗದಲ್ಲಿ ಮೇಲ್ಮಟ್ಟಕ್ಕೆ ಹೋಗಲು ಪ್ರಯತ್ನಿಸಬೇಕು. ಸಾಮಾಜಿಕ ಜಾಲತಾಣಗಳನ್ನು ವಿದ್ಯಾರ್ಥಿಗಳು ಸಕಾರಾತ್ಮಕ ನೆಲೆಗಟ್ಟಿನಲ್ಲಿ ತೆಗೆದುಕೊಂಡು ತಮ್ಮ ಭವಿಷ್ಯ ಉಜ್ವಲಗೊಳಿಸಿಕೊಳ್ಳುವ ಜತೆಗೆ ಪ್ರಗತಿ ಸಾಧಿಸಬೇಕು ಎಂದು ಕಿವಿಮಾತು ಹೇಳಿದರು. ವಿದ್ಯಾರ್ಥಿಗಳಿಗೆ ಮೊಬೈಲ್ ಬಳಕೆಯು ಅವರ ಶೈಕ್ಷಣಿಕ ಅಭಿವೃದ್ಧಿಗೆ ಕಾರಣಬೇಕೆ ಹೊರತು ಶೈಕ್ಷಣಿಕ ಹಿಮ್ಮುಖವಾಗಬಾರದು. ಶೈಕ್ಷಣಿಕ ಪ್ರಗತಿಗೆ ಪೂರಕವಾಗುವ ರೀತಿಯಲ್ಲಿ ಮೊಬೈಲ್ ಬಳಕೆ ಮಾಡಬೇಕು ಎಂದರು.

ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿ ಸಿ.ಎಂ.ಚನ್ನೇಗೌಡ ಮಾತನಾಡಿ, ಈ ವರ್ಷದ ಎಸ್‌ಎಸ್‌ಎಲ್‌ಸಿ ಫಲಿತಾಂಶ ನೈಜವಾದುದಾಗಿದೆ. ವಿದ್ಯಾರ್ಥಿಗಳು ಕಠಿಣ ಅಭ್ಯಾಸ ನಡೆಸಿ ಉತೀರ್ಣರಾಗಿದ್ದಾರೆ. ಕೆಲವು ಮಕ್ಕಳು ಮನೆ ಹಾಗೂ ಗದ್ದೆ ಕೆಲಸ ಮಾಡಿಕೊಂಡು ಅಭ್ಯಾಸ ಮಾಡಿ ಉತ್ತಮ ಅಂಕ ಪಡೆದಿದ್ದಾರೆ. ನಮ್ಮ ಶಾಲೆಗೆ 100ರಷ್ಟು ಫಲಿತಾಂಶ ಬಂದಿದೆ. ಆದರೆ ಮಕ್ಕಳು ಮತ್ತಷ್ಟು ಶ್ರಮ ಹಾಕಿದ್ದರೆ ನಾಲ್ಕೈದು ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ಬರುತ್ತಿದ್ದರು ಎಂದರು.

ಉಪಾಧ್ಯಕ್ಷ ಡಿ.ಕೆ.ದೇವೇಗೌಡ ಮಾತನಾಡಿ, ಭವಿಷ್ಯ ಉಜ್ವಲವಾಗಲು ವಿದ್ಯಾರ್ಥಿಗಳು ಗುರಿ ಇಟ್ಟುಕೊಳ್ಳಬೇಕು. ಗುರಿ ಸಾಧಿಸಲು ಶ್ರದ್ಧೆ ಇರಬೇಕು. ಸಾಧನೆ ಮಾಡಲೇಬೇಕೆಂದರೆ ವಿದ್ಯಾರ್ಥಿಗಳಲ್ಲಿ ನಿರ್ದಿಷ್ಟ ಗುರಿ, ನಿಲುವು ಇದ್ದರೆ ಯಾವುದೂ ಕಷ್ಟವಾಗಲಾರದು. ಮಾನವೀಯ ಗುಣಗಳನ್ನು ಬೆಳೆಸಿಕೊಂಡು ವಿದ್ಯಾರ್ಥಿಗಳು ಮತ್ತಷ್ಟು ಸಾಧನೆ ಮಾಡುವ ಮೂಲಕ ಪೋಷಕರ ಜತೆಗೆ ವಿದ್ಯಾಸಂಸ್ಥೆಗೂ ಗೌರವ ತಂದುಕೊಡಬೇಕು ಎಂದರು.

# ಹಿಂದುಳಿದ ವರ್ಗಕ್ಕೆ ಅನ್ಯಾಯ ಆರೋಪ

**ಎಚ್.ಡಿ.ಕೋಟೆ:** ಶಿಕ್ಷಣ ಇಲಾಖೆ ಸೇರಿದಂತೆ ಎಲ್ಲ ಇಲಾಖೆಗಳಲ್ಲೂ ಭ್ರಷ್ಟಚಾರ ಮೇರೆ ಮೀರಿದೆ, ಅಸೆಂಬ್ಲಿ ಎಲೆಕ್ಷನ್ ವೇಳೆ ನಮ್ಮ ಸರ್ಕಾರ ಬಂದರೆ ಶಿಕ್ಷಕರು ಮತ್ತು ನೌಕರರಿಗೆ 7ನೇ ವೇತನ ಅಯೋಗ, ಓಪಿಎಸ್ (ಹಳೆ ಪಿಂಚಣಿ ವ್ಯವಸ್ಥೆ) ಜಾರಿ ಮಾಡುವುದಾಗಿ ಭರವಸೆ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಎಲ್ಲವನ್ನು ಮರೆತಿದ್ದಾರೆ, ಅಹಿಂದ ಹೆಸರಲ್ಲಿ ಕುರ್ಚಿ ಏರಿದ ಸಿದ್ದರಾಮಯ್ಯ ಅವರು ಹಿಂದುಳಿದ ವರ್ಗಗಳಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ದಕ್ಷಿಣ ಶಿಕ್ಷಕರ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಕೆ.ಸಿ.ಪುಟ್ಟಸಿದ್ದಶೆಟ್ಟಿ ಆರೋಪಿಸಿದರು.

> **ಮುಖ್ಯಮಂತ್ರಿ ಸಿದ್ದರಾಮಯ್ಯ ತವರು ಜಿಲ್ಲೆಯಲ್ಲೇ 1818 ಸರ್ಕಾರಿ ಶಾಲಾ ಕಟ್ಟಡಗಳು ಶಿಥಿಲವಾಗಿವೆ, ಇದನ್ನು ಸರಿಪಡಿಸದ ಸರ್ಕಾರ ಖಾಸಗಿ ಶಾಲೆಗಳ ಪರವಾನಗಿ ನವೀಕರಣದ ಹೆಸರಿನಲ್ಲಿ ಭ್ರಷ್ಟಚಾರ ನಡೆಸುತ್ತಿದೆ.**
> । ಕೆ.ಸಿ.ಪುಟ್ಟಸಿದ್ದಶೆಟ್ಟಿ
> ದಕ್ಷಿಣ ಶಿಕ್ಷಕರ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ

ಎಚ್.ಡಿ.ಕೋಟೆ ತಾಲೂಕು ಪತ್ರಕರ್ತರ ಸಂಘದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ರಾಜ್ಯದಲ್ಲಿ ಖಾಸಗಿ ಶಾಲಾ ಕಾಲೇಜು ಬಹಳಷ್ಟಿದ್ದು, ಅವುಗಳಿಗೆ ಸರ್ಕಾರದಿಂದ ಮಂಜೂರಾತಿ ಜತೆಗೆ ಪ್ರಥಮ ಮಾನ್ಯತೆಯೂ ಸಿಕ್ಕಿದೆ ಅದರೂ ಹಣಕ್ಕಾಗಿ ಪ್ರತಿ ವರ್ಷ ಮಾನ್ಯತೆ ನವೀಕರಣ ಕಡ್ಡಾಯ ಮಾಡಿ ಅದರಲ್ಲೂ ಲೋಕೋಪಯೋಗಿ ಇಲಾಖೆಯಿಂದ ಬಿಲ್ಡಿಂಗ್ ಭದ್ರತೆ ಹಾಗೂ ಅಗ್ನಿಶಾಮಕ ದಳದ ಕಚೇರಿಯಿಂದ ಸರ್ಟಿಫಿಕೇಟ್ ಕೇಳಿ ರಾಜ್ಯದಲ್ಲಿ ಯಾವ ಇಲಾಖೆಗೆ ಹೋದರು ಲಂಚ ಲಂಚ ಎಂದು ಭ್ರಷ್ಟಚಾರದ ದಂಧೆ ನಡಯುತ್ತಿರುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಿಳಿದಿಲ್ಲವೇ, ಜಾಣ ಕುರುಡತನವೇಕೆ? ಎಂದು ಪ್ರಶ್ನಿಸಿ ಆಕ್ರೋಶ ವ್ಯಕ್ತಪಡಿಸಿದ ಅವರು, ವ್ಯಾಪಕವಾಗಿ ನಡೆಯುತ್ತಿರುವ ಭ್ರಷ್ಟಚಾರಕ್ಕೆ ಕೂಡಲೇ ಕಡಿವಾಣ ಹಾಕಿ, ಇಲ್ಲದಿದ್ದಲ್ಲಿ ತಮ್ಮ ಹಾಗೂ ಸರ್ಕಾರದ ವಿರುದ್ಧ ಸಾರ್ವಜನಿಕವಾಗಿ ಚಳವಳಿ ನಡೆಸ ಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನನ್ನನ್ನು ಬೆಂಬಲಿಸಿ: ನಾನು ಮೂಲತಃ ಶಿಕ್ಷಕ, ಪ್ರೌಢಶಾಲಾ ಸಹ ಶಿಕ್ಷಕನಾಗಿ ಕೆಲಸ ಮಾಡಿದ್ದೇನೆ, ಸಹ ಶಿಕ್ಷಕರಿಗೆ ಸಂಘ ಇರಲಿಲ್ಲ 1986 ರಲ್ಲಿ ಸಂಘ ಕಟ್ಟಿ ರಾಜ್ಯಾದಂತ ಹೋರಾಟ ಮಾಡಿ ಹಲವಾರು ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಒದಗಿಸಿದ್ದೇನೆ, ಆಗಾಗಿ ರಾಜಕೀಯ ಪಕ್ಷಗಳಿಗೆ ಶಿಕ್ಷಕರ ಸಮಸ್ಯೆಗಳ ಬಗ್ಗೆ ಕಾಳಜಿ ಇಲ್ಲ, ಅವರ ಅಬ್ಬರದ ಸುಳ್ಳು ಭರವಸೆಗಳನ್ನು ಪ್ರಬುದ್ಧ ಶಿಕ್ಷಕ ಮತದಾರರು ನಂಬಬಾರದು, ಹಾಗಾಗಿ ಶಿಕ್ಷಕರ ಬಗ್ಗೆ ಕಾಳಜಿ ಇರುವ ನನ್ನನ್ನು ಪರಿಗಣಿಸಿ ಪಕ್ಷೇತರ ಅಭ್ಯರ್ಥಿಯಾದ ನನಗೆ ಪ್ರಥಮ(ಪ್ರಾಶಸ್ತ್ಯ)ದ ಮತ ನೀಡಬೇಕು ಎಂದು ಮನವಿ ಮಾಡಿದರು.

# ಮೊರಾರ್ಜಿ ಶಾಲೆಗೆ ಶೇ.96 ಫಲಿತಾಂಶ

**ಯಳಂದೂರು:** ತಾಲೂಕಿನ ಬಿಳಿಗಿರಿರಂಗನಬೆಟ್ಟ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಈ ಬಾರಿ ಎಸ್ ಎಸ್ ಎಲ್‌ಸಿ ಪರೀಕ್ಷೆಯಲ್ಲಿ ಶೇ 96 ಫಲಿತಾಂಶ ಪಡೆದುಕೊಳ್ಳುವ ಮೂಲಕ ಉತ್ತಮ ಸಾಧನೆ ಮಾಡಿದೆ. ಪರೀಕ್ಷೆಗೆ ಹಾಜರಾಗಿದ್ದ ಶಾಲೆಯ 50 ವಿದ್ಯಾರ್ಥಿಗಳಲ್ಲಿ 8 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ , 33 ವಿದ್ಯಾರ್ಥಿಗಳು ಪ್ರಥಮ ದರ್ಜೆ, 7 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ, ಆರ್.ಜೆ. ಹರಿಪ್ರಸಾದ್ 593, ಪವಿತ್ರ -553, ಅರ್ಜುನ್ -553, ರವಿಕೀರ್ತಿ -553 ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ಶಾಲೆಯ ಶಿಕ್ಷಕ ವರ್ಗ ಅಭಿನಂಧಿಸಿದ್ದಾರೆ.



**ಜೆಎಸ್‌ಎಸ್ ಶಾಲೆಗೆ ಶೇ 80.43 ಫಲಿತಾಂಶ:** ತಾಲೂಕಿನ ಗೌಡಹಳ್ಳಿ ಗ್ರಾಮದ ಜೆಎಸ್‌ಎಸ್ ಪ್ರೌಢಶಾಲೆಗೆ ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.8043 ಫಲಿತಾಂಶ ಲಭಿಸಿದೆ. ಈ ಬಾರಿ ಪರೀಕ್ಷೆಗೆ ಹಾಗರಾಗಿದ 46 ವಿದ್ಯಾಥೀಗಳ ಪೈಕಿ 37 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಆದರಲ್ಲಿ ಎಸ್. ಯಮುನ -533, ವಿಸ್ಮಯ-505, ಎಂ.ರಮ್ಯ -482 ಪಡೆಯುವ ಮೂಲಕ ಶಾಲೆಗೆ ಉತ್ತಮ ಫಲಿತಾಂಶ ಲಭಸಿದೆ ಎಂದು ಮುಖ್ಯಶಿಕ್ಷಕ ಕೆ.ಎಸ್.ಸಿದ್ದು ತಿಳಿಸಿದ್ದಾರೆ.

# ಕನ್ನಡ ಸಾಹಿತ್ಯ ಪರಿಷತ್ತು ಅಸ್ಮಿತೆಯ ಸಂಕೇತ



**ಕೆ.ಆರ್.ನಗರ:** ಕನ್ನಡ ಸಾಹಿತ್ಯ ಪರಿಷತ್ತು ನಮ್ಮೆಲ್ಲರಿಗೆ ಏಕತೆ ಹಾಗೂ ಅಸ್ಮಿತೆಯ ಸಂಕೇತವಾಗಿದ್ದು ಅದು ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೆ ಅನೇಕ ಮಹನೀಯರು, ಹೋರಾಟಗಾರರು ಬೆಳವಣಿಗೆಗೆ ಕೊಡುಗೆ ನೀಡಿದ್ದಾರೆ ಪರಿಷತ್ತಿನ ಉದಯಕ್ಕೆ ಕಾರಣರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು ನಾವು ಸದಾ ಸ್ಮರಿಸಬೇಕು ಎಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಿಂಡಿಮ ಶಂಕರ್ ಹೇಳಿದರು. ಪಟ್ಟಣದ ರೋಟರಿ ಭವನದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಹಮ್ಮಿಕೊಂಡಿದ್ದ 110 ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಕನ್ನಡ ಬಾಷೆಯ ಬೆಳವಣಿಗೆಗೆ ಪ್ರತಿಯೊಬ್ಬರೂ ಶ್ರಮಿಸಬೇಕಿದ್ದು ಪತ್ರಿಕೆಗಳನ್ನು ಕೊಂಡು ಓದಿ ಪುಸ್ತಕಗಳನ್ನು ಖರೀದಿಸುವ ಕಡೆಗೆ ಗಮನ ಹರಿಸಿ ಆ ಮೂಲಕ ಕನ್ನಡ ಮತ್ತು ಕನ್ನಡ ಬರಹಗಾರರನ್ನು ಪ್ರೋತ್ಸಾಹಿಸಬೇಕಿದೆ ಎಂದರು. ಸ್ವಾತಂತ್ರ್ಯ ಪೂರ್ವದಲ್ಲಿ ಕನ್ನಡ ಭಾಷಿಕರು ಬೇರೆ ಭಾಷೆಯ ಆಡಳಿತದ ಅಧೀನದಲ್ಲಿದ್ದರೂ ಈ ಸಂಕಟದಿಂದ ಹೊರ ಬರಲು ಕನ್ನಡ ಭಾಷೆ, ಪ್ರದೇಶ, ಸಂಸ್ಕೃತಿಯನ್ನು ಒಗ್ಗೂಡಿಸುವ, ಅದರ ಅಸ್ಮಿತೆಯನ್ನು ರಕ್ಷಿಸಿಕೊಳ್ಳುವ ಪರಿಸ್ಥಿತಿ ಎದುರಾಗಿತ್ತು ಆ ವೇಳೆ ಕನ್ನಡ ಕಟ್ಟುವ ಕಾರ್ಯಕ್ಕೆ ನೆರವಾಗಿದ್ದು ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣರಾಜ ಒಡೆಯರ್ ಎಂದು ಮಾಹಿತಿ ನೀಡಿದರು. ಮೊಟ್ಟ ಮೊದಲ ಬಾರಿಗೆ ಮಹಿಳೆಯರಿಗೆ ಮತದಾನದ ಹಕ್ಕನ್ನು ಕೊಟ್ಟವರು, ಮಹಿಳೆಯರ ಸಬಲೀಕರಣಕ್ಕೆ ಹೊಸ ಕಾಯ್ದೆ ತಂದವರು ಒಡೆಯರ್ ಹಾಗಾಗಿ ಅವರ ಜೀವನ ಚರಿತ್ರೆಯನ್ನು ಮುಂದಿನ ಯುವ ಪೀಳಿಗೆಗೆ ತಿಳಿಸಲು ಪಟ್ಟಣದ ಪ್ರತಿ ಮನೆಯಲ್ಲೂ ಜೀವನ ಚರಿತ್ರೆ ಮತ್ತು ಬಾವಚಿತ್ರ ಆಳವಡಿಸಿಕೊಂಡು ನಮ್ಮ ಮಹಾರಾಜರ ಹೆಸರನ್ನು ಏರಿಸೋಣವೆಂದರು.

# ಮರಗಳ ಸರ್ವೇ ವಿರೋಧಿಸಿ ಅರಣ್ಯ ಭವನಕ್ಕೆ ಮುತ್ತಿಗೆ

**ಮಡಿಕೇರಿ:** ಖಾಸಗಿ ತೋಟಗಳಲ್ಲಿರುವ ಮರಗಳ ಸರ್ವೇ ಕಾರ್ಯ ವಿರೋಧಿಸಿ ರಾಜ್ಯ ಸರ್ಕಾರ ಹಾಗೂ ಅರಣ್ಯ ಇಲಾಖೆಯ ನೀತಿಗಳ ವಿರುದ್ಧ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಅರಣ್ಯ ಭವನಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.




ಈ ವೇಳೆ ಹಿರಿಯ ಅಧಿಕಾರಿಗಳು ಕಚೇರಿಯಲ್ಲಿ ಇರದೇ ಬೆಂಗಳೂರಿಗೆ ತೆರಳಿರುವ ಮಾಹಿತಿ ಅರಿತ ಅವರು ಆಕ್ರೋಶ ವ್ಯಕ್ತಪಡಿಸಿದರು. ಒಂದು ಹಂತದಲ್ಲಿ ಅರಣ್ಯ ಭವನದ ಕಚೇರಿಗೆ ಬೀಗ ಹಾಕುವುದಾಗಿಯೂ ಎಚ್ಚರಿಕೆ ನೀಡಿದರು. ಅಂತಿಮವಾಗಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರೇ ಸ್ಥಳಕ್ಕೆ ಬಂದು ಮನವಿ ಸ್ವೀಕರಿಸಿದರು.

ಅರಣ್ಯ ಭವನದ ಗೇಟಿನಿಂದ ಕಚೇರಿಯವರೆಗೆ ಬೃಹತ್ ಸಂಖ್ಯೆಯಲ್ಲಿ ಸೇರಿದ ಕಾರ್ಯಕರ್ತರು ಮೆರವಣಿಗೆ ನಡೆಸಿದರು. ಈ ವೇಳೆ ಅರಣ್ಯ ಇಲಾಖೆಯ ಅಧಿಕಾರಿಗಳು, ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಕಚೇರಿಯ ಮುಂಬಾಗಿಲಿನಲ್ಲಿ ಕುಳಿತ ಅವರು, ಬಿಜೆಪಿ ಪ್ರತಿಭಟನೆ ನಡೆಸಲಿದೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಬಂದಿದ್ದಾಗ್ಯೂ ಹಿರಿಯ ಅಧಿಕಾರಿಗಳು ಕಚೇರಿಯಲ್ಲಿರದೇ ಬೆಂಗಳೂರಿಗೆ ಹೋಗಿರುವುದು ಸರಿಯಲ್ಲಎಂದು ಕಿಡಿಕಾರಿದರು. ಬಿಜೆಪಿ ಮುಖಂಡ ಎಂ.ಪಿ.ಅಪ್ಪಚ್ಚುರಂಜನ್ ಮಾತನಾಡಿ, ಖಾಸಗಿ ತೋಟಗಳಲ್ಲಿರುವ ಮರಗಳ ಸರ್ವೇ ಕಾರ್ಯ ನಡೆಸುತ್ತಿರುವುದು ಸರಿಯಲ್ಲಎಂದು ಖಂಡಿಸಿದರು. ಜಿಲ್ಲೆಯ ಬಹಳಷ್ಟು ಕಡೆ ಅರಣ್ಯ ಇಲಾಖೆ ತನ್ನ ನೀತಿಯನ್ನೇ ಪಾಲಿಸುತ್ತಿಲ್ಲ ಎಂದು ಆರೋಪಿಸಿದ ಅವರು, ಜಿಲ್ಲೆಯ ದೇಗುಲಗಳಲ್ಲಿ ಕಾಡುಕುರಿಗಳ ಕೊಂಬುಗಳು ಸಾಂಪ್ರದಾಯಿಕ ಬದ್ಧವಾಗಿ ತಲೆತಲಾಂತರಗಳಿಂದ ಇದೆ. ಈಗ ಅದನ್ನೂ ವಾಪಸ್ ಕೊಡುವಂತೆ ಸರ್ಕಾರ ಆದೇಶಿಸಿರುವುದು ಸರಿಯಲ್ಲ ಎಂದು ಖಂಡಿಸಿದರು.

ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ ಮಾತನಾಡಿ, ಹೋರಾಟ ಇಲ್ಲಿಗೆ ನಿಲ್ಲುವುದಿಲ್ಲ, ಈ ಹೋರಾಟವನ್ನು ಹಂತಹಂತವಾಗಿ ಮುಂದುವರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುನಿಲ್ ಸುಬ್ರಮಣಿ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ನಾಪಂಡ ರವಿಕಾಳಪ್ಪ, ಪ್ರಧಾನ ಕಾರ್ಯದರ್ಶಿ ಮಹೇಶ್ ಜೈನಿ, ವಕ್ತಾರರಾದ ಸುಬ್ರಹ್ಮಣ್ಯ ಉಪಾಧ್ಯಾಯ, ಬಿ.ಕೆ.ಅರುಣ್ ಕುಮಾರ್, ತಳೂರು ಕಿಶೋರ್‌ಕುಮಾರ್, ಪಕ್ಷದ ಮಹಿಳಾ ಮೋರ್ಚಾ ಅಧ್ಯಕ್ಷೆ ಅನಿತಾ ಪೂವಯ್ಯ, ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಅಪ್ಪು ರವೀಂದ್ರ ಭಾಗವಹಿಸಿದ್ದರು.

> “ ಖಾಸಗಿ ತೋಟಗಳಲ್ಲಿರುವ ಮರಗಳ ಸರ್ವೇ ಕಾರ್ಯ ನಡೆಸುತ್ತಿರುವುದು ಸರಿಯಲ್ಲ. ದೇಗುಲಗಳಲ್ಲಿ ಕಾಡುಕುರಿಗಳ ಕೊಂಬುಗಳು ಸಾಂಪ್ರದಾಯಿಕ ಬದ್ಧವಾಗಿ ತಲೆತಲಾಂತರಗಳಿಂದ ಇದೆ. ಈಗ ಅದನ್ನೂ ವಾಪಸ್ ಕೊಡುವಂತೆ ಸರ್ಕಾರ ಆದೇಶಿಸಿರುವುದು ಸರಿಯಲ್ಲ.
> । ಎಂ.ಪಿ.ಅಪ್ಪಚ್ಚುರಂಜನ್
> ಮಾಜಿ ಶಾಸಕರು

# ಪಾಪನಕೆರೆ ಒತ್ತುವರಿ ವಿರೋಧಿಸಿ ಪ್ರತಿಭಟನೆ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಬೆಂಗಳೂರು ರಸ್ತೆಯಲ್ಲಿ ಹತ್ತಾರು ಎಕರೆ ಪ್ರದೇಶದ ಪಾಪನಕೆರೆಯನ್ನು ಹೂಳು ತೆಗೆಯುವ ನೆಪದಲ್ಲಿ ಸಿದ್ದಯ್ಯನಪುರ ಗ್ರಾ.ಪಂ ಪಿಡಿಒ ಒತ್ತುವರಿ ಮಾಡಿಕೊಂಡಿರುವುದರ ಜೊತೆಗೆ ಕೆರೆಯ ಸುತ್ತಮುತ್ತಲ ಜಮೀನುಗಳಿಗೆ ನೀರು ಬರದಂತೆ ಕಟ್ಟೆ ಹಾಕಿ ಬೆಳೆ ಬೆಳೆಯುವ ಜಮೀನುಗಳು ಒಣಗುವಂತೆ ಮಾಡಿದ್ದಾರೆಂದು ಆರೋಪಿಸಿ ಶನಿವಾರ ಭೀಮನಗರದ ರೈತರು ಯುವ ಮುಖಂಡ ಕೃಷ್ಣಕುಮಾರ್ ನೇತೃತ್ವದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕಚೇರಿ ಮುಂದೆ ಧರಣಿ ಕುಳಿತು ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ರೈತ ಮುಖಂಡರು ಪಾಪನಕೆರೆಯಿಂದ ನೂರಾರು ಎಕರೆ ಜಮೀನಿಗೆ ನೀರಿನ ಅನುಕೂಲವಾಗುತ್ತಿತ್ತು ಆದರೆ ಸಿದ್ದಯ್ಯನಪುರ ಗ್ರಾ.ಪಂ. ಕಆಔ ಶಿವಮೂರ್ತಿ ಅವರು ಬೇರೆ ಕೆರೆಗೆ ಮಂಜೂರಾಗಿರುವ ಹೂಳು ತೆಗೆಯುವ ಕಾಮಗಾರಿಯನ್ನು ಪಾಪನಕೆರೆಯಲ್ಲಿಪ್ರಾರಂಭಿಸಿ ಅಕ್ರಮವೆಸಗುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



# ಜೂ.15 ರಂದು ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿ

**ಎಚ್.ಡಿ.ಕೋಟೆ:** ತಾಲೂಕಿನ ಇತಿಹಾಸದಲ್ಲೇ ಇದೆ ಮೊದಲ ಬಾರಿಗೆ ಇಲ್ಲಿನ ಶ್ರೀ ರಾಮಾಂಜನೇಯ ಕುಸ್ತಿ ಸಂಘದ ವತಿಯಿಂದ ರಾಜ್ಯ ಮಟ್ಟದ ಕುಸ್ತಿ ಪಂದ್ಯಾವಳಿಯನ್ನು ಜೂ.15 ರಂದು ಪಟ್ಟಣದ ಉಪ್ಲಿಕೆರೆ ಮೈದಾನದಲ್ಲಿ ಅಯೋಜಿಸಲಾಗುವುದು ಎಂದು ಸಂಘದ ಅಧ್ಯಕ್ಷ ಹೋಟೆಲ್ ನಂದೀಶ್ ತಿಳಿಸಿದರು. ಎಚ್.ಡಿ.ಕೋಟೆ ತಾಲೂಕು ಪತ್ರಕರ್ತರ ಸಂಘದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ರಾಜ್ಯ ಮಟ್ಟದ ಕುಸ್ತಿ ಪಂದ್ಯಾವಳಿಯೂ ಕ್ಷೇತ್ರದ ಶಾಸಕರು, ಮಾಜಿ ಶಾಸಕರು, ತಾಲೂಕಿನ ಅನೇಕ ಮುಖಂಡರು, ಸಂಘ ಸಂಸ್ಥೆಗಳು ಹೀಗೆ ಎಲ್ಲರ ಸಹಕಾರದಲ್ಲಿ ಸುಮಾರು 13 ಲಕ್ಷ ರೂ ವೆಚ್ಚದಲ್ಲಿ ನಡೆಯುತ್ತಿದ್ದು, ರಾಜ್ಯದ ವಿವಿಧ ಭಾಗಗಳಿಂದ 40ಕ್ಕೂ ಹೆಚ್ಚು ಪೈಲ್ವಾನ್‌ಗಳು ಭಾಗವಹಿಸಲಿದ್ದು, ಪಂದ್ಯಾವಳಿಯಲ್ಲಿ ಮೊದಲ ಬಾರಿಗೆ 40 ಜೊತೆ ನಾಡ ಕುಸ್ತಿ ಪೈಲ್ವಾನ್‌ಗಳು ಸೆಣಸಾಡಲಿದ್ದಾರೆ ಎಂದ ಅವರು ಗೆದ್ದ ಮೊದಲ ಜೋಡಿಗೆ ಬೆಳ್ಳಿ ಹಾಗೂ ಕಂಚಿನ ಗಾಧೆ ಬಹುಮಾನ ಇರಲಿದೆ, ಇನ್ನೂ ಪಂದ್ಯಾವಳಿಯಲ್ಲಿ ಭಾಗವಹಿಸಿದ ಎಲ್ಲ 40 ಜೊತೆ ಪೈಲ್ವಾನ್ ಗಳಿಗೂ ಪ್ರಶಸ್ತಿ ಪ್ರತ್ರದ ಜತೆಗೆ ನಗದು ಬಹುಮಾನ ಇರಲಿದೆ ಎಂದು ನುಡಿದರು.

# ಟ್ರ್ಯಾಕ್ಟರ್‌ಗೆ ಸಿಲುಕಿ ಬಾಲಕ ಸಾವು

**ಚಾಮರಾಜನಗರ:** ಬಾಲಕನೋರ್ವ ಟ್ರ್ಯಾಕ್ಟರ್ ರೊಟೋವೇಟರ್‌ಗೆ ಆಕಸ್ಮಿಕವಾಗಿ ಸಿಲುಕಿ ಮೃತಪಟ್ಟಿರುವ ಘಟನೆ ನಂಜನಗೂಡು ತಾಲೂಕಿನ ದೇವರಸನಹಳ್ಳಿ ಗ್ರಾಮದಲ್ಲಿ ನಡೆದಿದೆ.ಚಾಮರಾಜನಗರ ತಾಲೂಕಿನ ಕಾಗಲವಾಡಿ ಕಾಗಲವಾಡಿ ಗ್ರಾಮದ ಕಾರ್ತಿಕ್ ಎಂಬುವವರು ಪುತ್ರ ಭವೀಶ್(7) ಮೃತ ಬಾಲಕ. ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ದೇವರಸನಹಳ್ಳಿ ಗ್ರಾಮದ ಜಮೀನಿನಲ್ಲಿ ಟ್ರ್ಯಾಕ್ಟರ್ ರೊಟೋವೇಟರ್‌ಗೆ ಆಕಸ್ಮಿಕವಾಗಿ ಸಿಲುಕಿ ಮೃತಪಟ್ಟಿದ್ದಾನೆ ಈತ ದೇವರಸನಹಳ್ಳಿಯ ಅಜ್ಜಿ ಮನೆಗೆ ಬೇಸಿಗೆ ರಜೆಗೆ ತೆರಳಿದ್ದ. ಅಜ್ಜಿಗೆ ಸೇರಿದ ಜಮೀನಿನಲ್ಲಿಉಳುಮೆ ಮಾಡುವಾಗ ಬಾಲಕನೂ ಟ್ರ್ಯಾಕ್ಟರ್‌ನಲ್ಲಿ ಚಾಲಕನ ಜತೆಗೆ ಕುಳಿತ್ತಿದ್ದಾನೆ ಆದರೆ ಆಕಸ್ಮಿಕವಾಗಿ ಕೆಳಕ್ಕೆ ಬಿದ್ದಿದ್ದು ಇದು ಚಾಲಕನ ಗಮನಕ್ಕೆ ಬರುವಷ್ಟರಲ್ಲಿ ರೊಟೋವೇಟರ್‌ಗೆ ಸಿಲುಕಿ ಮೃತಪಟ್ಟಿದ್ದಾನೆ.

# ಸಂವಿಧಾನ ನಮಗೆ ದಾರಿದೀಪವಾಗಿ ಮುನ್ನಡೆಸುತ್ತದೆ

**ಚಾಮರಾಜನಗರ:** ಸಂವಿಧಾನ ನಮಗೆ ನಿಜರೂಪದಲ್ಲಿ ಮಾರ್ಗದಶಕನಿದ್ದಂತೆ. ಭಾರತದ ನಾಗರೀಕರಾದ ನಾವು ನಮ್ಮ ಸಂವಿಧಾನವನ್ನು ತಿಳಿಯುವ ಪ್ರಾಮಾಣಿಕ ಪ್ರಯತ್ನ ಮಾಡುವುದು ಅತ್ಯಂತ ಅವಶ್ಯಕವಾದದ್ದು ಎಂದು ಅಜೀಂ ಪ್ರೇಮ್ ಜಿ ಫೌಂಡೇಶನ್ ಓಂ ಪ್ರಕಾಶ್ ಅಭಿಪ್ರಾಯ ವ್ಯಕ್ತಪಡಿಸಿದರು.



ಇನ್‌ಸ್ಟಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ಬೆಂಗಳೂರು ಸಂಸ್ಥೆಯು ಚಾಮರಾಜನಗರ ಜಿಲ್ಲೆಯ ಬಿಳಿಗಿರಿರಂಗನ ಬೆಟ್ಟದಲ್ಲಿ ಸಂಸ್ಥೆಯ ಸಿಬ್ಬಂದಿಗಳಿಗಾಗಿ ಆಯೋಜಿಸಲಾಗಿದ್ದ ಎರಡು ದಿನಗಳ ಸಂವಿಧಾನ ತಿಳಿಯೋಣ ಬಾ ಎಂಬ ನಮ್ಮ ಸಂವಿಧಾನ ಕುರಿತ ಎರಡು ದಿನಗಳ ಜಾಗೃತಿ ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಯಾದ ಓಂ ಪ್ರಕಾಶ್ ರವರು ಸಂವಿಧಾನವು ಅರಿವಿನ ಹಣತೆ ಇದ್ದಂತೆ, ಪ್ರತಿಯೊಬ್ಬರನ್ನು ಪ್ರಜ್ಞಾವಂತ ನಾಗರೀಕರನ್ನಾಗಿ ಸರಿದಾರಿಯಲ್ಲಿ ಬೆಳಕಿನೆಡೆಗೆ ಕೊಂಡೊಯ್ಯುವ ಒಬ್ಬ ಗುರುವಿನಂತೆ ಎಂದರು. ಸಂವಿಧಾನವನ್ನು ನಾವು ತಿಳಿಯುವುದಷ್ಟೇ ಅಲ್ಲ, ನಮ್ಮ ಸುತ್ತಲಿನ ಸಮಾಜದಲ್ಲಿ ಅದನ್ನು ತಿಳಿಸುವ ಪ್ರಯತ್ನ ಕೂಡ ಅತ್ಯವಶ್ಯಕ ಎಂದು ತಿಳಿಸಿದರು.

ಸ್ಥಳೀಯ ಸೋಲಿಗ ಆದಿವಾಸಿ ಸಮುದಾಯದ ಮುಖಂಡರುಗಳಾದ ದಾಸೇಗೌಡ, ಬಸವರಾಜು, ಕಾರನ ಕೇತೇಗೌಡ ಅಜೀಮ್ ಪ್ರೇಮ್ ಜಿ ಫೌಂಡೇಶನ್ನಿನ ಪ್ರತಿನಿಧಿಗಳು ಹಾಗೂ ಇನ್ಸ್ಟಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ನ ಸಹಾಯಕ ನಿರ್ದೇಶಕರಾದ ಡಾ. ತಾನ್ಯಾ ರವರು ಈ ಕಾರ್ಯಗಾರಕ್ಕೆ ಚಾಲನೆ ನೀಡಿದರು. ಕಾರ್ಯಾಗಾರದವನ್ನುದ್ದೇಶಿಸಿ ಮಾತನಾಡಿದ ಇನ್ಸ್ಟಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ಬೆಂಗಳೂರು ಸಂಸ್ಥೆಯ ನಿರ್ದೇಶಕರಾದ ಡಾ. ಪ್ರಶಾಂತ್ ಎನ್. ಎಸ್ ರವರು, ಸಂವಿಧಾನವನ್ನು ಸರಿಯಾಗಿ ತಿಳಿಯುವುದೆಂದರೇ ಕೇವಲ ಸಂವಿಧಾನದ ವಿವಧ ಭಾಗಗಳನ್ನು, ಅನುಚ್ಛೇದಗಳನ್ನು ತಿಳಿಯುವುದಲ್ಲ, ಅದರ ಹಿನ್ನೆಲೆ, ಉದ್ದೇಶ ಹಾಗೂ ಈ ಒಂದು ಮಹತ್ಕಾರ್ಯದ ಹಿಂದೆ ಶ್ರಮಿಸಿರುವ ಬಹಳಷ್ಟು ವ್ಯಕ್ತಿಗಳ ಶ್ರಮಾದಾನದ ಕುರಿತೂ ತಿಳಿದಾಗ ಸಂವಿಧಾನವನ್ನು ಸರಿಯಾಗಿ ಅರ್ಥೈಸಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬ ಪ್ರಜೆಯೂ ಸಂವಿಧಾನದಲ್ಲಿ ತನಗಿರುವ ಹಕ್ಕುಗಳ ಬಗ್ಗೆಯಷ್ಟೇ ತಿಳಿಯದೆ, ಮೂಲಭೂತ ಕರ್ತವ್ಯಗಳ ಬಗ್ಗೆಯೂ ತಿಳಿದು ತಮ್ಮ ದಿನನಿತ್ಯದ ಜೀವನದಲ್ಲಿ ಅವುಗಳ ಪಾಲನೆ ಮಾಡುವುದರಿಂದ ತನ್ನ ಹಾಗೂ ದೇಶದ ಹಿತ ಕಾಪಾಡಬಹುದಾಗಿದೆ, ಈ ನಿಟ್ಟಿನಲ್ಲಿ, ಸಾರ್ವಜನಿಕ ಆರೋಗ್ಯ ಕ್ಷೇತ್ರದಲ್ಲಿಕಾರ್ಯನಿರ್ವಹಿಸುತ್ತಿರುವ ನಮ್ಮ ಸಿಬ್ಬಂದಿಗಳಿಗೆ ಈ ಕಾರ್ಯಗಾರ ಬಹಳಷ್ಟು ಪ್ರಯೋಜನಕಾರಿಯಾಗಲಿದೆ ಎಂದರು.

ಕಾರ್ಯಾಗಾರದಲ್ಲಿ ಇನ್ಸ್ಟಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ಬೆಂಗಳೂರು ಸಂಸ್ಥೆಯ ಚಾಮರಾಜನಗರ ಫೀಲ್ಡ್ ಸ್ಟೇಷನ್ ನ ವಿವಿಧ ಯೋಜನೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ 80ಕ್ಕೂ ಹೆಚ್ಚು ಸಿಬ್ಬಂದಿಗಳು ಹಾಗೂ ವಿವೇಕಾನಂದ ಗಿರಿಜನ ಕಲ್ಯಾಣ ಕೇಂದ್ರದ ಸಿಬ್ಬಂದಿಗಳು ಭಾಗವಹಿಸಿದ್ದರು.

# ಉತ್ತಮ ಮಳೆಗೆ ಬಿತ್ತನೆ ಚುರುಕು

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯಲ್ಲಿ ಕಳೆದ 10 ದಿನಗಳಿಂದಲೂ ಉತ್ತಮ ಮಳೆ ಸುರಿಯುತ್ತಿದ್ದು, ಕೃಷಿ ಚಟುವಟಿಕೆ ಚುರುಕು ಪಡೆದುಕೊಂಡಿದೆ. ರೈತರು ಬಿತ್ತನೆ ಕಾರ್ಯ ಶುರು ಮಾಡಿದ್ದಾರೆ.



ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಹಂಗಳ, ಕಸಬಾ. ತೆರಕಣಾಂಬಿ ಹೋಬಳಿ. ಚಾಮರಾಜನಗರ ತಾಲೂಕು ಹಾಗೂ ಕೊಳ್ಳೇಗಾಲ ವ್ಯಾಪ್ತಿಯಲ್ಲಿ ಪೂರ್ವ ಮುಂಗಾರು ಮಳೆ ಉತ್ತಮವಾಗಿ ಸುರಿದಿದೆ. ಭೂಮಿ ಹದ ಮಾಡಿಕೊಳ್ಳುತ್ತಿರುವ ರೈತರು ಸೂರ್ಯಕಾಂತಿ, ಜೋಳ, ಅಲಸಂದೆ ಸೇರಿದಂತೆ ದ್ವಿದಳ ಧಾನ್ಯಗಳ ಬಿತ್ತನೆಯಲ್ಲಿ ತೊಡಗಿದ್ದಾರೆ. ಶೇ.20ರಷ್ಟು ಬಿತ್ತನೆ ಕಾರ್ಯ ಈಗಾಗಲೇ ಮುಗಿದಿದೆ.

ಕೃಷಿ ಇಲಾಖೆ ಅಧಿಕಾರಿಗಳು ಮಳೆಗೂ ಮುನ್ನವೇ ಬಿತ್ತನೆ ಬೀಜಗಳನ್ನು ಸಂಗ್ರಹಿಸಿಟ್ಟುಕೊಂಡಿದ್ದರು. ಇಲಾಖೆ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತಿದೆ. ಇದರಿಂದಾಗಿ ಈ ಬಾರಿ ಬಿತ್ತನೆ ಬೀಜ ಹಾಗೂ ಗೊಬ್ಬರಕ್ಕೆ ಸಮಸ್ಯೆ ಇಲ್ಲ ಎಂದು ಹೇಳಲಾಗುತ್ತಿದೆ.

ಗ್ರಾಮೀಣ ಭಾಗದ ಬಹುತೇಕ ರೈತರ ಬಳಿ ಎತ್ತುಗಳಿಲ್ಲ. ಹೀಗಾಗಿ ಜಾನುವಾರುಗಳನ್ನು ಹೊಂದಿರುವ ರೈತರಿಗೆ ಬೇಡಿಕೆ ಹೆಚ್ಚಿದೆ. ನೇಗಿಲಿನ ಮೂಲಕವೇ ಬಿತ್ತನೆ ಮಾಡಿಸಬೇಕೆಂಬುದು ರೈತರ ಆಶಯ. ಹೀಗಾಗಿ ಕೆಲವು ರೈತರು ಒಂದು ದಿನಕ್ಕೆ 2 ಸಾವಿರ ರೂ. ನೀಡಿ ಸೂರ್ಯಕಾಂತಿ, ಜೋಳ, ಅಲಸಂದೆ ಬಿತ್ತನೆ ಮಾಡಿಸುತ್ತಿದ್ದಾರೆ. ಬಿತ್ತನೆ ವೇಳೆ ಮಾತ್ರ ನಮಗೆ ಬೇಡಿಕೆ ಹೆಚ್ಚಿರುತ್ತದೆ. ಸಾಮಾನ್ಯ ದಿನಗಳಲ್ಲಿ ನಮ್ಮನ್ನು ಯಾರೂ ಕರೆಯುವುದಿಲ್ಲ ಎಂದು ಎತ್ತುಗಳ ಮಾಲೀಕ ಪ್ರಸಾದ್ ತಿಳಿಸಿದರು. ಬಹುತೇಕ ರೈತರು ಬರ ಹಾಗು ಸಾಕಣೆಗೆ ತೊಂದರೆಯಾದ ಕಾರಣ ದನ ಕರುಗಳನ್ನು ಮಾರಾಟ ಮಾಡಿದ್ದಾರೆ. ಇದರಿಂದ ಜಮೀನಿನಲ್ಲಿ ಉಳುವೆ ಹಾಗೂ ಬಿತ್ತನೆ ಕಾರ್ಯಕ್ಕೆ ಜಾನುವಾರು ಸಿಗದೇ ಟ್ರ್ಯಾಕ್ಟರ್ ಸಹಾಯದಿಂದ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುತ್ತಿದ್ದಾರೆ.

# ಮಾಜಿ ಪ್ರಧಾನಿ ಹೆಚ್‌ಡಿಡಿ ಹುಟ್ಟುಹಬ್ಬ ಆಚರಣೆ

**ಕೆ.ಆರ್.ಪೇಟೆ:** ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ ದೇವೇಗೌಡರ 92ನೇ ವರ್ಷದ ಹುಟ್ಟುಹಬ್ಬವನ್ನು ತಾಲೂಕು ಜೆಡಿಎಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಆಚರಿಸಿ ಗೌಡರಿಗೆ ಹುಟ್ಟುಹಬ್ಬದ ಶುಭ ಹಾರೈಸಿದರು.



ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರಿಗೆ ದೀರ್ಘಾಯಸ್ಸು ಕೋರಿ ಪುರಸಭಾ ವ್ಯಾಪ್ತಿಯ ಹೊಸಹೊಳಲಿನ ಕೋಟೆ ಬೈರವೇಶ್ವರನಿಗೆ ಶಾಸಕ ಹೆಚ್.ಟಿ.ಮಂಜು ನೇತೃತ್ವದಲ್ಲಿ ವೀಶೇಷ ಪೂಜೆ ಸಲ್ಲಿಸಿದ ಜೆಡಿಎಸ್ ಮುಖಂಡರು ಅನಂತರ ಪಟ್ಟಣದಲ್ಲಿರುವ ದುಂಡಶೆಟ್ಟಿಲಕ್ಷ್ಮಮ್ಮ ಸ್ಮಾರಕ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಒಳ ರೋಗಿಗಳಿಗೆ ಹಣ್ಣು-ಹಂಪಲು ವಿತರಿಸಿದರು. ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಮಾತನಾಡಿದ ಶಾಸಕ ಹೆಚ್.ಟಿ,ಮಂಜು ದೇಶ ಕಂಡ ಅಪರೂಪದ ಮಾಜಿ ಪ್ರಧಾನಿ ದೇವೇಗೌಡರ ಹುಟ್ಟು ಹಬ್ಬದ ಹಿನ್ನೆಲೆ ತಾಲೂಕು ಸರ್ಕಾರಿ ಆಸ್ಪತ್ರೆ ಹೊರ ರೋಗಿಗಳಿಗೆ ಹಣ್ಣು-ಹಂಪಲು ಹಾಗೂ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದೇವೆ. ಅವರ ಅಧಿಕಾರದ ಅವಧಿಯ ಕಾಲಘಟ್ಟದಲ್ಲಿ ದೇಶದ ರೈತರು, ಕಾರ್ಮಿಕರು, ಸೇರಿದಂತೆ ದುಡಿಯುವ ಶ್ರಮಿಕ ವರ್ಗದ ಪರವಾಗಿ ಕೆಲಸ ಮಾಡಿರುವ ದೇವೇಗೌಡರು ಸಮಾಜದ ಎಲ್ಲಾ ವರ್ಗದ ಜನತೆಗೆ ಸಾಮಾಜಿಕ ನ್ಯಾಯ ಕಲ್ಪಿಸುವಂತಹ ಕಾರ್ಯಯೋಜನೆಗಳನ್ನು ರೂಪಿಸಿ ಜಾರಿಗೆ ತಂದಿದ್ದಾರೆ. ದೇಶದ ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪಂಗಡಗಳು ಮತ್ತು ಮಹಿಳೆಯರು ಸೇರಿದಂತೆ ಎಲ್ಲಾ ಶೋಷಿತ ಸಮುದಾಯಗಳಿಗೂ ಸಮಾನತೆಯಿಂದ ಲಾಭ ಸಿಗುವಂತೆ ಮೀಸಲಾತಿ ಯೋಜನೆಯನ್ನು ಜಾರಿಗೆತಂದಿದ್ದಾರೆ. ತಮ್ಮ 92 ರ ಇಳಿ ವಯಸ್ಸಿನಲ್ಲೂ ದೇಶ ಮತ್ತು ರಾಜ್ಯದ ರೈತರ ದೀನ ದಲಿತರ ಬಗ್ಗೆ ಸದಾ ಚಿಂತಿಸುತ್ತಿರುವ ಏಕೈಕ ಅಪರೂಪದ ರಾಜಕಾರಣಿ ಎಂದರೆ ದೇವೇಗೌಡರು. ಇವರ ಸೇವೆ ದೇಶ ಮತ್ತು ರಾಜ್ಯಕ್ಕೆ ಅವಶ್ಯಕತೆ ಇರುವುದರಿಂದಅವರಿಗೆ ಭಗವಂತ ಆರೋಗ್ಯ ಮತ್ತು ಆಯಸ್ಸು ನೀಡಲಿ ಎಂದು ಪ್ರಾರ್ಥಿಸಿದ್ದೇವೆಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ತಾಲೂಕು ವೈದ್ಯಧಿಕಾರಿ ಡಾ.ಅಜಿತ್, ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಶಶಿಧರ್, ತಾಲೂಕು ಜೆಡಿಎಸ್ ಅಧ್ಯಕ್ಷ ಎ.ಎನ್ ಜಾನಕಿರಾಮ್, ಮನ್ಮುಲ್ ಮಾಜಿ ಅಧ್ಯಕ್ಷ ಎಂ.ಬಿ,ಹರೀಶ್, ಎಂ.ಡಿ ಸಿ.ಸಿ ಬ್ಯಾಂಕ್ ಉಪಾಧ್ಯಕ್ಷ ಹೊಸಹೊಳಲು ಅಶೋಕ್, ತಾ.ಪಂ ಮಾಜಿ ಸದಸ್ಯ ಮಲ್ಲೇನಹಳ್ಳಿಮೋಹನ್, ತಾಲೂಕು ಜೆಡಿಎಸ್ ಕಾನೂನು ಘಟಕದ ಅಧ್ಯಕ್ಷ ವಿ.ಎಸ್.ಧನಂಜಯ್ ಕುಮಾರ್, ಹೋಬಳಿ ಘಟಕದ ಅಧ್ಯಕ್ಷರಾದ ಸಂತೆಬಾಚಹಳ್ಳಿ ರವಿಕುಮಾರ್, ಅಕ್ಕಿಹೆಬ್ಬಾಳು ಬಸವಲಿಂಗಪ್ಪ, ಪುರಸಭಾ ಮಾಜಿ ಸದಸ್ಯ ಕೆ.ಆರ್.ಹೇಮಂತ್‌ಕುಮಾರ್ ಸೇರಿದಂತೆ ನೂರಾರು ಜೆಡಿಎಸ್ ಕಾರ್ಯಕರ್ತರು ಭಾಗವಹಿಸಿದ್ದರು.

# ಬಾಳೆ ಬೆಳೆಗಾರರಿಗೆ ವಿಶೇಷ ಪ್ಯಾಕೆಜ್ ಘೋಷಣೆಗೆ ಪ್ರತಿಭಟನೆ

**ಚಾಮರಾಜನಗರ:** ವೈಜ್ಞಾನಿಕ ಬೆಳೆನಷ್ಟ ಪರಿಹಾರ ಹಾಗೂ ಬಾಳೆ ಬೆಳೆಗಾರರಿಗೆ ವಿಶೇಷ ಪ್ಯಾಕೆಜ್ ಘೋಷಣೆ ಮಾಡುವಂತೆ ಒತ್ತಾಯಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಘಟಕದ ವತಿಯಿಂದ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದಲ್ಲಿ ಪ್ರತಿಭಟನೆ ನಡೆಯಿತು. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದ ಪ್ರವಾಸಿ ಮಂದಿರದ ಮುಂಭಾಗದ ಹೆದ್ದಾರಿ ಬಳಿ ಜಮಾಯಿಸಿದ ಕಬ್ಬು ಬೆಳೆಗಾರರ ಸಂಘದ ಪದಾಧಿಕಾರಿಗಳು ರಸ್ತೆ ತಡೆ ನಡೆಸಿ ಮಾನವ ಸರಪಳಿ ನಡೆಸಿ ನಿರ್ಮಿಸಿದರು. ಈ ವೇಳೆ ರಾಜ್ಯ ಸರ್ಕಾರ, ಸಚಿವರು ಹಾಗೂ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು. ನಂತರ ಹೆದ್ದಾರಿ ಮೂಲಕ ಮೆರವಣಿಗೆ ಸಾಗಿ ತಾಲೂಕು ಕಚೇರಿ ಮುಂದೆ ಜಮಾವಣೆಗೊಂಡರು.



ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಮೈಸೂರು ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ಸುಮಾರು 2 ಸಾವಿರ ಹೆಕ್ಟೇರ್ ಪ್ರದೇಶ ತೀವ್ರ ಬಿರುಗಾಳಿಯಿಂದ ನಾಶವಾಗಿದೆ. ಅಧಿಕಾರಿಗಳು ಗ್ರಾಮೀಣ ಭಾಗದಲ್ಲಿ ರೈತರ ಸಮಸ್ಯೆಗಳನ್ನು ಆಲಿಸುವಲ್ಲಿ ಹಾಗೂ ಚುನಾಯಿತ ಪ್ರತಿನಿಧಿಗಳು ಚುನಾವಣಾ ನೀತಿ ಸಂಹಿತೆ ನೆಪವೊಡ್ಡಿ ರೈತರ ಬೆಳೆ ನಷ್ಟ ಅಂದಾಜು ಮಾಡುವಲ್ಲಿ ವಿಫಲರಾಗಿದ್ದಾರೆ. ಜಿಲ್ಲೆಯಲ್ಲಿ ರೈತರ ಪರವಾಗಿ ಜನಪ್ರತಿನಿಧಿಗಳು ಮಾತನಾಡುತ್ತಿಲ್ಲ. ನಷ್ಟ ಹೊಂದಿರುವ ಬೆಳೆ ಸಮೀಕ್ಷೆಯ ಬಗ್ಗೆ ಜಿಲ್ಲೆಯ ಚುನಾಯಿತ ಪ್ರತಿನಿಧಿಗಳು ಹಾಗೂ ಜಿಲ್ಲಾಡಳಿತ ನೊಂದ ರೈತರಿಗೆ ವಿಶೇಷ ಪ್ಯಾಕೇಜ್ ಘೋಷಿಸಲು ಸರ್ಕಾರದ ಹಂತದಲ್ಲಿ ವಿಫಲರಾಗಿದ್ದಾರೆ ಎಂದು ಕಿಡಿಕಾರಿದರು.

ಜಿಲ್ಲೆಯ ಕೆರೆಗಳಿಗೆ ಆದ್ಯತೆಯ ಮೇರೆಗೆ ನೀರು ತುಂಬಿಸಬೇಕು. ಹೊಸ ಕೃಷಿ ಪಂಪ್‌ಸೆಟ್‌ಗಳಿಗೆ ಅಕ್ರಮ ಸಕ್ರಮ ಯೋಜನೆಯನ್ನು ಮರು ಜಾರಿ ಮಾಡಬೇಕು. ರಾಜ್ಯ ಸರ್ಕಾರ ಬರದಲ್ಲಿ ನೊಂದಿರುವ ಹಾಲು ಉತ್ಪಾದಕರಿಗೆ ಪ್ರತಿ ಲೀಟರಿಗೆ 10 ರೂಪಾಯಿ ಹೆಚ್ಚುವರಿ ಪ್ರೋತ್ಸಾಹ ಧನ ನೀಡಬೇಕು. ಸಮರ್ಪಕವಾಗಿ ಕೃಷಿ ಪಂಪ್ ಸೆಟ್ ಗಳಿಗೆ 10 ಗಂಟೆ ಹಗಲು ವೇಳೆ ವಿದ್ಯುತ್ ನೀಡಬೇಕು. ಹೊಸ ಕೃಷಿ ಪಂಪ್‌ಸೆಟ್‌ಗಳಿಗೆ ಸಂಪರ್ಕ ಪಡೆಯಲು ಮೊದಲಿದ್ದಂತೆ ಅಕ್ರಮ ಸಕ್ರಮ ಯೋಜನೆಯನ್ನು ಮರು ಜಾರಿ ಮಾಡಬೇಕು ಎಂದು ಹೇಳಿದರು. ರೈತರು ಜಾಗೃತರಾಗಿ ಅಧಿಕಾರಿಗಳಿಗೆ ಮಾಹಿತಿಯನ್ನು ನೀಡಬೇಕು. ಮುಂದಿನ ದಿನಗಳಲ್ಲಿ ಸರ್ಕಾರಕ್ಕೆ ಜಿಲ್ಲಾಡಳಿತ ಸಮರ್ಪಕ ವರದಿಯನ್ನು ತಯಾರಿಸಿ ವಿಶೇಷ ಪ್ಯಾಕೇಜಿಗೆ ವರದಿ ಸಲ್ಲಿಸಬೇಕು. ಪ್ರತಿ ಎಕರೆಗೆ ಸುಮಾರು ಒಂದು ಲಕ್ಷ ರೂಪಾಯಿಯಷ್ಟು ಬೆಳೆ ನಷ್ಟ ನೀಡಬೇಕು. ಪ್ರಕೃತಿ ವಿಕೋಪದ ಅಡಿಯಲ್ಲಿ ಪ್ರತಿ ಎಕರೆಗೆ 6,800 ರೂ. ಮಾನದಂಡವನ್ನು ಕೈ ಬಿಟ್ಟು ನೊಂದ ಬಾಳೆ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಒತ್ತಾಯಿಸಿದರು. ಪ್ರತಿಯೊಬ್ಬ ರೈತರಿಗೂ ಬರಗಾಲದಿಂದ ಬೆಳ ನಷ್ಟವಾಗಿದೆ. ಆದರೆ ಸರ್ಕಾರ ಮಾನದಂಡ ಮತ್ತು ಷರತ್ತುಗಳಿಂದ ರೈತರನ್ನು ಒಡೆದು ಆಳುವ ನೀತಿಯನ್ನು ಅನುಸರಿಸುತ್ತಿದೆ. ತಕ್ಷಣ ಇದನ್ನು ಸರಿಪಡಿಸಬೇಕು ಕೃಷಿ ಸಂಬಂಧಿತ ಸಾಲಕ್ಕೆ ಸಿವಿಲ್ ಸ್ಕೋರ್ ಪರಿಗಣನೆಯನ್ನು ಕೈಬಿಡಬೇಕು. ದ್ವಿಪಕ್ಷೀಯ ಒಪ್ಪಂದ ಪತ್ರವನ್ನು ಜಾರಿಗೆ ತರಬೇಕು. ಕಬ್ಬು ಬೆಳೆಗಾರರಿಗೆ ಬರಬೇಕಾದ 950 ಕೋಟಿ ರೂಗಳನ್ನು ಲಾಭಾಂಶವನ್ನು ಹಾಗೂ 2023- 2024 ನೇ ಸಾಲಿನಲ್ಲಿ ಕಬ್ಬು ಅರೆದಿರುವ ಕಾರ್ಖಾನೆಗಳಿಂದ ರೈತರಿಗೆ ಲಾಭಾಂಶವನ್ನು ಹಂಚಿಕೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ಸಂಜೆ ಟಿಪ್ಸ್



## ಕ್ರಾಂತಿಕಾರಿ ವೆದರ್ಬಾಂಡ್ 8 ಅನಾವರಣಗೊಳಿಸಿದ ರಾಯಲ್ ಚಾಲೆಂಜರ್ಸ್ ತಾರೆಗಳು

ಏಷ್ಯಾ ಪೆಸಿಫಿಕ್ನಲ್ಲಿ ನಂ. 1 ಪೇಂಟ್ ಆಗಿರುವ ನಿಪ್ಪಾನ್ ಪೇಂಟ್, ಬೆಂಗಳೂರಿನಲ್ಲಿ ತನ್ನ ಹೊಸ ಉತ್ಪನ್ನವಾದ ವೆದರ್ಬಾಂಡ್ 8 ಅನ್ನು ಬಿಡುಗಡೆ ಮಾಡಿದೆ. ಈವೆಂಟ್ 2024 ರ ಮೇ 16 ರಂದು ನಡೆಯಿತು ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್ಸಿಬಿ) ಐಪಿಎಲ್ ತಂಡದಿಂದ ಕ್ಯಾಮರೂನ್ ಗ್ರೀನ್, ರಜತ್ ಪಾಟಿದಾರ್, ಲೋಕಿ ಫರ್ಗುಸನ್ ಮತ್ತು ಮಹಿಪಾಲ್ ಲೊಮ್ರೋರ್ ಅವರ ಉಪಸ್ಥಿತಿಯಿಂದ ಅಲಂಕರಿಸಲ್ಪಟ್ಟಿತು.ಬಿಡುಗಡೆ ಕಾರ್ಯಕ್ರಮವು ವೆದರ್ಬಾಂಡ್ 8 ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಎರಡರ ಉತ್ಸಾಹವನ್ನು ಪ್ರತಿಬಿಂಬಿಸುವ ನಾವೀನ್ಯತೆ ಮತ್ತು ಸ್ಥಿತಿಸ್ಥಾಪಕತ್ವದ ರೋಮಾಂಚಕ ಆಚರಣೆಯಾಗಿದೆ. ಅಭಿಮಾನಿಗಳು ತಮ್ಮ ನೆಚ್ಚಿನ ಆರ್ಸಿಬಿ ಕ್ರಿಕೆಟಿಗರನ್ನು ಭೇಟಿ ಮಾಡಲು ಮತ್ತು ಸ್ವಾಗತಿಸಲು ಮತ್ತು ವೆದರ್ಬಾಂಡ್ 8 ರ ಅನಾವರಣವನ್ನು ವೀಕ್ಷಿಸಲು ಅವಕಾಶವನ್ನು ಪಡೆದರು. ವೆದರ್ಬಾಂಡ್ 8 ಉತ್ತಮ-ಕಾರ್ಯಕ್ಷಮತೆಯ ಬಾಹ್ಯ ಬಣ್ಣವಾಗಿದ್ದು, ಕಠಿಣ ಹವಾಮಾನ ಪರಿಸ್ಥಿತಿಗಳನ್ನು ತಡೆದುಕೊಳ್ಳಲು ವಿಶೇಷವಾಗಿ ವಿನ್ಯಾಸಗೊಳಿಸಲಾಗಿದೆ. ಇದನ್ನು ಕ್ವಾಟ್ಜ್ ತಂತ್ರಜ್ಞಾನದೊಂದಿಗೆ ರೂಪಿಸಲಾಗಿದೆ, ಇದು ಇತರ ಬಣ್ಣಗಳಿಗಿಂತ ಎರಡು ಪಟ್ಟು ಕಠಿಣ ಮತ್ತು ಬಾಳಿಕೆ ಬರುವಂತೆ ಮಾಡುತ್ತದೆ. ಇದು ಮಳೆ, ಸೂರ್ಯ ಮತ್ತು ನಿಮ್ಮ ಮನೆಯ ಹೊರಭಾಗವನ್ನು ಹಾನಿಗೊಳಿಸಬಹುದಾದ ಇತರ ಅಂಶಗಳ ವಿರುದ್ಧ ಉತ್ತಮ ರಕ್ಷಣೆಗೆ ಪರಿವರ್ತಿಸುತ್ತದೆ. ಇದು ಶ್ರೀಮಂತ ಶೀನ್ ಫಿನಿಶ್ ಅನ್ನು ಸಹ ಒದಗಿಸುತ್ತದೆ. ಅದು ಮನೆಗಳ ನೋಟವನ್ನು ಹೆಚ್ಚಿಸುತ್ತದೆ ಮತ್ತು ಅದರ ಸುಧಾರಿತ ಆಂಕರ್ ಮಾಡುವ ಗುಣಲಕ್ಷಣಗಳು ಬಣ್ಣವು ಮೇಲ್ಮೈಗೆ ಉತ್ತಮವಾಗಿ ಅಂಟಿಕೊಳ್ಳುತ್ತದೆ ಎಂದು ಖಚಿತಪಡಿಸುತ್ತದೆ. ಹೆಚ್ಚುವರಿಯಾಗಿ, ವೆದರ್ಬಾಂಡ್ 8 ಪಾಚಿ ಬೆಳವಣಿಗೆ ಮತ್ತು ಕೊಳಕು ಪಿಕಪ್ಗೆ ನಿರೋಧಕವಾಗಿದೆ, ಗೋಡೆಗಳು ದೀರ್ಘಕಾಲದ ವರೆಗೆ ತಾಜಾವಾಗಿ ಕಾಣುವಂತೆ ಸಹಾಯ ಮಾಡುತ್ತದೆ.

## ತೊಂಡೆಕಾಯಿ ಫ್ರೈ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

**ತೊಂಡೆಕಾಯಿ - 1/2 ಕೆಜಿ, ಉಪ್ಪು - ರುಚಿಗೆ ತಕ್ಕಷ್ಟು, ಕೊತ್ತಂಬರಿ ಸೊಪ್ಪು - ಸ್ವಲ್ಪ, ಒಣ ಕೊಬ್ಬರಿ ಪುಡಿ - 2 ಟೇಬಲ್ ಸ್ಪೂನ್, ಎಳ್ಳು - 1 ½ ಟೇಬಲ್ ಸ್ಪೂನ್, ಕೊತ್ತಂಬರಿ ಬೀಜ - 1 ½ ಟೇಬಲ್ ಸ್ಪೂನ್, ಜೀರಿಗೆ - 1/2 ಟೀ ಸ್ಪೂನ್, ಒಣಮೆಣಸು - 3, ಕಡಲೆಬೇಳೆ - 2 ಟೇಬಲ್ ಸ್ಪೂನ್, ಇನ್ನು ಒಗ್ಗರಣೆಗೆ - ಸಾಸಿವೆ-1/2 ಟೀ ಸ್ಪೂನ್, ಇಂಗು - 1/4 ಟೀ ಸ್ಪೂನ್, ಕರಿಬೇವು - 6 ಎಸಳು.**

### ಮಾಡುವ ವಿಧಾನ

ಮೊದಲಿಗೆ ತೊಂಡೆಕಾಯಿಯನ್ನು ಚೆನ್ನಾಗಿ ತೊಳೆದು ಅದನ್ನು ನಾಲ್ಕು ಭಾಗವಾಗಿ ಉದ್ದಕ್ಕೆ ಸೀಳಿಕೊಳ್ಳಿ. ನಂತರ ಗ್ಯಾಸ್ ಮೇಲೆ ಒಂದು ಪ್ಯಾನ್ ಇಟ್ಟು ಅದಕ್ಕೆ 1 ಟೀ ಸ್ಪೂನ್ ಎಣ್ಣೆ ಹಾಕಿ ನಂತರ ಕೊತ್ತಂಬರಿ ಬೀಜ, ಜೀರಿಗೆ, ಕಡಲೆಬೇಳೆ ಹಾಕಿ 4 ನಿಮಿಷಗಳ ಕಾಲ ಹುರಿದುಕೊಂಡು ಒಂದು ಪ್ಲೇಟ್ ಗೆ ತೆಗೆದುಕೊಳ್ಳಿ. ನಂತರ ಅದೇ ಪ್ಯಾನ್ ಗೆ ಒಣಮೆಣಸು, ಎಳ್ಳು ಹಾಕಿ 2 ನಿಮಿಷಗಳ ಕಾಲ ಫ್ರೈ ಮಾಡಿಕೊಂಡು ಗ್ಯಾಸ್ ಆಫ್ ಮಾಡಿ.ನಂತರ ಒಂದು ಮಿಕ್ಸಿ ಜಾರಿಗೆ ಕೊತ್ತಂಬರಿ ಬೀಜ, ಜೀರಿಗೆ, ಕಡಲೆಬೇಳೆ, ಒಣಮೆಣಸು, ಎಳ್ಳು, ಒಣಕೊಬ್ಬರಿ ಹಾಕಿ ತರಿತರಿಯಾಗಿ ರುಬ್ಬಿಕೊಳ್ಳಿ. ರುಬ್ಬಿಕೊಂಡ ಮಿಶ್ರಣವನ್ನು ಸೀಳಿಕೊಂಡ ತೊಂಡೆಕಾಯಿಯ ಮಧ್ಯಭಾಗಕ್ಕೆ ತುಂಬಿಕೊಂಡು ಇಟ್ಟುಕೊಳ್ಳಿ. ನಂತರ ಒಂದು ಪ್ಯಾನ್ ಅನ್ನು ಗ್ಯಾಸ್ ಮೇಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿಕೊಳ್ಳಿ. ನಂತರ ಸಾಸಿವೆ, ಇಂಗು, ಅರಿಶಿನ ಪುಡಿ, ಕರಿಬೇವು ಹಾಕಿ 1 ನಿಮಿಷಗಳ ಕಾಲ ಫ್ರೈ ಮಾಡಿಕೊಳ್ಳಿ. ಬಳಿಕ ತೊಂಡೆಕಾಯಿಯನ್ನು ಪ್ಯಾನ್ ಗೆ ಹಾಕಿ 3 ನಿಮಿಷಗಳ ಕಾಲ ಫ್ರೈ ಮಾಡಿಕೊಳ್ಳಿ. ಆಮೇಲೆ ಒಂದು ಮುಚ್ಚಳ ಮುಚ್ಚಿ 25 ನಿಮಿಷಗಳ ಕಾಲ ಬೇಯಿಸಿಕೊಳ್ಳಿ. ನಂತರ ಮುಚ್ಚಳ ತೆಗೆದು ತೊಂಡೆಕಾಯಿಯನ್ನು ಇನ್ನೊಂದು ಬದಿಗೆ ಮಗುಚಿಕೊಳ್ಳಿ

## ಗ್ಲಾಮರ್‌ನಿಂದಲೇ ಸಿನಿರಂಗ ಆಳುತ್ತಿರುವ ನಟಿ ತಮನ್ನಾ



ನಟಿ ತಮನ್ನಾ ಹೆಸರು ಕೇಳಿದರೇ ಸಾಕು ಹುಚ್ಚೆದ್ದು ಕುಣಿಯುವವರಿದ್ದಾರೆ.. ತನ್ನ ಗ್ಲಾಮರ್‌ನಿಂದಲೇ ಸಿನಿರಂಗವನ್ನು ಆಳುತ್ತಿರುವ ನಟಿ ಎಂದರೇ ಅದು ತಮನ್ನಾ.. ಸಿನಿಜೀವನದ ಆರಂಭದಿಂದಲೂ ನೋ ಕಿಸ್ಸಿಂಗ್ ರೂಲ್ ಹಾಕಿಕೊಂಡಿದ್ದ ಈ ಚೆಲುವೆ ಇತ್ತೀಚೆಗೆ ಲಸ್ಟ್ ಸ್ಟೋರಿಸ್ ಹಾಗೂ ಝೀ ಕರ್ದಾ ಸಿರೀಸ್‌ನಲ್ಲಿ ಭರ್ಜರಿ ಬೋಲ್ಡ್ ಆಗಿ ಕಾಣಿಸಿಕೊಳ್ಳುವ ಮೂಲಕ ಹಲ್ಚಲ್ ಎಬ್ಬಿಸಿದ್ದರು. ಇತ್ತೀಚೆಗಷ್ಟೆ ಸಂದರ್ಶನವೊಂದರಲ್ಲಿ ತಮನ್ನಾ ಮತ್ತೊಮ್ಮೆ ಬೋಲ್ಡ್ ಕಾಮೆಂಟ್ ಮಾಡಿದ್ದಾರೆ. ರೊಮ್ಯಾಂಟಿಕ್ ಸೀನ್ , ಕಿಸ್ಸಿಂಗ್ ಸೀನ್ ಗಳಲ್ಲಿ ನಟಿಸುವಾಗ ನಾಯಕಿಯರು ಮುಜುಗರಕ್ಕೊಳಗಾಗುತ್ತಾರೆ ಎನ್ನಲಾಗುತ್ತೆ ಆದರೆ ಅದು ನಿಜವಲ್ಲ. ಆ ದೃಶ್ಯಗಳಲ್ಲಿ ನಾಯಕಿಯರಿಗಿಂತ ನಾಯಕರೇ ಹೆಚ್ಚು ಭಯಪಡ್ತಾರೆ ಎಂದು ಹಾಟ್ ಕಾಮೆಂಟ್ ಮಾಡಿದ್ದಾರೆ. ಒಬ್ಬ ನಟ ತನ್ನೊಂದಿಗೆ ನಾಯಕಿಯಾಗಿ ನಟಿಸುತ್ತಿರುವವರಿಗೆ ತೊಂದರೆಯಾಗದಂತೆ ಎಚ್ಚರ ವಹಿಸಬೇಕು ಎನ್ನುವುದಿರುತ್ತದೆ.. ಹೀಗಾಗಿ ಅವರು ಹೆಚ್ಚು ಭಯಪಡುತ್ತಿರುತ್ತಾರೆ. ಜತೆಗೆ ಹೆಚ್ಚು ಟೆನ್ಷನ್ ಕೂಡಾ ಆಗಿರುತ್ತಾರೆ ಎಂದು ತಮನ್ನಾ ಸಹ ನಟರೊಂದಿಗಿನ ಅನುಭವವನ್ನು ಹೇಳಿಕೊಂಡಿದ್ದಾರೆ. ತಮನ್ನಾ ಸಿನಿ ಜೀವನದ ವಿಚಾರಕ್ಕೆ ಬಂದರೇ ಜೈಲರ್ ಸಿನಿಮಾದ ಮೂಲಕ ದೊಡ್ಡ ಯಶಸ್ಸು ಗಳಿಸಿದ ನಟಿ ತಮನ್ನಾ ಸದ್ಯ ಸಂಭಾವನೆಯನ್ನು ದುಪ್ಪಟ್ಟು ಹೆಚ್ಚಿಸಿಕೊಂಡಿದ್ದಾರೆ ಎನ್ನುವ ಸುದ್ದಿಯೊಂದು ಸೋಷಿಯಲ್ ಮಿಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ.



## ಬಾಲಕಿಯರಿಗೆ ಋತುಮತಿ ಆರೋಗ್ಯ ಅರಿವು ಅಗತ್ಯ

### ಹೆಲ್ತ್ ಟಿಪ್ಸ್

ಪ್ರಾಕ್ಟರ್ ಅಂಡ್ ಗ್ಯಾಂಬಲ್ ನಿಂದ ಭಾರತದ ಮುಂಚೂಣಿಯ ಮಹಿಳೆಯರ ಆರೈಕೆಯ ಬ್ರಾಂಡ್ ವ್ಹಿಸ್ಪರ್ ಬಾಲಕಿಯರಲ್ಲಿ ಅತ್ಯಂತ ಕಿರಿಯ ವಯಸ್ಸಿನಲ್ಲಿ ಋತುಮತಿಯರಾಗುವ ಕುರಿತು ಅರಿವನ್ನು ಮೂಡಿಸುವ ಪ್ರಯತ್ನವನ್ನು ತನ್ನ ಕೀಪ್ ಗರ್ಲ್ಸ್ ಇನ್ ಸ್ಕೂಲ್(ಕೆಜಿಐಎಸ್) ಚಳವಳಿಯ ಭಾಗವಾಗಿ ಪ್ರಾರಂಭಿಸಿದೆ. ಬಾಲಕಿಯರು ಅತ್ಯಂತ ಕಿರಿಯ ಅಂದರೆ 8ನೇ ವರ್ಷದಿಂದ ಋತುಮತಿಯರಾಗುತ್ತಿದ್ದು ಅವರಿಗೆ ಅರಿವು ಮೂಡಿಸುವುದು ಬಹಳ ಮುಖ್ಯವಾಗಿದ್ದು ಮುಟ್ಟಿನ ಕುರಿತಾದ ಶಿಕ್ಷಣ ಮತ್ತು ಅದಕ್ಕೆ ಸಂಬಂಧಿಸಿದ ಉತ್ಪನ್ನಗಳ ಲಭ್ಯತೆ ಇಲ್ಲದೆ 26 ಮಿಲಿಯನ್ ಬಾಲಕಿಯರು ಶಾಲೆಯನ್ನು ತ್ಯಜಿಸುತ್ತಿದ್ದಾರೆ. ಅಧ್ಯಯನಗಳ ಪ್ರಕಾರ ಐದು ಬಾಲಕಿಯರಲ್ಲಿ ಒಬ್ಬರು ಋತುಚಕ್ರದ ಕುರಿತಾದ ಶಿಕ್ಷಣ ಮತ್ತು ಸಂಬಂಧಿಸಿದ ಉತ್ಪನ್ನಗಳ ಲಭ್ಯತೆ ಇಲ್ಲದೆ ಶಾಲೆ ತ್ಯಜಿಸುತ್ತಿದ್ದಾರೆ. ಕರ್ನಾಟಕದಲ್ಲಿ ಸ್ಯಾನಿಟರಿ ನ್ಯಾಪ್ಕಿನ್ ಬಳಕೆ ಶೇ.47ರಷ್ಟಿದ್ದು ಕಳೆದ 12 ತಿಂಗಳಿಂದ ಶೇ.53ರಷ್ಟು ಮನೆಗಳಲ್ಲಿ ಸ್ಯಾನಿಟರಿ ನ್ಯಾಪ್ಕಿನ್ ಗಳನ್ನು ಬಳಸಿಲ್ಲ. ಗ್ರಾಮೀಣ ಕರ್ನಾಟಕದಲ್ಲಿ ಈ ಪ್ರಮಾಣ ಶೇ.30ಕ್ಕಿಂತ ಕಡಿಮೆ.

ವ್ಹಿಸ್ಪರ್ ನ ಹೊಸ ಭಾವನಾತ್ಮಕ ಚಿತ್ರವು ಋತುಚಕ್ರದ ಕುರಿತು ಅರಿವೇ ಇಲ್ಲದ 8 ವರ್ಷದ ಕಿರಿಯ ಬಾಲಕಿಯರನ್ನು ಹೊಂದಿದೆ ಮತ್ತು ಅವರು ತಮ್ಮ ಮಿತ್ರರಲ್ಲಿ ಒಬ್ಬರಿಗೆ ಅನಿರೀಕ್ಷಿತ ರಕ್ತಸ್ರಾವದ ಸಂಭವನೀಯ ಕಾರಣಗಳ ಕುರಿತು ಹೇಳುವುದನ್ನು ಹೊಂದಿದೆ. ಈ ಚಿತ್ರವು ಅವರ ದೇಹದಲ್ಲಿ ಉಂಟಾಗುವ ಸಹಜ ಜೈವಿಕ ಬದಲಾವಣೆಯನ್ನು ಸಹಜವಾಗಿ ಕಾಣುವಂತೆ ಮಾಡಲು ಶಾಲೆಯಲ್ಲಿ ಬಾಲಕಿಯರಿಗೆ ಅರಿವು ಮೂಡಿಸುಸಿ ಅದನ್ನು ವಿನೋದಮಯ ಆಕರ್ಷಕ ಜಿಂಗಲ್ ''ಪೀರಿಯಡ್ಸ್ ಅಂದರೆ ನೀನು ಆರೋಗ್ಯಕರವಾಗಿದ್ದೀಯ'' ಎಂಬ ಸಂದೇಶ ನೀಡುತ್ತದೆ.

ಪಬ್ಲಿಸಿಸ್ ಗ್ರೂಪ್ ಚೀಫ್ ಕ್ರಿಯೇಟಿವ್ ಆಫೀಸರ್ ಮತ್ತು ದಕ್ಷಿಣ ಏಷ್ಯಾದ ಲಿಯೊ ಬರ್ನೆಟ್ ಅಧ್ಯಕ್ಷ ರಾಜ್ ದೀಪಕ್ ದಾಸ್, ''ಋತುಚಕ್ರದ ಸುತ್ತಲೂ ಬದಲಾಗುತ್ತಿರುವ ಸಂವಹನಗಳ ಕುರಿತು ನಮ್ಮ ಸಂಶೋಧನೆಯಲ್ಲಿ ಬಾಲಕಿಯರು ಹಿಂದಿಗಿಂತಲೂ ಬಹಳ ಬೇಗನೆ ಋತುಮತಿಯರಾಗುತ್ತಿದ್ದಾರೆ ಎನ್ನುವುದನ್ನು ತೋರಿಸಿದೆ. ಆದಾಗ್ಯೂ ಅವರಿಗೆ ನಂತರದಲ್ಲೂ ಅದರ ಕುರಿತು ಅರಿವನ್ನು ಮೂಡಿಸುವ ಕೆಲಸವಾಗುತ್ತಿಲ್ಲ. ವ್ಹಿಸ್ಪರ್ ಮತ್ತು ಲಿಯೊ ಬರ್ನೆಟ್ ಬಾಲಕಿಯರನ್ನು ದೀರ್ಘ ಅವಧಿಗೆ ಶಾಲೆಯಲ್ಲಿರಿಸಬೇಕು ಎನ್ನುವ ಕುರಿತು ಪ್ರಯತ್ನದಲ್ಲಿವೆ ಮತ್ತು ನಾವು ಈ ಅಂತರ ತುಂಬಲು ಬಯಸಿದ್ದೇವೆ. ನಮ್ಮ ಹೊಚ್ಚಹೊಸ ಅಭಿಯಾನವು 8 ವರ್ಷದ ಬಾಲಕಿಯರಿಗೆ ಅವರದೇ ಭಾಷೆಯಲ್ಲಿ ಹೇಳುತ್ತದೆ ಅಲ್ಲದೆ ಋತುಮತಿಯರಾಗುತ್ತಿದ್ದಾರೆ ಎಂದರೆ ಅವರು ಆರೋಗ್ಯವಾಗಿದ್ದಾರೆ ಎಂಬ ಅರ್ಥ ಬರುವ ಸುಂದರ ಗೀತೆಯಿದೆ. ಇದರ ಗುರಿ ಪುಟ್ಟ ಮಕ್ಕಳಿಗೆ ತಿಳಿವಳಿಕೆ ನೀಡುವುದು ಮಾತ್ರವಲ್ಲ ಈ ಗೀತೆಯನ್ನು ಪೋಷಕರು ಮತ್ತು ಶಿಕ್ಷಕರಿಗೆ ಹೆಚ್ಚು ಸಬಲೀಕರಿಸುವ ವಿಧಾನದಲ್ಲಿ ಮುಟ್ಟಿನ ಕುರಿತು ಬೋಧಿಸಲು ಸನ್ನದ್ಧವಾಗಿಸುತ್ತದೆ'' ಎಂದರು.

ಋತುಚಕ್ರದ ಜೀವಶಾಸ್ತ್ರದಲ್ಲಿ ಮಹತ್ತರ ಬದಲಾವಣೆಯಾಗಿದೆ. ಇದರಿಂದ ಬಾಲಕಿಯರಿಗೆ ಮುಂಚೆಯೇ ಅರಿವು ಮೂಡಿಸಬೇಕಾಗಿದೆ ಮತ್ತು ಅವರಿಗೆ ಈ ದೈಹಿಕ ಪ್ರಕ್ರಿಯೆಗೆ ಸಜ್ಜುಗೊಳಿಸಬೇಕಿದೆ. ಈ ಉಪಕ್ರಮದ ಮೂಲಕ ನಾವು ಅವರಿಗೆ ಹೇಗೆ ಋತುಚಕ್ರವು ಆರೋಗ್ಯಕರ ಮತ್ತು ಹೇಗೆ ಅವರು ತಮ್ಮ ಮುಟ್ಟಿನ ದಿನಗಳಲ್ಲಿ ಕಾಳಜಿ ವಹಿಸಬೇಕು ಎನ್ನುವುದನ್ನು ತಿಳಿಸಲು ಶ್ರಮಿಸುತ್ತಿದ್ದೇವೆ. ಪ್ರತಿ ವರ್ಷ ವ್ಹಿಸ್ಪರ್ 60,000ಕ್ಕೂ ಹೆಚ್ಚು ಶಾಲೆಗಳಿಗೆ ಭೇಟಿ ನೀಡಿ ಋತುಚಕ್ರದ ಕುರಿತಾದ ಶಿಕ್ಷಣ ನೀಡುತ್ತದೆ ಎಂದು ಪ್ರಾಕ್ಟರ್ ಅಂಡ್ ಗ್ಯಾಂಬಲ್ ನ ಉಪಾಧ್ಯಕ್ಷ ಮತ್ತು ಇಂಡಿಯಾ ಫೆಮಿನೈನ್ ಕೇರ್ ಕ್ಯಾಟಗರಿ ಲೀಡರ್ ಗಿರೀಶ್ ಕಲ್ಯಾಣರಾಮನ್ ಹೇಳಿದರು.

## ಆಸ್ಟರ್ ಆರ್ ವಿ ಆಸ್ಪತ್ರೆಯಲ್ಲಿ 4.005 ಕೆಜಿ ತೂಕದ ಗರ್ಭಾಶಯದ ಫೈಬ್ರಾಯ್ಡ್ ಯಶಸ್ವಿ ಶಸ್ತ್ರಚಿಕಿತ್ಸೆ



ಬೆಂಗಳೂರಿನ ಆಸ್ಟರ್ ಆರ್ ವಿ ಆಸ್ಪತ್ರೆಯ ವೈದ್ಯರು ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆಯ ಮೂಲಕ ಗರ್ಭಾಶಯದಿಂದ 4.005 ಕೆಜಿ ಫೈಬ್ರಾಯ್ಡ್ ತೆಗೆದುಹಾಕುವ ಮೂಲಕ ದಕ್ಷಿಣ ಭಾರತದಲ್ಲಿ ಮೊದಲ ಬಾರಿಗೆ ದಾಖಲೆ ಸೃಷ್ಟಿಸಿದ್ದಾರೆ. ಆಸ್ಟರ್ ಆರ್ ವಿ ಆಸ್ಪತ್ರೆಯ ಲ್ಯಾಪರೊಸ್ಕೋಪಿಕ್ ಸರ್ಜನ್ ? ಮುಖ್ಯ ತಜ್ಞ ಡಾ. ಸುನಿಲ್ ಈಶ್ವರ್ ಮತ್ತು ಅವರ ತಂಡ 42 ವರ್ಷದ ವಿಜೇತಾ (ಹೆಸರು ಬದಲಾಗಿದೆ)ರಿಗೆ ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ನಡೆಸಿ 4 ಕೆಜಿ ತೂಕದ ಗರ್ಭಾಶಯದ ಫೈಬ್ರಾಯ್ಡ್ ತೆಗೆದುಹಾಕಿದರು. ಯಾವುದೇ ಬಾಹ್ಯ ರೋಗಲಕ್ಷಣಗಳನ್ನು ಎಂದಿಗೂ ಅನುಭವಿಸಿರದ ವಿಜೇತಾರವರ ದೇಹದೊಳಗೆ ಮೌನ ಹೊರೆ ಇತ್ತು, ಇದು ಅವರ ಗರ್ಭಾಶಯದ ವ್ಯವಸ್ಥೆಯನ್ನು ಬದಲಾಯಿಸಿದುದಲ್ಲದೆ, ಆರೋಗ್ಯಕ್ಕೆ ಅಪಾಯವನ್ನುಂಟುಮಾಡಿತು. ಯಾವುದೇ ವೈದ್ಯಕೀಯ ಕಾಯಿಲೆಗಳು ಅಥವಾ ಹಿಂದಿನ ಶಸ್ತ್ರಚಿಕಿತ್ಸೆಗಳ ಇತಿಹಾಸವಿಲ್ಲದ ಕಾರಣ, ಅಂತಹ ಬೃಹತ್ ಫೈಬ್ರಾಯ್ಡ್ ಬಹಿರಂಗಪಡಿಸುವಿಕೆಯು ಆಘಾತವನ್ನುಂಟುಮಾಡಿತು.

ತನ್ನ ಸ್ಥಿತಿಯ ವಾಸ್ತವತೆಯನ್ನು ಅರಿತುಕೊಂಡ ವಿಜೇತಾ, ಸಂಪೂರ್ಣ ಲ್ಯಾಪರೊಸ್ಕೋಪಿಕ್ ಹಿಸ್ಟರೆಕ್ಟಮಿ ಅಥವಾ ಅಬ್ಡಾಮಿನಲ್ ಹಿಸ್ಟರೆಕ್ಟಮಿ ನಡುವೆ ನಿರ್ಣಾಯಕ ನಿರ್ಧಾರ ತೆಗೆದುಕೊಳ್ಳಬೇಕಾಯಿತು. ಆಸ್ಟರ್ ಆರ್ ವಿ ಆಸ್ಪತ್ರೆಯ ವೈದ್ಯಕೀಯ ತಂಡದ ಮಾರ್ಗದರ್ಶನದೊಂದಿಗೆ, ಅವರು ಧೈರ್ಯದಿಂದ ಸಂಪೂರ್ಣ ಲ್ಯಾಪರೊಸ್ಕೋಪಿಕ್ ಹಿಸ್ಟರೆಕ್ಟಮಿ ಆಯ್ಕೆ ಮಾಡಿಕೊಂಡರು, ಪರಿಹಾರ ಕಂಡುಕೊಳ್ಳುವ ಮತ್ತು ಸಾಮಾನ್ಯ ಜೀವನಕ್ಕೆ ಮರಳುವ ಭರವಸೆ ಪಡೆದರು. ಆಸ್ಟರ್ ಆರ್ ವಿ ಆಸ್ಪತ್ರೆಯ ಸಮರ್ಥ ವೈದ್ಯರಲ್ಲಿ ತನ್ನ ನಂಬಿಕೆ ಇರಿಸಿ, ವಿಜೇತಾ ಗುಣಪಡಿಸುವ ಹಾದಿಯನ್ನು ಪ್ರಾರಂಭಿಸಿದರು.

ಸ್ಕ್ಯಾನ್ ಮಾಡಿದ ವರದಿಗಳೊಂದಿಗೆ ನಾನು ಆಸ್ಪತ್ರೆಗೆ ಹೋದೆ. ಮುಟ್ಟಿನ ನೋವು, ಋತುಚಕ್ರ ಅಥವಾ ಅತಿಯಾದ ರಕ್ತಸ್ರಾವದ ಕುರಿತಾಗಿ ನನಗೆ ದೂರುಗಳಿರಲಿಲ್ಲ. ವಾಡಿಕೆಯ ಸ್ಕ್ಯಾನ್ ನಡೆಸಿದ ರೇಡಿಯಾಲಜಿಸ್ಟ್ ಡಾ. ವಿಜಯಲಕ್ಷ್ಮಿ ವಿ, ನನ್ನ ಗರ್ಭಾಶಯದಲ್ಲಿ 32 ರಿಂದ 34 ವಾರಗಳ ಗಾತ್ರದ ಫೈಬ್ರಾಯ್ಡ್‌ಗಳಿವೆ ಎಂದು ತಿಳಿಸಿದರು. ಅಂತಹ ದೊಡ್ಡ ಫೈಬ್ರಾಯ್ಡ್‌ಗಳನ್ನು ಹೊಂದುವ ನ್ಯೂನತೆಗಳು, ಅನಾನುಕೂಲಗಳು ಮತ್ತು ಆರೋಗ್ಯ ಸಂಬಂಧಿತ ತೊಡಕುಗಳ ಬಗ್ಗೆ ನನಗೆ ಅರ್ಥಮಾಡಿಸಲಾಯಿತು. ಅವರು ನನ್ನನ್ನು ಡಾ. ಸುನಿಲ್ ಈಶ್ವರ್ ಅವರ ಬಳಿಗೆ ಕಳುಹಿಸಿದರು, ಅವರು ಎರಡೂ ಶಸ್ತ್ರಚಿಕಿತ್ಸಾ ವಿಧಾನಗಳನ್ನು ಮತ್ತಷ್ಟು ವಿವರಿಸಿದರು. ಮತ್ತು ನಾನು ಲ್ಯಾಪರೋಸ್ಕೋಪಿಕ್ ಶಸ್ತ್ರಚಿಕಿತ್ಸೆಯನ್ನು ಆಯ್ಕೆಮಾಡಿಕೊಂಡೆ,'' ಎನ್ನುತ್ತಾರೆ ಬೆಂಗಳೂರಿನ ನಿವಾಸಿ ವಿಜೇತಾ. ''ಲ್ಯಾಪರೊಸ್ಕೋಪಿಕ್ ವಿಧಾನ ಆಯ್ಕೆ ಮಾಡಲಾಗಿದ್ದು, ಇದು ತನ್ನದೇ ಆದ ವಿಶಿಷ್ಟವಾದ ಅಡೆತಡೆಗಳು ಮತ್ತು ಸಂಕೀರ್ಣತೆಗಳನ್ನು ಹೊಂದಿದ್ದವು. ಗರ್ಭಾಶಯದ ಪ್ರದೇಶದಲ್ಲಿ ಲ್ಯಾಪರೊಸ್ಕೋಪಿ ಮಾಡುವಲ್ಲಿ ಒಳಗೊಂಡಿರುವ ಸವಾಲುಗಳಲ್ಲಿ ಒಂದೆಂದರೆ ಹೊಟ್ಟೆಯನ್ನು ಆಕ್ರಮಿಸುವ ಸಂಪೂರ್ಣ ಫೈಬ್ರಾಯ್ಡ್ /ಗರ್ಭಾಶಯದ ಗಾತ್ರದಿಂದಾಗಿ ಉಪಕರಣದ ಇರಿಸುವಿಕೆಗೆ ಲಭ್ಯವಿರುವ ನಿರ್ಬಂಧಿತ ಸ್ಥಳ. ಆದ್ದರಿಂದ, ಉಪಕರಣಗಳನ್ನು ಕುಶಲತೆಯಿಂದ ನಿರ್ವಹಿಸಲು ಜಾಗವನ್ನು ಸೃಷ್ಟಿಸುವುದು ಒಂದು ಸವಾಲಾಗುತ್ತದೆ. ಸಾಮಾನ್ಯ ರಕ್ತನಾಳಗಳನ್ನು ಪತ್ತೆಹಚ್ಚುವುದು ಸವಾಲಿನ ಕೆಲಸವಾಗುತ್ತದೆ. ಗರ್ಭಾಶಯಕ್ಕೆ ರಕ್ತವನ್ನು ಪೂರೈಸುವ ರಕ್ತನಾಳಗಳನ್ನು ಗುರುತಿಸುವುದು ಮತ್ತು ಅದನ್ನು ಯಶಸ್ವಿಯಾಗಿ ನಿಗ್ರಹಿಸುವುದು ಸ್ವತಃ ಒಂದು ಕಾರ್ಯವಾಗಿತ್ತು,'' ಎಂದು ಆಸ್ಟರ್ ಆರ್ ವಿ ಆಸ್ಪತ್ರೆಯ ಲ್ಯಾಪರೊಸ್ಕೋಪಿಕ್ ಸರ್ಜನ್ ? ಮುಖ್ಯ ತಜ್ಞ ಡಾ. ಸುನಿಲ್ ಈಶ್ವರ್ ಅಭಿಪ್ರಾಯಪಟ್ಟರು. ಸಂತಾನೋತ್ಪತ್ತಿ ವಯಸ್ಸಿನ ಶೇಕಡಾ 20 ರಿಂದ 30ರಷ್ಟು ಮಹಿಳೆಯರಲ್ಲಿ ಫೈಬ್ರಾಯ್ಡ್‌ಗಳು ಕಂಡುಬರುತ್ತವೆ. ಆದರೂ, ಗರ್ಭಾಶಯದಲ್ಲಿ ಅಂತಹ ದೊಡ್ಡ ಫೈಬ್ರಾಯ್ಡ್ ಕಂಡುಬರುವುದು ಅತ್ಯಂತ ಅಪರೂಪದ ಮತ್ತು ಕೇಳಿರದ ಪ್ರಕರಣ. ಫೈಬ್ರಾಯ್ಡ್ ಅನ್ನು ತೆಗೆದುಹಾಕುವ ಸಾಮಾನ್ಯ ಪ್ರಕ್ರಿಯೆಗೆ ಸುಮಾರು 8 ಸೆಂ. ಮೀ. ಕತ್ತರಿಸುವಿಕೆ ಅಗತ್ಯವಿರುತ್ತದೆ. ಆದರೆ ಲ್ಯಾಪರೊಸ್ಕೋಪಿಕ್ ಕಾರ್ಯವಿಧಾನಕ್ಕೆ ಗರಿಷ್ಠ 3 ಸೆಂ. ಮೀ. ಗಳು ಬೇಕಾಗಿತ್ತು. ಅರಿವಳಿಕೆ ತಂಡವು ಉತ್ತಮ ಕೆಲಸ ಮಾಡಿದೆ. ಸಂಪೂರ್ಣ ಮಯೋಮೆಕ್ಟಮಿ ಅಥವಾ 4.005 ಕೆಜಿಯ ಫೈಬ್ರಾಯ್ಡ್ ತೆಗೆಯುವ ಪ್ರಕ್ರಿಯೆಯು ಸುಮಾರು 5 ಗಂಟೆಗಳ ಕಾಲ ನಡೆಯಿತು. ವಾಡಿಕೆಯ ಕಾರ್ಯವಿಧಾನಗಳು ಸುಮಾರು 1.5 ಗಂಟೆಗಳಷ್ಟು ಕಾಲ ನಡೆದವು. ಆದರೆ, ವಿವಿಧ ಆಕಾರಗಳು ಮತ್ತು ಗಾತ್ರಗಳ ಸುಮಾರು 150 ಫೈಬ್ರಾಯ್ಡ್ ಗಳನ್ನು ಶಸ್ತ್ರಚಿಕಿತ್ಸೆ ನಡೆಸಲು ಮತ್ತು ತೆಗೆದುಹಾಕಲು 2.5 ಗಂಟೆಗಳ ಕಾಲ ತೆಗೆದುಕೊಂಡಿತು, ಇದರಲ್ಲಿ ಅತಿದೊಡ್ಡ ಫೈಬ್ರಾಯ್ಡ್ 12 ಸೆಂ.ಮೀ.ಗಳು,'' ಎಂದರು ಡಾ. ಈಶ್ವರ್.

## ವೈಟ್ಹೆಡ್ ಸಮಸ್ಯೆಯೇ

### ಬ್ಯೂಟಿ ಟಿಪ್ಸ್



ಮಹಿಳೆಯರಲ್ಲಿ ಸಾಮಾನ್ಯವಾಗಿ ಬ್ಲಾಕ್ಹೆಡ್ಸ್ ಇಲ್ಲವೇ ವೈಟ್ಹೆಡ್ಸ್ ಸಮಸ್ಯೆ ಕಾಣಿಸಿಕೊಳ್ಳುತ್ತದೆ. ಅದರಲ್ಲೂ ವೈಟ್ಹೆಡ್ ಸಮಸ್ಯೆ 11 ರಿಂದ 25 ವರ್ಷ ಒಳಗಿನವರಲ್ಲಿ ಸರ್ವೇ ಸಾಮಾನ್ಯವಾಗಿ ಕಂಡುಬರುತ್ತದೆ. ಇದಕ್ಕಾಗಿ ನೀವು ಹೆಚ್ಚು ಚಿಂತಿಸಬೇಕಿಲ್ಲ. ಮನೆ ಮದ್ದನ್ನು ಬಳಸಿ ಈ ಸಮಸ್ಯೆಯನ್ನು ಬೇರು ಸಮೇತ ಕಿತ್ತು ಹಾಕಬಹುದಾಗಿದೆ. ವೈಟ್ಹೆಡ್ ಕೂಡ ಒಂದು ರೀತಿಯಲ್ಲಿ ಮೊಡವೆ ಸಮಸ್ಯೆ ಇದ್ದಂತೆಯೇ. ಇದು ಸಾಮಾನ್ಯವಾಗಿ ಮೂಗು, ಗಲ್ಲ, ಹಣೆ ಹಾಗೂ ಕಿವಿಯ ಬಳಿ ಹೆಚ್ಚಾಗಿ ಕಾಣಿಸಿಕೊಳ್ಳತ್ತದೆ. ಸತ್ತ ಕೋಶಗಳು ಹಾಗೂ ಎಣ್ಣೆ ಚರ್ಮದಿಂದ ಈ ಸಮಸ್ಯೆ ಉಂಟಾಗುತ್ತದೆ. ತ್ವಚೆಗೆ ಉಸಿರಾಡಲು ಸಾಧ್ಯವಾಗದೇ ಇದ್ದಾಗ ಈ ಸಮಸ್ಯೆ ಕಾಣಿಸಿಕೊಳ್ಳುತ್ತದೆ.

**ಟೊಮ್ಯಾಟೋ:** ತ್ವಚೆಯ ಆರೋಗ್ಯಕ್ಕೆ ಟೊಮ್ಯಾಟೋ ಬಳಕೆ ತುಂಬಾನೇ ಒಳ್ಳೆಯದು. ಇದರಲ್ಲಿ ವಿಟಾಮಿನ್ ಸಿ ಅಗಾಧ ಪ್ರಮಾಣದಲ್ಲಿ ಇರುತ್ತದೆ. ಟೋಮ್ಯಾಟೋವನ್ನು ಕತ್ತರಿಸಿ ಮುಖಕ್ಕೆ ತಿಕ್ಕಿ. ಇದಾದ ಮೇಲೆ 5 ನಿಮಿಷ ಬಿಟ್ಟು ಮುಖ ತೊಳೆದುಕೊಳ್ಳಿ.

**ಮೊಸರು:** ವೈಟ್ಹೆಡ್ ತೆಗೆಯುವಲ್ಲಿ ಮೊಸರು ಕೂಡ ಪ್ರಮುಖ ಪಾತ್ರ ವಹಿಸುತ್ತದೆ. 2 ಚಮಚ ಮೊಸರಿಗೆ 1 ಚಮಚ ಓಟ್ಮೀಲ್ ಹಾಕಿ ಮಿಶ್ರಣ ಮಾಡಿ. ಈ ಫೇಸ್ಪ್ಯಾಕ್ನ್ನು ಹಚ್ಚಿಕೊಂಡು 10 ನಿಮಿಷ ಹಾಗೆ ಬಿಡಿ. ಬಳಿಕ ಸ್ವಲ್ಪ ಮಸಾಜ್ ಮಾಡಿಕೊಂಡು ಮುಖ ತೊಳೆದುಕೊಳ್ಳಿ.

ಮುಲ್ತಾನಿ ಮಿಟ್ಟಿ: ವೈಟ್ಹೆಡ್ನಿಂದ ಪಾರಾಗಲು ನೀವು ಮುಲ್ತಾನಿ ಮಿಟ್ಟಿಯನ್ನೂ ಬಳಕೆ ಮಾಡಬಹುದು. ಬಾದಾಮಿಯನ್ನು ಪುಡಿ ಮಾಡಿ ಇದಕ್ಕೆ ಸ್ವಲ್ಪ ಗ್ಲಿಸರಿನ್ ಹಾಗೂ 1 ಚಮಚ ಮುಲ್ತಾನಿ ಮಿಟ್ಟಿ ಸೇರಿಸಿ. ಇದರಿಂದ ಮುಖವನ್ನು ಸ್ಕಬ್ ಮಾಡಿ ಬಳಿಕ ತೊಳೆದುಕೊಳ್ಳಿ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ನೆಮ್ಮದಿ ಶಾಂತಿ, ಗೆಳೆಯರಿಂದ ಸಹಾಯ, ಮಾನಸಿಕ ಒತ್ತಡ, ಮಾತಿಗೆ ಮರುಳಾಗದಿರಿ.

**ವೃಷಭ:** ಬಹು ಸೌಖ್ಯ, ಮಾನಸಿಕ ಒತ್ತಡ, ಮುಗಿನ ಮೇಲೆ ಕೋಪ, ಚೋರ ಭಯ, ಅಕಾಲ ಭೋಜನ.

**ಮಿಥುನ:** ಆಕಸ್ಮಿಕ ಖರ್ಚು, ಪರರ ಮಾತಿಗೆ ಕಿವಿ ಕೊಡಬೇಡಿ, ಸ್ತ್ರೀಯರು ತಾಳ್ಮೆಯಿಂದ ಇರಿ.

**ಕಟಕ:** ನಾನಾ ವಿಚಾರಗಳಲ್ಲಿ ಆಸಕ್ತಿ, ನೀಚ ಜನರಿಂದ ದೂರವಿರಿ, ವಿದೇಶ ಪ್ರಯಾಣ, ಕುಟುಂಬ ಸೌಖ್ಯ.

**ಸಿಂಹ:** ಕೆಲಸ ಕಾರ್ಯಗಳು ವಿಳಂಬ, ವಿಪರೀತ ವ್ಯಸನ, ಅಧಿಕ ತಿರುಗಾಟ, ಸರ್ಕಾರಿ ಕೆಲಸದವರಿಗೆ ತೊಂದರೆ.

**ಕನ್ಯಾ:** ಸಣ್ಣ ಪುಟ್ಟ ವಿಷಯಗಳಿಂದ ಮನಸ್ತಾಪ, ಹಿತ ಶತ್ರು ಭಾದೆ, ಕಾರ್ಯ ಸಾಧನೆ, ವಿವಿದ ರೀತಿಯಿಂದ ಧನ ಲಾಭ.

**ತುಲಾ:** ಮಿತ್ರರಿಂದ ನಿಂದನೆ, ಅನರ್ಥ, ಮಕ್ಕಳಿಂದ ನೋವು, ರೋಗಭಾದೆ, ಯತ್ನ ಕಾರ್ಯ ಭಂಗ.

**ವೃಶ್ಚಿಕ:** ಎಷ್ಟೇ ಹಣ ಬಂದರೂ ಉಳಿಯುವುದಿಲ್ಲ, ಸ್ವಯಂಕೃತ ಅಪರಾಧ, ಕಾರ್ಯ ವಿಘಾತ, ವಾದ ವಿವಾದ.

**ಧನಸ್ಸು:** ಕೆಲಸದಲ್ಲಿ ಏಕಾಗ್ರತೆ, ಗುರಿಯನ್ನು ಸಾಧಿಸುವಿರಿ, ಸ್ತ್ರೀಯರಿಗೆ ಶುಭ, ಹಿರಿಯರಲ್ಲಿ ಭಕ್ತಿ.

**ಮಕರ:** ರಾಜಕೀಯ ಕ್ಷೇತ್ರದವರಿಗೆ ಶುಭ, ದೈವಿಕ ಚಿಂತನೆ, ಅನ್ಯರ ಮನಸ್ಸು ಗೆಲ್ಲುವಿರಿ, ರೋಗ ಭಾದೆ.

**ಕುಂಭ:** ಅತಿ ಬುದ್ಧಿವಂತಿಕೆ, ಅಮೂಲ್ಯ ವಸ್ತುಗಳ ಖರೀದಿ, ಹಣಕಾಸಿನ ಪರಿಸ್ಥಿತಿ ಉತ್ತಮ, ಪ್ರತಿಷ್ಠಿತ ಜನರ ಪರಿಚಯ.

**ಮೀನ:** ಬಾಕಿ ವಸೂಲಿ, ಉದ್ಯೋಗದಲ್ಲಿ ಅಭಿವೃದ್ಧಿ, ಧನ ಲಾಭ, ಅನಾವಶ್ಯಕ ವಿಷಯಗಳಿಂದ ದೂರವಿರಿ.

## ವಿಶ್ವ ಧ್ಯಾನ ದಿನ

ನಾವು ಪ್ರತಿ ವರ್ಷ ಮೇ 21 ರಂದು ವಿಶ್ವ ಧ್ಯಾನ ದಿನವನ್ನು ಆಚರಿಸುತ್ತೇವೆ. ಧ್ಯಾನವು ಪುರಾತನ ಕಾಲದಿಂದಲೂ, 3000 ಃಅ ಯಷ್ಟು ಹಿಂದೆಯೇ, ಪ್ರಾಚೀನ ಭಾರತೀಯ ಪಠ್ಯಗಳಲ್ಲಿ ಉಲ್ಲೇಖಿಸಲ್ಪಟ್ಟಿರುವ ಅಭ್ಯಾಸವಾಗಿದೆ. ಇದು ಮೂರನೇ ಶತಮಾನದ ಚೀನಾದಲ್ಲಿಯೂ ಬೇರುಗಳನ್ನು ಹೊಂದಿದೆ. ಅಭ್ಯಾಸವು ಭಾವನಾತ್ಮಕವಾಗಿ ಶಾಂತ ಮತ್ತು ಸ್ಥಿರ ಸ್ಥಿತಿಯನ್ನು ಸಾಧಿಸಲು ಸಾವಧಾನತೆ ಅಥವಾ ವಸ್ತು, ಆಲೋಚನೆ ಅಥವಾ ಚಟುವಟಿಕೆಯ ಮೇಲೆ ಕೇಂದ್ರೀಕರಿಸುವಂತಹ ತಂತ್ರಗಳನ್ನು ಬಳಸುವುದನ್ನು ಒಳಗೊಂಡಿರುತ್ತದೆ. ಇಂದು, ಧ್ಯಾನವು ಹಿಂದಿನ ಸ್ಟೀರಿಯೊಟೈಪ್ಗಳನ್ನು ಮೀರಿದೆ ಮತ್ತು ಪಶ್ಚಿಮದಲ್ಲಿ ಮುಖ್ಯವಾಹಿನಿಯ ಸಂಸ್ಕೃತಿಯನ್ನು ಪ್ರವೇಶಿಸಿದೆ. ಧ್ಯಾನದ ಅಭ್ಯಾಸವು ಅದರ ಬೇರುಗಳನ್ನು ಸುಮಾರು 3000 ಃ.ಅ. ಆದಾಗ್ಯೂ, ಕೆಲವು ವಿದ್ವಾಂಸರು ಧ್ಯಾನವು ಮಾನವೀಯತೆಯಷ್ಟು ಹಳೆಯದಾಗಿದೆ ಎಂದು ಪ್ರತಿಪಾದಿಸುತ್ತಾರೆ, ನಿಯಾಂಡರ್ತಾಲ್ಗಳು ಸಹ ಧ್ಯಾನದ ಸಾಮರ್ಥ್ಯವನ್ನು ಹೊಂದಿರಬಹುದು ಎಂದು ಹೇಳಿದ್ದಾರೆ. ಲ್ಯಾಟಿನ್ ಪದ 'ಮೆಡಿಟಟಮ್' ನಿಂದ ಪಡೆಯಲಾಗಿದೆ, ಧ್ಯಾನವು ವ್ಯಕ್ತಿಗಳು ಉನ್ನತ ಮಟ್ಟದ ಅರಿವನ್ನು ಪಡೆಯಲು ಮತ್ತು ಮಾನಸಿಕವಾಗಿ ಮತ್ತು ಭಾವನಾತ್ಮಕವಾಗಿ ಶಾಂತ ಮತ್ತು ಸ್ಥಿರ ಸ್ಥಿತಿಯನ್ನು ತಲುಪಲು ಬಳಸುವ ತಂತ್ರ ಅಥವಾ ತಂತ್ರಗಳ ಗುಂಪನ್ನು ಉಲ್ಲೇಖಿಸುತ್ತದೆ. 1500 ಃಅ ಯಲ್ಲಿ ಧ್ಯಾನವನ್ನು ದೃಢವಾಗಿ ಪತ್ತೆಹಚ್ಚಬಹುದು. ಭಾರತದಲ್ಲಿ, ಹಳೆಯ ದಾಖಲೆಗಳು 'ಜ್ಞಾನ' ಅಥವಾ 'ಧ್ಯಾನ' ಅಥವಾ ಮನಸ್ಸಿನ ತರಬೇತಿಯ ಅಭ್ಯಾಸವನ್ನು ಉಲ್ಲೇಖಿಸುತ್ತವೆ. ಈ ದಾಖಲೆಗಳು 'ವೇದಾಂತಿಸಂ' ಹಿಂದೂ ಸಂಪ್ರದಾಯದಿಂದ ಹುಟ್ಟಿಕೊಂಡಿವೆ ಎಂದು ಹೇಳಲಾಗುತ್ತದೆ. ಧ್ಯಾನವು ಪ್ರಾಚೀನ ಚೀನಾದಲ್ಲಿ ಮೂರು ಮತ್ತು ಆರನೇ ಶತಮಾನದಷ್ಟು ಹಿಂದೆಯೇ, ಪುರಾತನ ಚೀನೀ ತತ್ವಜ್ಞಾನಿ ಲಾವೋಜಿಯ ಬರಹಗಳೊಂದಿಗೆ ಬೇರುಗಳನ್ನು ಹೊಂದಿದೆ. ಅವರು ತಮ್ಮ ಕೃತಿಗಳಲ್ಲಿ ನಂತರದ ಶತಮಾನಗಳಲ್ಲಿ ಬಳಸಿದ ಧ್ಯಾನ ತಂತ್ರಗಳಂತೆಯೇ ಹಲವಾರು ಪದಗಳನ್ನು ಬಳಸಿದರು. ಈ ಪದಗಳಲ್ಲಿ ಕೆಲವು 'ಶೌ ಝೋಂಗ್,' ಅಂದರೆ ಮಧ್ಯದಲ್ಲಿ ಕಾವಲು ಮತ್ತು ಬಾವೊ ಯಿ, ಇದು ಒಂದನ್ನು ಅಪ್ಪಿಕೊಳ್ಳುವುದು ಎಂದು ಅನುವಾದಿಸುತ್ತದೆ. ಚೀನಾ ಮತ್ತು ಭಾರತಕ್ಕೆ ಈ ಸಂಪರ್ಕಗಳ ಹೊರತಾಗಿಯೂ, ಧ್ಯಾನದ ನಿಖರವಾದ ಮೂಲವನ್ನು ಕಂಡುಹಿಡಿಯುವುದು ಕಷ್ಟಕರವಾಗಿದೆ ಏಕೆಂದರೆ ಇದನ್ನು ಕ್ರಿಶ್ಚಿಯನ್ ಧರ್ಮ, ಇಸ್ಲಾಂ ಮತ್ತು ಜುದಾಯಿಸಂನಂತಹ ಬಹು ಸಂಸ್ಕೃತಿಗಳು ಮತ್ತು ಧರ್ಮಗಳಲ್ಲಿ ಅಭ್ಯಾಸ ಮಾಡಲಾಗುತ್ತದೆ. ಇವೆಲ್ಲವೂ ಇಂದಿನ ಧ್ಯಾನದ ಮೇಲೆ ಪ್ರಭಾವ ಬೀರಿವೆ. 20 ನೇ ಶತಮಾನದವರೆಗೂ ಧ್ಯಾನವು ಪಾಶ್ಚಿಮಾತ್ಯ ಸಂಸ್ಕೃತಿಯಲ್ಲಿ ಹರಿದಾಡಲಿಲ್ಲ. 1960 ರ ದಶಕದಲ್ಲಿ, ಹಾರ್ವರ್ಡ್ ಮೆಡಿಕಲ್ ಸ್ಕೂಲ್ ಪ್ರೊಫೆಸರ್, ಹರ್ಬರ್ಟ್ ಬೆನ್ಸನ್, ಧ್ಯಾನದ ವೈಜ್ಞಾನಿಕ ಅಂಶವನ್ನು ಅಧ್ಯಯನ ಮಾಡಲು ಪ್ರಾರಂಭಿಸಿದರು, ಧ್ಯಾನ ಮಾಡುವ ಜನರು ಇತರರಿಗಿಂತ 17% ಕಡಿಮೆ ಆಮ್ಲಜನಕವನ್ನು ಬಳಸುತ್ತಾರೆ ಎಂದು ಕಂಡುಕೊಂಡರು. 1990 ರ ದಶಕದಲ್ಲಿ, ಧ್ಯಾನವನ್ನು ಯುನೈಟೆಡ್ ಸ್ಟೇಟ್ಸ್‌ನಲ್ಲಿ ಟ್ರೆಂಡಿಯಾಗಿ ವೀಕ್ಷಿಸಲು ಪ್ರಾರಂಭಿಸಿತು, ವಿಶೇಷವಾಗಿ ಪ್ರಸಿದ್ಧ ವ್ಯಕ್ತಿಗಳು ಪ್ರವೃತ್ತಿಯನ್ನು ಸೇರುತ್ತಾರೆ. ಈಗ, ಸುಮಾರು 9.3 ಮಿಲಿಯನ್ ವಯಸ್ಕರು ವಾರ್ಷಿಕವಾಗಿ ಧ್ಯಾನವನ್ನು ಬಳಸುತ್ತಾರೆ.

# ಲಸಿಕೆಗಳಿಗಿಂತ 'ಕೊರೊನಾದಿಂದ ರಕ್ತ ಹೆಪ್ಪುಗಟ್ಟುವ ಅಪಾಯ 100 ಪಟ್ಟು ಹೆಚ್ಚು



**ನವದೆಹಲಿ:** ಔಷಧೀಯ ದೈತ್ಯ ಅಸ್ಟ್ರಾಜೆನೆಕಾ ಇತ್ತೀಚೆಗೆ ತನ್ನ ಕೋವಿಡ್ -19 ಲಸಿಕೆ ರಕ್ತ ಹೆಪ್ಪುಗಟ್ಟುವಿಕೆಯ ಅಪರೂಪದ ಅಡ್ಡಪರಿಣಾಮವನ್ನ ಉಂಟುಮಾಡುತ್ತದೆ ಎಂದು ಒಪ್ಪಿಕೊಂಡಿದೆ. ಲಸಿಕೆಗೆ ಸಂಬಂಧಿಸಿದ ತೀವ್ರ ಹಾನಿ ಮತ್ತು ಸಾವುಗಳನ್ನ ಆರೋಪಿಸಿದ ಕಂಪನಿಯ ವಿರುದ್ಧ ಕಾನೂನು ಕ್ರಮದ ಮಧ್ಯೆ ಈ ಸ್ವೀಕೃತಿ ಬಂದಿದೆ, ಇದರ ಪರಿಣಾಮವಾಗಿ ಜನರಲ್ಲಿ ಆತಂಕ ಹೆಚ್ಚುತ್ತಿದೆ.

ವಿಶ್ವ ಆರೋಗ್ಯ ಸಂಸ್ಥೆಯ (ಡಬ್ಲ್ಯುಎಚ್‌ಒ) ಮಾಜಿ ಮುಖ್ಯ ವಿಜ್ಞಾನಿ ಡಾ.ಸೌಮ್ಯಾ ಸ್ವಾಮಿನಾಥನ್, ಖಾಸಗಿ ವಾಹಿನಿಯೊಂದರ ಜೊತೆಗಿನ ಸಂವಾದದಲ್ಲಿ ಕೋವಿಡ್ -19 ಲಸಿಕೆಗಳಿಗೆ ಸಂಬಂಧಿಸಿದ ಹಲವಾರು ವಿಷಯಗಳ ಬಗ್ಗೆ ಒಳನೋಟಗಳನ್ನ ನೀಡಿದರು. ಇದರಲ್ಲಿ, ಲಸಿಕೆಗಳಿಂದಾಗಿ ಹೆಪ್ಪುಗಟ್ಟುವಿಕೆಯ ವಿಷಯವನ್ನ ತಿಳಿಸಿದರು. ಕೋವಿಡ್ನಿಂದಾಗಿ ಹೆಪ್ಪುಗಟ್ಟುವಿಕೆಯು ಲಸಿಕೆಯಿಂದ ಉಂಟಾಗುವ ಹೆಪ್ಪುಗಟ್ಟುವಿಕೆಗಿಂತ ಅನೇಕ ಪಟ್ಟು, ಬಹುಶಃ ನೂರು ಪಟ್ಟು ಹೆಚ್ಚಾಗಿದೆ ಎಂದು ಅವರು ಹೇಳಿದರು. ಕೋವಿಡ್ -19 ಲಸಿಕೆಗಳ ಸುರಕ್ಷತೆಯ ಬಗ್ಗೆ ಸಾರ್ವಜನಿಕ ಆತಂಕವನ್ನ ಉದ್ದೇಶಿಸಿ ಮಾತನಾಡಿದ ಅವರು, ಇದು ಲಸಿಕೆಗಳ ಮೇಲಿನ ಸಾರ್ವಜನಿಕ ವಿಶ್ವಾಸವನ್ನ ದುರ್ಬಲಗೊಳಿಸುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು. ಪರಿಣಾಮಕಾರಿತ್ವ ಮತ್ತು ಸುರಕ್ಷತೆಗಾಗಿ ಲಸಿಕೆಗಳು ಕಠಿಣ ಪರೀಕ್ಷೆಗಳಿಗೆ ಒಳಗಾಗುತ್ತವೆ ಎಂದು ಅವರು ಒತ್ತಿ ಹೇಳಿದರು. ಕಡಿಮೆ ಭಾಗವಹಿಸುವವರ ಸಂಖ್ಯೆಯೊಂದಿಗೆ ಕ್ಲಿನಿಕಲ್ ಪ್ರಯೋಗಗಳಲ್ಲಿ ತಪ್ಪಿಹೋಗಬಹುದಾದ ಅಪರೂಪದ ಅಡ್ಡಪರಿಣಾಮಗಳನ್ನ ಪತ್ತೆಹಚ್ಚಲು ನಿಯಂತ್ರಕ ಸಂಸ್ಥೆಗಳು ಮಾರ್ಕೆಟಿಂಗ್ ನಂತರದ ಕಣ್ಗಾವಲು ಅಥವಾ ನಾಲ್ಕನೇ ಹಂತದ ಅಧ್ಯಯನಗಳನ್ನ ನಡೆಸುತ್ತವೆ ಎಂದು ಅವರು ಎತ್ತಿ ತೋರಿಸಿದರು.

# ಕಾಶ್ಮೀರ ವಾಪಸ್ ಪಡೆದೇ ಪಡೆಯುತ್ತೇವೆ: ಅಮಿತ್ ಶಾ



**ನವದೆಹಲಿ:** ಪಾಕಿಸ್ತಾನದ ಬಳಿ ಪರಮಾಣು ಬಾಂಬ್ ಇದೆ ಹಾಗಾಗಿ ನಾವು ಅವರನ್ನು ಗೌರವಿಸಬೇಕಾಗುತ್ತದೆ ಎಂಬ ಕಾಂಗ್ರೆಸ್ ನಾಯಕ ಮಣಿಶಂಕರ್ ಐಯ್ಯರ್ ಹೇಳಿಕೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ತಿರುಗೇಟು ನೀಡಿದರು. ಪ್ರಧಾನಿ ಮೋದಿ ಸರ್ಕಾರಕ್ಕೆ ಬಾಂಬ್ ಎಂದರೆ ಭಯವೇನು ಇಲ್ಲ. ಪಾಕ್ ಆಕ್ರಮಿತ ಕಾಶ್ಮೀರ ನಮ್ಮದು, ಅದನ್ನು ನಾವು ವಾಪಸ್ ವಶಕ್ಕೆ ಪಡೆದೇ ಪಡೆಯುತ್ತೇವೆ ಎಂದರು. ಝೂನ್ಸಿಯಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಅಮಿತ್ ಶಾ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

**ನಾವು ಅಣುಬಾಂಬ್‌ಗಳಿಗೆ ಹೆದರುವುದಿಲ್ಲ:** ಕಾಂಗ್ರೆಸ್ ವೋಟ್ ಬ್ಯಾಂಕಿನ ದುರಾಸೆ ಎಷ್ಟು ಮಟ್ಟಿಗೆ ಹೆಚ್ಚಿದೆ ಎಂದರೆ ಅವರ ನಾಯಕರಾದ ಮಣಿಶಂಕರ್ ಅಯ್ಯರ್ ಅವರು ಪಿಒಕೆ ಬಗ್ಗೆ ಮಾತನಾಡಬೇಡಿ ಎಂದು ಕೇಳಿಕೊಂಡರು. ಪಾಕಿಸ್ತಾನವು ಪರಮಾಣು ಬಾಂಬ್ಗಳನ್ನು ಹೊಂದಿದೆ. ಹಾಗಾಗಿ ನಾವು ಪಿಒಕೆ ಬಗ್ಗೆ ಮಾತನಾಡಬಾರದು ಅಂತ ಹೇಳುತ್ತಾರೆ. ಭಾರತದಲ್ಲಿರುವುದು ನರೇಂದ್ರ ಮೋದಿ ಸರ್ಕಾರ, ನಾವು ಅಣುಬಾಂಬ್ಗಳಿಗೆ ಹೆದರುವುದಿಲ್ಲ ಎಂದು ನಾನು ನಿಮಗೆ ಹೇಳಲು ಬಯಸುತ್ತೇನೆ. ಪಿಒಕೆ ಭಾರತಕ್ಕೆ ಸೇರಿದ್ದು, ಅದನ್ನು ಹಿಂಪಡೆಯುತ್ತೇವೆ ಎಂದು ತಿರುಗೇಟು ನೀಡಿದರು.

## ಅಮೆರಿಕದ 3 ಸಂಸ್ಥೆಗಳ ವಿರುದ್ಧ ಚೀನಾ ನಿರ್ಬಂಧ

**ಬೀಜಿಂಗ್:** ತೈವಾನ್ ಗೆ ಶಸ್ತ್ರಾಸ್ತ್ರ ಮಾರಾಟ ಮಾಡಿರುವ ಅಮೆರಿಕದ ಮೂರು ಸಂಸ್ಥೆಗಳ ವಿರುದ್ಧ ನಿರ್ಬಂಧ ವಿಧಿಸಿರುವುದಾಗಿ ಚೀನಾ ಸೋಮವಾರ ಘೋಷಿಸಿದೆ. ಸ್ವಯಂ ಆಡಳಿತ ವ್ಯವಸ್ಥೆಯಿರುವ ತೈವಾನ್ ನ ನೂತನ ಅಧ್ಯಕ್ಷರಾಗಿ ಲಾಯ್ ಚಿಂಗ್ಟೆ ಸೋಮವಾರ ಪ್ರಮಾಣವಚನ ಸ್ವೀಕರಿಸುತ್ತಿರುವ ಸಂದರ್ಭದಲ್ಲೇ ಚೀನಾ ಈ ಕ್ರಮ ಕೈಗೊಂಡಿದೆ. ಅಮೆರಿಕದ 'ಜನರಲ್ ಅಟೊಮಿಕ್ಸ್ ಏರೋನಾಟಿಕಲ್ ಸಿಸ್ಟಮ್ಸ್, ಜನರಲ್ ಡೈನಾಮಿಕ್ಸ್ ಲ್ಯಾಂಡ್ ಸಿಸ್ಟಮ್ಸ್ ಮತ್ತು ಬೋಯಿಂಗ್ ಡಿಫೆನ್ಸ್, ಸ್ಪೇಸ್ ಆಯಂಡ್ ಸೆಕ್ಯುರಿಟಿ' ಸಂಸ್ಥೆಗಳು 'ವಿಶ್ವಾಸಕ್ಕೆ ಅರ್ಹವಲ್ಲದ ಸಂಸ್ಥೆ'ಗಳಾಗಿದ್ದು ಚೀನಾಕ್ಕೆ ಸಂಬಂಧಿಸಿದ ಆಮದು-ರಫ್ತು ಚಟುವಟಿಕೆಗಳಿಂದ ನಿಷೇಧಿಸಲಾಗಿದೆ ಮತ್ತು ಚೀನಾದಲ್ಲಿ ಹೊಸ ಹೂಡಿಕೆ ಮಾಡದಂತೆ ನಿರ್ಬಂಧಿಸಲಾಗಿದೆ. ಸಂಸ್ಥೆಯ ಹಿರಿಯ ಅಧಿಕಾರಿಗಳು ಚೀನಾ ಪ್ರವೇಶಿಸುವುದನ್ನು ನಿರ್ಬಂಧಿಸಿದ್ದು ಅವರ ಕೆಲಸದ ಪರ್ಮಿಟ್ ಅನ್ನು ರದ್ದುಗೊಳಿಸಲಾಗುವುದು ಎಂದು ಚೀನಾದ ವಾಣಿಜ್ಯ ಇಲಾಖೆಯನ್ನು ಉಲ್ಲೇಖಿಸಿ ಸರಕಾರಿ ಸ್ವಾಮ್ಯದ ಕ್ಸಿನ್ಹುವಾ ಸುದ್ದಿಸಂಸ್ಥೆ ವರದಿ ಮಾಡಿದೆ.



## 8 ದೇಶಗಳಿಂದ ಆಮ್ ಆದ್ಮಿ ಪಕ್ಷಕ್ಕೆ ಧನಸಹಾಯ




**ನವದೆಹಲಿ:** ಆಮ್ ಆದ್ಮಿ ಪಕ್ಷ(ಎಎಪಿ) 2014 ಮತ್ತು 2022 ರ ನಡುವೆ ಒಟ್ಟು 7.08 ಕೋಟಿ ರೂಪಾಯಿ ವಿದೇಶಿ ನಿಧಿಯನ್ನು ಪಡೆದಿದೆ ಎಂದು ಜಾರಿ ನಿರ್ದೇಶನಾಲಯ(ಇಡಿ) ಗೃಹ ಸಚಿವಾಲಯಕ್ಕೆ ವರದಿ ಮಾಡಿದೆ.

ಈ ನಿಧಿಯು ಯುಎಸ್‌ಎ, ಕೆನಡಾ, ಆಸ್ಟ್ರೇಲಿಯಾ, ನ್ಯೂಜಿಲೆಂಡ್, ಸೌದಿ ಅರೇಬಿಯಾ, ಯುಎಇ, ಕುವೈತ್ ಮತ್ತು ಒಮಾನ್ ಸೇರಿದಂತೆ ದೇಶಗಳಿಂದ ಬಂದಿದೆ.

ವಿದೇಶಿ ಕೊಡುಗೆ ನಿಯಂತ್ರಣ ಕಾಯಿದೆ(ಎಫ್ಸಿಆರ್‌ಎ), ಪ್ರಜಾಪ್ರತಿನಿಧಿ ಕಾಯ್ದೆ(ಆರ್ಪಿಎ) ಮತ್ತು ಭಾರತೀಯ ದಂಡ ಸಂಹಿತೆ(ಐಪಿಸಿ) ಉಲ್ಲಂಘಿಸಿವೆ ಎಂದು ಹೇಳಲಾಗಿದೆ.

ರಾಜಕೀಯ ಪಕ್ಷಗಳಿಗೆ ವಿದೇಶಿ ನಿಧಿಯ ಮೇಲಿನ ನಿರ್ಬಂಧಗಳನ್ನು ತಪ್ಪಿಸಲು ದಾನಿಗಳ ನೈಜ ಗುರುತನ್ನು ೦೦ಕ ಮರೆಮಾಚಿದೆ ಎಂದು ಇಆ ಹೇಳಿಕೊಂಡಿದೆ. ಎಎಪಿಯ ಐಡಿಬಿಐ ಬ್ಯಾಂಕ್ ಖಾತೆ ಮತ್ತು ಶಾಸಕ ದುರ್ಗೇಶ್ ಪಾಠಕ್ ಸೇರಿದಂತೆ ಪಕ್ಷದ ನಾಯಕರ ಖಾತೆಗಳಿಗೆ ಹಣವನ್ನು ನೇರವಾಗಿ ಜಮಾ ಮಾಡಲಾಗಿದೆ.

2016ರಲ್ಲಿ ಕೆನಡಾದಲ್ಲಿ ನಡೆದ ಕಾರ್ಯಕ್ರಮವೊಂದರಿಂದ ದುರ್ಗೇಶ್ ಪಾಠಕ್ ಹಣವನ್ನು ಸಂಗ್ರಹಿಸಿ ವೈಯಕ್ತಿಕ ಲಾಭಕ್ಕಾಗಿ ಬಳಸಿಕೊಂಡಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ.

ಪಂಜಾಬ್ನ ಫಾಜಿಲ್ಕಾದಲ್ಲಿ ಪಾಕಿಸ್ತಾನದಿಂದ ಭಾರತಕ್ಕೆ ಮಾದಕವಸ್ತು ಕಳ್ಳಸಾಗಣೆ ಪ್ರಕರಣದ ತನಿಖೆಯ ವೇಳೆ ಈ ವಿಷಯ ಬಹಿರಂಗವಾಗಿದೆ. ಎಎಪಿ ಶಾಸಕ ಸುಖಪಾಲ್ ಸಿಂಗ್ ಖೈರಾ ಅವರಿಗೆ ಸಂಬಂಧಿಸಿದ ನಿವೇಶನಗಳ ಹುಡುಕಾಟದ ವೇಳೆ ಎಎಪಿಯ ವಿದೇಶಿ ನಿಧಿಯ ವಿವರವಾದ ದಾಖಲೆಗಳು ಪತ್ತೆಯಾಗಿವೆ.

# ಇರಾನ್ ಅಧ್ಯಕ್ಷ ಇಬ್ರಾಹಿಂ ರೈಸಿ ನಿಧನ



**ಇರಾನ್:** ಹೆಲಿಕಾಪ್ಟರ್ ದುರಂತದಲ್ಲಿ ಇರಾನ್ ಅಧ್ಯಕ್ಷ ಇಬ್ರಾಹಿಂ ರೈಸಿ ಮೃತಪಟ್ಟಿದ್ದು, ಇವರ ಗೌರವಾರ್ಥ ಭಾರತ ದೇಶಾದ್ಯಂತ ಮಂಗಳವಾರ ಒಂದು ದಿನದ ಶೋಕಾಚರಣೆಯನ್ನು ಆಚರಿಸಲಾಗುವುದು ಎಂದು ಗೃಹ ಸಚಿವಾಲಯ ತಿಳಿಸಿದೆ.

ಡಾ. ಸೆಯ್ಯದ್ ಇಬ್ರಾಹಿಂ ರೈಸಿ ಮತ್ತು ವಿದೇಶಾಂಗ ಸಚಿವ ಹುಸೇನ್ ಅಮೀರ್-ಅಬ್ದುಲ್ಲಾಹಿಯಾನ್ ಅವರು ಹೆಲಿಕಾಪ್ಟರ್ ಅಪಘಾತದಲ್ಲಿ ನಿಧನರಾಗಿದ್ದಾರೆ. ಇವರ ಆತ್ಮಗಳಿಗೆ ಗೌರವ ಸೂಚಕವಾಗಿ ಮಂಗಳವಾರ ಪ್ರತಿನಿತ್ಯ ಹಾರಿಸುವ ಎಲ್ಲಾ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧ ಎತ್ತರದಲ್ಲಿ ಹಾರಿಸಲಾಗುತ್ತದೆ ಮತ್ತು ಅಂದು ಯಾವುದೇ ಅಧಿಕೃತ ಸರ್ಕಾರಿ ಕಾರ್ಯಕ್ರಮಗಳು ಇರುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಭಾನುವಾರ ರೈಸಿ ಪಯಣಿಸ್ತಿದ್ದ ಹೆಲಿಕಾಪ್ಟರ್ ಪ್ರಕೃತಿ ವೈಪರಿತ್ಯದ ಪರಿಣಾಮ ಜೋಲ್ಫಾ ನಗರ ಬಳಿಯ ದಟ್ಟ ಕಾನನದಲ್ಲಿ ಪತನವಾಗಿದೆ. ದುರಂತದಲ್ಲಿ ಅಧ್ಯಕ್ಷ ರೈಸಿ, ವಿದೇಶಾಂಗ ಮಂತ್ರಿ ಹುಸ್ಸೇನ್ ಅಮಿರ್ ಅಬ್ದುಲ್ಲಲಹಿಯನ್, ಅಜಬೈರ್ಜಾನ್ ಪ್ರಾಂತ್ಯದ ಗವರ್ನರ್ ಮಲಿಕ್ ಸೇರಿ ಹಲವರು ಮೃತಪಟ್ಟಿದ್ದಾರೆ.

## ರೈಸಿ ನಿಧನಕ್ಕೆ ಮೋದಿ ಸಂತಾಪ



ಇರಾನ್ ಅಧ್ಯಕ್ಷ ಇಬ್ರಾಹಿಂ ರೈಸಿ ಅವರು ಪ್ರಯಾಣಿಸುತ್ತಿದ್ದ ಬೆಂಗಾವಲು ಪಡೆ ಹೆಲಿಕಾಪ್ಟರ್ಗಳ ಪತನದ ಬೆನ್ನಲ್ಲೇ ಇರಾನ್ ಅಧ್ಯಕ್ಷರ ಬಗ್ಗೆ ಮಾಹಿತಿ ಕಲೆಹಾಕಲು ಮುಂದಾಗಿದ್ದ ರಕ್ಷಣಾ ತಂಡಕ್ಕೆ ಅಧ್ಯಕ್ಷ ಇಬ್ರಾಹಿಂ ರೈಸಿ ಅವರಿಗೆ ಏನಾಗಿದೆ ಎಂಬುದನ್ನು ಆರಂಭಿಕ ಹಂತದಲ್ಲಿ ತಿಳಿಯಲು ಕಷ್ಟಸಾಧ್ಯ ಎಂದು ನಿನ್ನೆ ಇರಾನ್ನ ಆಂತರಿಕ ಸಚಿವರು ಮಾಹಿತಿ ಹಂಚಿಕೊಂಡಿದ್ದರು.

ಇನ್ನು 'ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ನ ಅಧ್ಯಕ್ಷ ಡಾ. ಸೈಯದ್ ಇಬ್ರಾಹಿಂ ರೈಸಿ ಅವರ ಅಕಾಲಿಕ ನಿಧನದ ಸುದ್ದಿ ತಿಳಿದು ತೀವ್ರ ದುಃಖ ಮತ್ತು ಆಘಾತವಾಗಿದೆ. ಭಾರತ-ಇರಾನ್ ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸುವಲ್ಲಿ ಅವರ ಕೊಡುಗೆ ಯಾವಾಗಲೂ ಸ್ಮರಣೀಯವಾಗಿದೆ. ರೈಸಿ ಅವರ ಕುಟುಂಬ ಮತ್ತು ಇರಾನ್ ಜನತೆಗೆ ನನ್ನ ಸಂತಾಪಗಳು. ಈ ದುಃಖದ ಸಮಯದಲ್ಲಿ ಭಾರತ ಇರಾನ್ ಜತೆಗಿದೆ' ಎಂದು ಪ್ರಧಾನಿ ಮೋದಿ ಅವರು ಎಕ್ಸ್‌ನಲ್ಲಿ ಸಂತಾಪ ಸೂಚಿಸಿದ್ದಾರೆ.

## ಉಕ್ರೇನ್‌ನಿಂದ 62 ಡ್ರೋನ್ ದಾಳಿ

**ಮಾಸ್ಕೋ:** ಉಕ್ರೇನ್ನಿಂದ 62 ಡ್ರೋನ್ ದಾಳಿ ನಡೆದ ಬಳಿಕ ದಕ್ಷಿಣ ರಶ್ಯದ ತೈಲ ಸಂಸ್ಕರಣಾಗಾರವನ್ನು ಸ್ಥಗಿತಗೊಳಿಸಲಾಗಿದೆ. ರಶ್ಯದ ನಿಯಂತ್ರಣದ ಪ್ರದೇಶದ ಮೇಲೆ ಉಕ್ರೇನ್ನ ಪಡೆಗಳು ಅಮೆರಿಕ ಮತ್ತು ಫ್ರಾನ್ಸ್ ನಿರ್ಮಿತ ಕ್ಷಿಪಣಿಗಳನ್ನು ಪ್ರಯೋಗಿಸಿವೆ ಎಂದು ರಶ್ಯ ಹೇಳಿದೆ. ಕ್ರಿಮಿಯಾ ಪ್ರಾಂತದ ಮೇಲೆ ಹಾರಿಸಲಾದ 62 ಡ್ರೋನ್ ಸೇರಿದಂತೆ ಕನಿಷ್ಟ 103 ಡ್ರೋನ್ ಗಳನ್ನು ಹೊಡೆದುರುಳಿಸಲಾಗಿದೆ. ಅಮೆರಿಕ ನಿರ್ಮಿತ 'ಹೈ ಮೊಬಿಲಿಟಿ ಆರ್ಟಿಲರಿ ರಾಕೆಟ್ ಸಿಸ್ಟಮ್' ಹಾಗೂ ಫ್ರಾನ್ಸ್ ನಿರ್ಮಿತ ಹ್ಯಾಮರ್ ಬಾಂಬ್ ಗಳನ್ನು ಉಕ್ರೇನ್ ಪ್ರಯೋಗಿಸಿದೆ ಎಂದು ರಶ್ಯ ಸೇನೆ ಹೇಳಿದೆ. ಸುಮಾರು 6 ಡ್ರೋನ್‌ಗಳು ದಕ್ಷಿಣದ ಕ್ರಸ್ನೊಡಾರ್ ವಲಯದ ಸ್ಲವ್ಯಾಂಸ್ಕ್ ನಗರದಲ್ಲಿನ ತೈಲ ಸಂಸ್ಕರಣಾಗಾರಕ್ಕೆ ಅಪ್ಪಳಿಸಿದೆ. ಬಳಿಕ ತೈಲ ಸಂಸ್ಕರಣಾಗಾರದ ಕಾರ್ಯವನ್ನು ಸ್ಥಗಿತಗೊಳಿಸಲಾಗಿದೆ ಎಂದು ಸ್ಥಳೀಯ ಅಧಿಕಾರಿಗಳನ್ನು ಉಲ್ಲೇಖಿಸಿ 'ತಾಸ್' ಸುದ್ದಿಸಂಸ್ಥೆ ವರದಿ ಮಾಡಿದೆ. ಸ್ಲವ್ಯಾಂಸ್ಕ್ ತೈಲ ಸಂಸ್ಕರಣಾಗಾರಕ್ಕೆ ದಾಳಿ ನಡೆಸಿರುವುದನ್ನು ಉಕ್ರೇನ್ ನ ಗುಪ್ತಚರ ಮೂಲಗಳು ದೃಢಪಡಿಸಿದ್ದು ಕಪ್ಪು ಸಮುದ್ರದ ಬಳಿ ರಶ್ಯ ಸೇನೆ ನಿಯೋಜಿಸಿದ್ದ ನೆಲಬಾಂಬ್ ನಾಶಕ ವ್ಯವಸ್ಥೆಯನ್ನು ಧ್ವಂಸಗೊಳಿಸಲಾಗಿದೆ ಎಂದಿದೆ. ಈ ಮಧ್ಯೆ, ಖಾರ್ಕಿವ್ ವಲಯದ ಸ್ಟರಿಟ್ಸಿಯಾ ಗ್ರಾಮವನ್ನು ರಶ್ಯದ ಸೇನೆ ವಶಕ್ಕೆ ಪಡೆದಿರುವುದಾಗಿ ವರದಿಯಾಗಿದೆ.



# ತೈವಾನ್ ಅಧ್ಯಕ್ಷರಾಗಿ ಲೈ ಚಿಂಗ್-ಟೆ ಪ್ರಮಾಣ ವಚನ ಸ್ವೀಕಾರ



**ತೈವಾನ್:** ಡೆಮಾಕ್ರಟಿಕ್ ಪ್ರೊಗ್ರೆಸ್ಸಿವ್ ಪಾರ್ಟಿಯ (ಡಿಪಿಪಿ) ಲೈ ಚಿಂಗ್-ಟೆ ಅವರು ತೈವಾನ್ ನ ಐದನೇ ಜನಪ್ರಿಯ ಚುನಾಯಿತ ಅಧ್ಯಕ್ಷರಾಗಿ ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು ಎಂದು ಫೋಕಸ್ ತೈವಾನ್ ವರದಿ ಮಾಡಿದೆ. 1996 ರಲ್ಲಿ ತೈವಾನ್ ತನ್ನ ಮೊದಲ ನೇರ ಅಧ್ಯಕ್ಷೀಯ ಚುನಾವಣೆಯನ್ನು ನಡೆಸಿದ ನಂತರ 64 ವರ್ಷದ ಲೈ ಮತ್ತು ಉಪಾಧ್ಯಕ್ಷ ಹ್ಸಿಯಾವೊ ಬಿ-ಖಿಮ್ ಅಧಿಕಾರ ವಹಿಸಿಕೊಳ್ಳುವುದರೊಂದಿಗೆ ಡಿಪಿಪಿ ಸತತ ಮೂರನೇ ನಾಲ್ಕು ವರ್ಷಗಳ ಅವಧಿಗೆ ಆಡಳಿತ ನಡೆಸುತ್ತಿರುವ ಮೊದಲ ಆಡಳಿತ ಪಕ್ಷವಾಗಿದೆ. ಉದ್ಘಾಟನಾ ಸಮಾರಂಭವು ಅಧ್ಯಕ್ಷರ ಕಚೇರಿಯಲ್ಲಿ ನಡೆಯಿತು, ಮತ್ತು ರಾಷ್ಟ್ರದ ದೊಡ್ಡ ಮುದ್ರೆಯನ್ನು ಕ್ಯುಮಿಂಟಾಂಗ್ (ಕೆಎಂಟಿ) ನ ಶಾಸಕಾಂಗ ಸ್ಪೀಕರ್ ಹಾನ್ ಕುವೊ-ಯು ಅವರು ಲೈ ಅವರಿಗೆ ಹಸ್ತಾಂತರಿಸಿದರು, ಇದು ಲೈ ಅವರು ರಾಷ್ಟ್ರದ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡ ಸಂಕೇತವಾಗಿತ್ತು. ಅಧ್ಯಕ್ಷರಾಗಿ ಲೈ ಚಿಂಗ್-ಟೆ ಅವರ ಉದ್ಘಾಟನಾ ಸಮಾರಂಭದಲ್ಲಿ ಸೋಮವಾರ ಬೆಳಿಗ್ಗೆ ತೈಪೆಯಲ್ಲಿ ಬೀದಿ ಪ್ರದರ್ಶನಗಳು ಮತ್ತು ಮಿಲಿಟರಿ ಪ್ರದರ್ಶನ ಸೇರಿವೆ. ಇದಲ್ಲದೆ, ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ನಿರ್ಗಮನ ಅಧ್ಯಕ್ಷ ತ್ಸೈ ಇಂಗ್-ವೆನ್ ಕೂಡ ಭಾಗವಹಿಸಿದ್ದರು ಎಂದು ಫೋಕಸ್ ತೈವಾನ್ ತಿಳಿಸಿದೆ. ನಾಲ್ಕು ಬಾರಿ ಶಾಸಕ ಮತ್ತು ಎರಡು ಬಾರಿ ತೈನಾನ್ನ ಮೇಯರ್ ಆಗಿರುವ ಲೈ, ತ್ಸಾಯ್ ಆಡಳಿತದಲ್ಲಿ 2017 ರಿಂದ 2019 ರವರೆಗೆ ತೈವಾನ್ ಪ್ರಧಾನಿಯಾಗಿದ್ದರು ಮತ್ತು ನಂತರ 2020 ರಲ್ಲಿ ತ್ಸಾಯ್ ಅವರ ಎರಡನೇ ಅವಧಿಯನ್ನು ಪ್ರಾರಂಭಿಸಿದಾಗ ತ್ಸಾಯ್ ಅವರ ಉಪನಾಯಕರಾದರು.

## ಇರಾನ್‌ನ ಹಂಗಾಮಿ ಅಧ್ಯಕ್ಷರಾಗಿ ಮೊಹಮ್ಮದ್ ಮೊಖ್ಬರ್ ನೇಮಕ

**ಇರಾನ್:** ಹೆಲಿಕಾಪ್ಟರ್ ಅಪಘಾತದಲ್ಲಿ ಇರಾನ್ ಅಧ್ಯಕ್ಷ ಇಬ್ರಾಹಿಂ ರೈಸಿ ನಿಧನವಾಗಿದ್ದು, ಇದರ ಬೆನ್ನಲ್ಲೇ ಇರಾನ್ ನ ಮೊದಲ ಉಪಾಧ್ಯಕ್ಷ ಮೊಹಮ್ಮದ್ ಮೊಖ್ಬರ್ ಅವರನ್ನು ದೇಶದ ಹಂಗಾಮಿ ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ.



ಇರಾನ್ ನ ಸರ್ವೋಚ್ಛ ನಾಯಕ ಅಯತೊಲ್ಲಾ ಅಲಿ ಖಮೇನಿ ಸೋಮವಾರ ಈ ಘೋಷಣೆ ಮಾಡಿದ್ದಾರೆ.

ರೈಸಿ, ಇರಾನ್ ನ ವಿದೇಶಾಂಗ ಸಚಿವ ಹುಸೇನ್ ಅಮಿರಬ್ದೊಲ್ಲಾಹಿಯಾನ್, ಪೂರ್ವ ಅಜೆರ್ಬೈಜಾನ್ ಪ್ರಾಂತ್ಯದ ಗವರ್ನರ್ ಮತ್ತು ಇತರ ಅಧಿಕಾರಿಗಳು ಮತ್ತು ಅಂಗರಕ್ಷಕರನ್ನು ಹೊತ್ತ ಹೆಲಿಕಾಪ್ಟರ್ ಭಾನುವಾರ ದೇಶದ ವಾಯುವ್ಯದ ಪರ್ವತ ಪ್ರದೇಶದಲ್ಲಿ ಅಪಘಾತಕ್ಕೀಡಾಗಿತ್ತು.

ರೈಸಿ ಅವರ ನಿಧನಕ್ಕೆ ಸಂತಾಪ ಸಂದೇಶದಲ್ಲಿ ಖಮೇನಿ ಅವರು ಉಪರಾಷ್ಟ್ರಪತಿಗಳು ಮಧ್ಯಂತರ ಕರ್ತವ್ಯಗಳನ್ನು ವಹಿಸಿಕೊಳ್ಳಲಿದ್ದಾರೆ ಎಂದು ಘೋಷಿಸಿದರು. ಇರಾನಿನ ಸುಪ್ರೀಂ ಲೀಡರ್ ಸಂದೇಶದಲ್ಲಿ ಐದು ದಿನಗಳ ಶೋಕಾಚರಣೆಯನ್ನು ಘೋಷಿಸಿದ್ದಾರೆ.

## ಶ್ರೀಲಂಕಾದ ನಾಲರು ಐಸಿಸ್ ಭಯೋತ್ಪಾದಕರ ಸೆರೆ

**ಅಹಮದಾಬಾದ್:** ಶ್ರೀಲಂಕಾದ ನಾಲ್ವರು ಐಸಿಸ್ ಭಯೋತ್ಪಾದಕರನ್ನು ಗುಜರಾತ್ ಭಯೋತ್ಪಾದನಾ ನಿಗ್ರಹ ದಳ ಅಹಮದಾಬಾದ್ನ ಸರ್ದಾರ್ ವಲ್ಲಭಭಾಯಿ ಪಟೇಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂಧಿಸಿದ್ದಾರೆ.ಈ ಕಾರಣದಿಂದಾಗಿ ಅಹಮದಾಬಾದ್ ವಿಮಾನ ನಿಲ್ದಾಣದಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದ್ದು, ವಿಮಾನ ನಿಲ್ದಾಣ ಹಾಗೂ ಅಕ್ಕಪಕ್ಕದ ನಗರಗಳಲ್ಲಿ ಭದ್ರತೆ ಹೆಚ್ಚಿಸಲಾಗಿದೆ. ಗುಜರಾತ್ ಎಟಿಎಸ್ ಅಧಿಕಾರಿಗಳು ತೀವ್ರ ವಿಚಾರಣೆ ನಡೆಸಲು ಉಗ್ರರನ್ನು ಅಜ್ಞಾತ ಸ್ಥಳಕ್ಕೆ ಕರೆದೊಯ್ದಿದೆ. ಅವರು ಅಹಮದಾಬಾದ್ ವಿಮಾನ ನಿಲ್ದಾಣಕ್ಕೆ ಯಾಕೆ ಬಂದಿದ್ದಾರೆ ಎಂಬ ಬಗ್ಗೆ ಇನ್ನು ಮಾಹಿತಿ ಸಿಕ್ಕಿಲ್ಲ. ಈ ಬಗ್ಗೆ ತನಿಖೆ ನಡೆಸುತ್ತಿದ್ದೇವೆ ಎಂದು ಅಧಿಕಾರಿಗಳು ಹೇಳಿದ್ದಾರೆ.



# ಯುವಕನೊಬ್ಬ ಎಂಟು ಬಾರಿ ಮತ ಚಲಾಯಿಸಿದ ವೀಡಿಯೊ ವೈರಲ್



**ಲಕ್ನೋ:** ಯುವಕನೋರ್ವ ಬಿಜೆಪಿ ಅಭ್ಯರ್ಥಿಗೆ ಎಂಟು ಬಾರಿ ಮತಹಾಕಿರುವ ಘಟನೆ ಉತ್ತರ ಪ್ರದೇಶದ ಇಟಾ ಜಿಲ್ಲೆಯ ನಯಾ ಗಾಂವ್ ಪಟ್ಟಣದಲ್ಲಿ ನಡೆದಿದೆ. ಅಲ್ಲದೇ ಇದನ್ನು ಆತ ಹೇಳಿಕೊಂಡಿರುವ ವಿಡಿಯೋ ಈಗ ಎಲ್ಲೆಡೆ ವೈರಲ್ ಆಗಿದ್ದು ಪ್ರಕರಣ ದಾಖಲಾಗಿದೆ.

ವಿಡಿಯೋ ವೈರಲ್ ಆದ ನಂತರ ಪ್ರತಿಪಕ್ಷಗಳ ಇಂಡಿಯಾ ಒಕ್ಕೂಟದ ಮುಖಂಡ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅಖಿಲೇಶ್ ಯಾದವ್ ಫಿ ಮಾಡಿದ್ದು, ಚುನಾವಣಾ ಆಯೋಗ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಈ ಟ್ವೀಟ್ ಅನ್ನು ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಕೂಡ ರೀಟ್ವೀಟ್ ಮಾಡಿ ತನಿಖೆಗೆ ಒತ್ತಾಯಿಸಿದ್ದಾರೆ.

ವೀಡಿಯೊದಲ್ಲಿ, ಹುಡುಗನು ಇವಿಎಂನಲ್ಲಿ ಗುಂಡಿಯನ್ನು ಒತ್ತಿದಾಗಲೆಲ್ಲಾ ಎಣಿಸುವುದನ್ನು ಕಾಣಬಹುದು. ಮತದಾನ ಕೇಂದ್ರವನ್ನು ಗುರುತಿಸಲಾಗಿದೆ ಎಂದು ಇಟಾ ಅಧಿಕಾರಿಗಳು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕವಾಗಿ ಹಂಚಿಕೊಳ್ಳಲಾದ ವೀಡಿಯೊದಲ್ಲಿ ಕಂಡುಬರುವ ವ್ಯಕ್ತಿಯನ್ನು ಗುರುತಿಸುವ ಪ್ರಯತ್ನ ಮುಂದುವರೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಉಪ ವಿಭಾಗೀಯ ಮ್ಯಾಜಿಸ್ಟ್ರೇಟ್ ಪಿ ತ್ರಿಪಾಠಿ ಅವರು ಸಲ್ಲಿಸಿದ ದೂರಿನ ಆಧಾರದ ಮೇಲೆ,ನಯಾ ಗಾಂವ್ ಪೊಲೀಸ್ ಠಾಣೆಯಲ್ಲಿ ಐಪಿಸಿ ಸೆಕ್ಷನ್ 171-ಎಫ್ (ಚುನಾವಣೆಯಲ್ಲಿ ಅನಗತ್ಯ ಪ್ರಭಾವ ಅಥವಾ ವ್ಯಕ್ತಿಗತತೆಗಾಗಿ ಶಿಕ್ಷೆ), 419 (ವ್ಯಕ್ತಿಗತವಾಗಿ ಮೋಸ) ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

# ಛತ್ತೀಸ್ ಗಢದಲ್ಲಿ ಪಿಕಪ್ ವಾಹನ ಕಂದಕಕ್ಕೆ ಉರುಳಿ 18 ಕಾರ್ಮಿಕರು ಸಾವು




**ಛತ್ತೀಸ್ ಗಢ:** ಛತ್ತೀಸ್ ಗಢದಲ್ಲಿ ಪಿಕಪ್ ವಾಹನ ಕಂದಕಕ್ಕೆ ಉರುಳಿ ಮೃತಪಟ್ಟ ಕಾರ್ಮಿಕರ ಸಂಖ್ಯೆ 18 ಕ್ಕೆ ಏರಿಕೆಯಾಗಿದೆ.ಛತ್ತೀಸ್ಗಢದ ಕವರ್ಧಾ ಜಿಲ್ಲೆಯ ಕುಕ್ದೂರ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸೋಮವಾರ ಪಿಕಪ್ ಕಂದಕಕ್ಕೆ ಬಿದ್ದು ಕನಿಷ್ಠ 18 ಕಾರ್ಮಿಕರು ಸಾವನ್ನಪ್ಪಿದ್ದಾರೆ.ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ನಿರೀಕ್ಷೆಯಿದೆ.

ಅಪಘಾತದಲ್ಲಿ ಒಟ್ಟು ಎಂಟು ಜನರು ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ಕವರ್ಧಾ ಎಸ್ಪಿ ಅಭಿಷೇಕ್ ಪಲ್ಲವ್ ತಿಳಿಸಿದ್ದಾರೆ.ಛತ್ತೀಸ್ ಗಢ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಘಟನೆಯ ಬಗ್ಗೆ ಸಂತಾಪ ವ್ಯಕ್ತಪಡಿಸಿದ್ದು, ಗಾಯಾಳುಗಳು ಶೀಘ್ರ, ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ. ''ಕಬೀರಧಾಮ್ ಜಿಲ್ಲೆಯ ಕುಕ್ದೂರ್ ಪೊಲೀಸ್ ಠಾಣೆ ವ್ಯಾಪ್ತಿಯ ಬಹಪಾನಿ ಗ್ರಾಮದ ಬಳಿ ಪಿಕಪ್ ಪಲ್ಟಿಯಾಗಿ 18 ಗ್ರಾಮಸ್ಥರು ಸಾವನ್ನಪ್ಪಿದ್ದಾರೆ ಮತ್ತು 4 ಜನರು ಗಾಯಗೊಂಡಿದ್ದಾರೆ ಎಂಬ ಸುದ್ದಿ ಬಂದಿದೆ. ಗಾಯಾಳುಗಳಿಗೆ ಉತ್ತಮ ಚಿಕಿತ್ಸೆ ನೀಡಲು ಜಿಲ್ಲಾಡಳಿತಕ್ಕೆ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಅಗಲಿದ ಆತ್ಮಗಳಿಗೆ ಶಾಂತಿ ಸಿಗಲೆಂದು ನಾನು ದೇವರಲ್ಲಿ ಪ್ರಾರ್ಥಿಸುತ್ತೇನೆ ಮತ್ತು ಅವರ ಕುಟುಂಬಗಳಿಗೆ ನನ್ನ ಆಳವಾದ ಸಂತಾಪವನ್ನು ವ್ಯಕ್ತಪಡಿಸುತ್ತೇನೆ. ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥಿಸುತ್ತೇನೆ' ಎಂದು ಛತ್ತೀಸ್ ಗಢ ಸಿಎಂ ವಿಷ್ಣು ದೇವ್ ಟ್ವೀಟ್ ಮಾಡಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಕಂದೀಲು ತಂಡದಿಂದ ಕೌಮುದಿ

# ಅಕ್ಷತಾ ಪಾಂಡವಪುರ ಲೀಡ್ ರೋಲ್



'ಕಂದೀಲು' ಚಿತ್ರಕ್ಕೆ ಹಲವು ಅಂತರರಾಷ್ಟ್ರೀಯ ಪ್ರಶಸ್ತಿ ಲಭಿಸಿದ್ದು ಸಿನಿಮಾವು ಸದ್ಯದಲ್ಲೆ ಬಿಡುಗಡೆಯಾಗಲಿದೆ. ಈಗ ಇದೇ ತಂಡದಿಂದ ನಾಗೇಶ್.ಎನ್ ಕಥೆಯನ್ನು ಆಧರಿಸಿರುವ 'ಕೌಮುದಿ' ಚಿತ್ರವೊಂದು ಸೆಟ್ಟೇರಿದೆ. ಹಾರೋಹಳ್ಳಿ ತಾಲ್ಲೋಕಿನ ದಿಂಬದಹಳ್ಳಿಯಲ್ಲಿರುವ ಬಿಸಲಮ್ಮ ದೇವಸ್ಥಾನದಲ್ಲಿ ಸರಳವಾಗಿ ಮುಹೂರ್ತ ಆಚರಿಸಿಕೊಂಡಿತು. ದೊಡ್ಡ ಮುದುವಾಡಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ದಿವ್ಯ. ಎಸ್ ಮೊದಲ ದೃಶ್ಯಕ್ಕೆ ಕ್ಲಾಪ್ ಮಾಡಿ ತಂಡಕ್ಕೆ ಶುಭ ಹಾರೈಸಿದರು.



ಬ್ಲೈಂಡ್ ಬಿಲೀಫ್ ಎಂಬ ಅಡಿಬರಹವು ಇಂಗ್ಲೀಷ್ ನಲ್ಲಿ ಇರಲಿದೆ.ಸ್ವಸ್ತಿಕ್ ಎಂಟರ್‌ಟೈನ್‌ಮೆಂಟ್ ಅಡಿಯಲ್ಲಿ ಯಶೋದ ಪ್ರಕಾಶ್ ಕೊಟ್ಟುಕತ್ತೀರ ಬಂಡವಾಳ ಹೂಡುವುದರ ಜತೆಗೆ ನಿರ್ದೇಶನ ಮಾಡುತ್ತಿರುವ ಮೂರನೇ ಸಿನಿಮಾ ಇದಾಗಿದೆ. ನಿರ್ಮಾಣ ನಿರ್ವಹಣೆ ಮತ್ತು ಛಾಯಾಗ್ರಹಣ ಜವಬ್ದಾರಿಯನ್ನು ಪಿ.ವಿ.ಆರ್.ಸ್ವಾಮಿ ಗೂಗಾರೆದೊಡ್ಡಿ ವಹಿಸಿಕೊಂಡಿದ್ದಾರೆ. ಶಿಕ್ಷಣ ಹಾಗೂ ವೈಜ್ಞಾನಿಕ ಕೊರತೆಯಿಂದಾಗಿ ಮೂಲನಂಬಿಕೆ, ಮೂಡನಂಬಿಕೆಯ ವ್ಯತ್ಯಾಸ ತಿಳಿಯದೆ ಬದುಕಿಗೆ ಅಪಾಯ ತಂದೊಡ್ಡುವ ಸಂಪ್ರದಾಯ, ಆಚರಣೆಗಳ ಸತ್ಯ-ವಾಸ್ತವಗಳ ಸುತ್ತ ಸಿನಿಮಾವು ಬೆಳಕು ಚೆಲ್ಲಲಿದೆ. ಗತಕಾಲದಿಂದ ಇಂದಿನವರೆಗೂ ಗ್ರಾಮೀಣ ಭಾಗದಲ್ಲಿ ಇಂತಹ ಪದ್ದತಿಗಳನ್ನು ಅನುಸರಿಸುತ್ತಿದ್ದಾರೆ.ಕಥಾನಾಯಕಿ ಇದರ ವಿರುದ್ದ ಧ್ವನಿ ಎತ್ತಿ, ಯಾವ ರೀತಿ ಹೋರಾಟ ಮಾಡುತ್ತಾಳೆ ಎಂಬುದನ್ನು ಅರ್ಥಪೂರ್ಣ ಸನ್ನಿವೇಶಗಳ ಮೂಲಕ ತೋರಿಸುವ ಪ್ರಯತ್ನ ಮಾಡಲಾಗುತ್ತಿದೆ. 'ಪಿಂಕಿ ಎಲ್ಲಿ' ಮತ್ತು 'ಕೋಳಿಎಸ್ರು' ಚಿತ್ರಗಳ ಖ್ಯಾತಿಯ ಅಕ್ಷತಾ ಪಾಂಡವಪುರ ಮುಖ್ಯ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಇವರೊಂದಿಗೆ ಕುಮಾರಿ ದೀಪಿಕಾ, ಪ್ರತೀಕ, ಅಂಕಿತಾಮೂರ್ತಿ ಉಳಿದಂತೆ ನೀನಾಸಂ ನಟರಾಜ್, ಕಾವೇರಿಶ್ರೀಧರ್, ಪಿ.ಬಿ.ರಾಜುನಾಯಕ, ರೋಹಿಣಿ, ತಾರರಘು, ಬಂಗಾರಶೆಟ್ಟಿ ಮುಂತಾದವರು ಅಭಿನಯಿಸುತ್ತಿದ್ದಾರೆ. ಸಂಗೀತ ಶ್ರೀಸುರೇಶ್, ಸಂಭಾಷಣೆ,ಸಂಕಲನ ನಾಗೇಶ್.ಎನ್, ಚಿತ್ರಕಥೆ ನಾಗೇಶ್.ಎನ್,ಹರೀಶ್.ಎಸ್ ಅವರದಾಗಿದೆ. ದಿಂಬಹಳ್ಳಿ, ಬಾಚಹಳ್ಳಿ ದೊಡ್ಡಿ ಹಾಗೂ ಕನಕಪುರ ಸುತ್ತಮುತ್ತ ಒಂದೇ ಹಂತದಲ್ಲಿ ಚಿತ್ರೀಕರಣವನ್ನು ಸಿಂಕ್ ಸೌಂಡ್‌ದಲ್ಲಿ ಮುಗಿಸಲು ತಂಡವು ಯೋಜನೆ ರೂಪಿಸಿಕೊಂಡಿದೆ.

# ಕಿರುತೆರೆಗೆ ದಿವ್ಯಾ ಉರುಡುಗ ಎಂಟ್ರಿ

ಕನ್ನಡ ಕಿರುತೆರೆ ಲೋಕದಲ್ಲಿ ಕಲರ್ಸ್ ಕನ್ನಡ ವಾಹಿನಿ ವಿಭಿನ್ನ ಬಗೆಯ ಸೀರಿಯಲ್ ಗಳ ಮೂಲಕ ಪ್ರೇಕ್ಷಕರನ್ನು ರಂಜಿಸುತ್ತಿದೆ.ಇದೀಗ ಮತ್ತೊಂದು ಹೊಸ ಕಥೆ ಮೂಲಕ ಕಿರುತೆರೆ ಪ್ರೇಕ್ಷಕರ ಎದುರು ಬರ್ತಿದೆ.ಬೇರೆ ಬೇರೆ ವ್ಯಕ್ತಿತ್ವದ ಇಬ್ಬರು ವ್ಯಕ್ತಿಗಳು ಒಟ್ಟಿಗೆ ಸಾಗುವ ಮನ ಮಿಡಿಯ ಧಾರಾವಾಹಿ ನಿನನಾಗಿ ಇದೇ 27ನೇ ತಾರೀಖಿನಿಂದ ಶುರುವಾಗುತ್ತಿದೆ.ಸೋಮವಾರದಿಂದ ಶುಕ್ರವಾರದವರೆಗೆ ರಾತ್ರಿ 8 ಗಂಟೆಗೆ ನಿನಗಾಗಿ ಸೀರಿಯಲ್ ಪ್ರಸಾರವಾಗಲಿದೆ.ಈ ಹಿನ್ನೆಲೆ ಇಡೀ ತಂಡ ಮಾಧ್ಯಮದರೊಂದಿಗೆ ಮಾಹಿತಿ ಹಂಚಿಕೊಂಡಿತು. ಬೆಂಗಳೂರಿನ ಅಕ್ಷಯ್ ಸ್ಟುಡಿಯೋದಲ್ಲಿ ಸುದ್ದಿಗೋಷ್ಠಿ ಆಯೋಜಿಸಲಾಗಿತ್ತು.ಈ ವೇಳೆ ನಿರ್ದೇಶಕ ಸಂಪಥ್ವಿ ಮಾತನಾಡಿ, ತುಂಬಾ ಎಕ್ಸೈಟ್ ಆಗಿದ್ದೇನೆ. ಯಾಕೆಂದರೆ ಹೆಮ್ಮೆಯಿಂದ ಹೇಳುತ್ತೇನೆ. ಒಂದೊಳ್ಳೆ ಪ್ರಾಜೆಕ್ಟ್ ತೆಗೆದುಕೊಂಡು ಬಂದಿದ್ದೇನೆ. ನಿನಗಾಗಿ ಶೋ ಬಂದ ಮೇಲೆ ತುಂಬಾ ಸ್ಕೋರ್ ಮಾಡುತ್ತದೆ.ಯಾಕೆಂದರೆ ನನ್ನ ಬೆಂಬಲವಾಗಿ ನಿಂತಿರುವವರು ಜೈ ಮಾತಾ ಕಂಬೈನ್ಸ್ ನ ಅಶ್ವಿನಿ ಮೇಡಂ.ಇಡೀ ಕಲರ್ಸ್ ತಂಡ.ಪ್ರತಿಯೊಬ್ಬರಿಗೂ ಸಪೋರ್ಟಿವ್ ಆಗಿತು.ಈ ಪ್ರಾಜೆಕ್ಟ್ ಮಾಡಿಸಿದ್ದಾರೆ.ಈ ಪ್ರಾಜೆಕ್ಟ್ ಕಲರ್ಸ್ ಗೆ ಗೆಲುವು ತಂದುಕೊಡುತ್ತದೆ.ನಾಯಕ ಒಂದು ಪಡೆಯಾದರೆ, ನಾಯಕಿ ಕೂಡ ಒಂದು ಪಡೆ.ಇವರೆಲ್ಲಾ ಬಲ ತಂದುಕೊಡುತ್ತಿದ್ದಾರೆ.ಪ್ರೋವೋ ನೋಡಿ ಇ?ಷ್ಟಪಟ್ಟಿದ್ದೀರಾ.ನಾನು ಈ ಹಿಂದೆ ನಮ್ಮನೆ ಯುವರಾಣಿ ಸೀರಿಯಲ್ ಮಾಡಿದ್ದೇನೆ. ಈ ಬಾರಿ ಒಂದು ಹೊಸ ಕಥೆ ಹೇಳಲು ಬರುತ್ತಿದ್ದೇವೆ ಎಂದರು.

ದಿವ್ಯಾ ಉರುಡುಗ ಇದೀಗ ಮತ್ತೆ ಕಿರುತೆರೆಗೆ ಕಮ್ ಬ್ಯಾಕ್ ಮಾಡಿದ್ದಾರೆ.ರಚನಾ ಪಾತ್ರದಲ್ಲಿ ದಿವ್ಯಾ ನಟಿಸುತ್ತಿದ್ದಾರೆ. 'ನಿನಗಾಗಿ' ಧಾರಾವಾಹಿಯ ಕಥೆ ಸೂಪರ್ ಸ್ಟಾರ್ ರಚನಾ ಸುತ್ತ ಸುತ್ತಲಿದೆ.ಚಿತ್ರರಂಗದ ಲೇಡಿ ಸೂಪರ್ ಸ್ಟಾರ್ ಆಗಿರುವ ರಚನಾಗೆ ಕೋಟ್ಯಂತರ ಅಭಿಮಾನಿಗಳ ಪ್ರೀತಿ, ಆಶೀರ್ವಾದ ಇದೆ. ಆದರೆ, ಅದ್ಯಾಕೋ ರಚನಾಗೆ ಅಮ್ಮನ ಪ್ರೀತಿ ಇಲ್ಲ. ಸೂಪರ್ ಸ್ಟಾರ್ ಆಗಿದ್ದರೂ, ಅಮ್ಮನ ಪ್ರೀತಿ ಕಾಣದ ನಟಿಯ ಕಥೆ 'ನಿನಗಾಗಿ'.ನಿನಗಾಗಿ' ಧಾರಾವಾಹಿಯಲ್ಲಿ ಕಥಾನಾಯಕನಾಗಿ ರಿತ್ವಿಕ್ ಮಠದ್ ಅಭಿನಯಿಸುತ್ತಿದ್ದಾರೆ.ತಾರಾಗಣದಲ್ಲಿ ಪ್ರಿಯಾಂಕ ಕಾಮತ್, ಕಿಶನ್ ಬೆಳಗಲಿ, ವಿಜಯ್ ಕೌಂಡಿನ್ಯ, ಸಿರಿ ಸಿಂಚನ ಮುಂತಾದವರಿದ್ದಾರೆ. ನಮ್ಮನೆ ಯುವರಾಣಿಯನ್ನು ನಿರ್ದೇಶಿಸಿದ್ದ ಸಂಪೃಥ್ವಿ 'ನಿನಗಾಗಿ'ಯಸೂತ್ರಧಾರಿ.ಭಾಗ್ಯಲಕ್ಷ್ಮಿ, ನಮ್ಮನೆ ಯುವರಾಣಿ, ಕನ್ನಡತಿಯಂಥಸುಪರ್‌ಹಿಟ್ ಧಾರಾವಾಹಿಗಳನ್ನುನಿರ್ಮಿಸಿದ ಜೈಮಾತಾ ಕಂಬೈನ್ಸ್' ನಿನಗಾಗಿ'ಯನಿರ್ಮಾಣದಹೊಣೆಹೊತ್ತಿದೆ.



# ಪ್ರತಿಭಾವಂತ ತಂಡದ 'ಅನರ್ಥ' ಟೀಸರ್ ರಿಲೀಸ್

ಸಿನಿ ಕಾರ್ನರ್

'ಬಲಹೀನತೆಯಿಂದ ಕ್ರೂರತನ ಹುಟ್ಟುತ್ತದೆ' ಎಂಬ ವಾಕ್ಯವನ್ನು ರೋಮ್ ಫಿಲಾಸಫರ್ ಸೆನಕ ಅಂದೇ ಹೇಳಿದ್ದರು.ಇಂತಹುದೆ ಅಂಶಗಳನ್ನು ಹೆಕ್ಕಿಕೊಂಡು 'ಅನರ್ಥ' ಎನ್ನುವ ಸಿನಿಮಾದ ಅಡಿಬರಹಕ್ಕೆ ಬಳಸಲಾಗಿ, ಸೆನ್ಸಾರ್‌ನಿಂದ ಪ್ರಶಂಸೆ ಪಡೆದುಕೊಂಡಿದೆ.ಪ್ರಚಾರದ ಮೊದಲ ಹಂತವಾಗಿ ಟೀಸರ್ ಹಾಗೂ ಸಾಂಗ್, ರೇಣುಕಾಂಬ ಸ್ಟುಡಿಯೋದಲ್ಲಿ ಕಿಕ್ಕಿರಿದ ಜನರು ಎದುರು ಲೋಕಾರ್ಪಣೆಗೊಂಡಿತು. ನಿರ್ದೇಶಕರು ಮಾಧ್ಯಮಮಿತ್ರರನ್ನು ಮುಖ್ಯ ಅತಿಥಿ ಎಂದು ಪರಿಗಣಿಸಿದ್ದರಿಂದ, ಹಿರಿಯ ಪತ್ರಕರ್ತರಿಂದ ಟೀಸರ್ ಹಾಗೂ ಸಹ ನಿರ್ಮಾಪಕಿ ಜೆ.ಅಂಜಲಿ ಪುತ್ರಿಯರಾದ ಕುಮಾರಿ ಜಯಕೀರ್ತಿ ಮತ್ತು ಜಯಕನ್ನಿಕ ಜಂಟಿಯಾಗಿ ಹಾಡನ್ನು ಬಿಡುಗಡೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಯಶಸ್ವಿ ಧಾರವಾಹಿಗಳಾದ 'ಅರ್ಧ ಸತ್ಯ' ಧಾರವಾಹಿಯನ್ನು ನಿರ್ದೇಶಿಸಿ ಅತ್ಯುತ್ತಮ ಆರ್ಯಭಟ ಪ್ರಶಸ್ತಿಯನ್ನು ಪಡೆದು, ನಂತರ 'ಗುಪ್ತಗಾಮಿನಿ' 'ಪ್ರೀತಿ ಇಲ್ಲದ ಮೇಲೆ' ಯಶಸ್ವಿ ಧಾರವಾಹಿಗಳಾದ ಮೊದಲ ಕಂತುಗಳ ನಿರ್ದೇಶನ ಮಾಡಿ, ಆ ನಂತರ ಸುಮಾರು 3500 ಕಂತುಗಳ ಅನೇಕ ಧಾರವಾಹಿಗಳಾದ 'ಶಿವ' 'ಕದನ' 'ಲಕುಮಿ' 'ಚುಕ್ಕಿ' 'ಗೋಕುಲದಲ್ಲಿ ಸೀತೆ' ನಿರ್ದೇಶಿಸಿರುತ್ತಾರೆ. 'ಮೆಲ್ಲುಸಿರೆ ಸವಿಗಾನ' ಚಿತ್ರವನ್ನು ನಿರ್ದೇಶನ ಮಾಡಿರುವ ರಮೇಶ್ ಕೃಷ್ಣ ಸಿನಿಮಾಕ್ಕೆ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ.ಈ ಸಂದರ್ಭದಲ್ಲಿ ಮಾತನಾಡಿದ ಅವರು ಅವಕಾಶ್-ಆಕೃತಿ ಎರಡು ಪಾತ್ರಗಳ ಸುತ್ತ ಚಿತ್ರವು ಸಾಗುತ್ತದೆ.ಇಬ್ಬರು ಒಂದು ಮಟ್ಟಕ್ಕೆ ಪ್ರೀತಿಸಿರುತ್ತಾರೆ.ನಾವುಗಳು ಬ್ರೇಕ್‌ಅಪ್ ಎನ್ನುವ ಪದವನ್ನು ನಮ್ಮ ಮನಸ್ಸಿನಿಂದ ಅಳಿಸಿ ಹಾಕಿದ ನಂತರ, ಅಮವ್ಯಾಸೆಯ ದಿನ ಯಮಗಂಡ ಕಾಲದಲ್ಲಿ ಮದುವೆಯಾಗಲು ನಿರ್ಧರಿಸಿ ಒಬ್ಬರನ್ನೊಬ್ಬರು ಅರಿತುಕೊಳ್ಳಲು ಒಂದು ಸ್ಥಳಕ್ಕೆ ಹೋಗುತ್ತಾರೆ. ಅಲ್ಲಿಗೆ ಹೋದಾಗ ಏನಾಗುತ್ತದೆ. ನೋಡುಗರಿಗೆ ಊಹಿಸಲಾಗದ ತಿರುವುಗಳಿವೆ. ಕ್ಲೈಮಾಕ್ಸ್‌ದಲ್ಲಿ ಹೀಗೂ ಆಗಬಹುದು ಎನ್ನುವಲ್ಲಿಗೆ ಶುಭಂ ಬರುತ್ತದೆ. ನಮ್ಮ ಚಿತ್ರವು ಎಲ್ಲಾ ಕಮರ್ಷಿಯಲ್ ಸಿನಿಮಾಗಳ ಅಂಶಗಳನ್ನು ಹೊಂದಿದ್ದರೂ, ಒಂದು ಅಂಶವು ಖಂಡಿತ ಭಿನ್ನವಾಗಿದೆ.ಅದನ್ನು ತಿಳಿಯಲು ನೀವುಗಳು ಚಿತ್ರಮಂದಿರಕ್ಕೆ ಬನ್ನಿರೆಂದು ಕೋರಿದರು.



# ಕುತೂಹಲ ಕೆರಳಿಸಿದ ಧೋನಿ ನಡೆ

## ಮೈದಾನದಲ್ಲಿನ ಘಟನೆಗಳಿಂದ ನಿರ್ಧಾರ ಬದಲಿಸಿದರೇ ಧೋನಿ?

**ಚೆನ್ನೈ:** ಹಾಲಿ ಐಪಿಎಲ್ ಟೂರ್ನಿಯ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವಿರುದ್ಧದ ಸೋಲಿನ ಬಳಿಕ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಹಿರಿಯ ಆಟಗಾರ ಮಹೇಂದ್ರ ಸಿಂಗ್ ಧೋನಿ ಐಪಿಎಲ್ ಗೆ ನಿವೃತ್ತಿ ಘೋಷಣೆ ಮಾಡಲಿದ್ದಾರೆ ಎಂದು ಹೇಳಲಾಗಿತ್ತು. ಆದರೆ ಮಾಹಿ ಪಂದ್ಯದ ಬಳಿಕ ಯಾವ ನಿರ್ಧಾರವನ್ನೂ ಮಾಡದೇ ರಾಂಚಿಗೆ ತೆರಳಿದ್ದು, ಈ ಬಗ್ಗೆ ಸಿಎಸ್ ಕೆ ಆಡಳಿತ ಮಂಡಳಿ ಮಹತ್ವದ ಹೇಳಿಕೆ ನೀಡಿದೆ.

ಮೇ 18ರ ಶನಿವಾರ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ವಿರುದ್ಧದ ಸಿಎಸ್‌ಕೆ ತಂಡದ ಅಂತಿಮ ಲೀಗ್ ಪಂದ್ಯದಲ್ಲಿ ರೋಚಕ ಘಟನೆಗಳ ನಂತರ, ಎಂಎಸ್ ಧೋನಿ ನಿವೃತ್ತಿಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ.

ಈ ಬಗ್ಗೆ ಮಾಹಿತಿ ನೀಡಿರುವ ಸಿಎಸ್ ಕೆ ಆಡಳಿತ ಮಂಡಳಿ ಸಧ್ಯಕ್ಕಂತೂ ಧೋನಿ ತಮ್ಮ ನಿವೃತ್ತಿ ಬಗ್ಗೆ ತಮ್ಮೊಂದಿಗೆ ಮಾತುಕತೆಯಾಡಿಲ್ಲ.

ಎಂಎಸ್ ಧೋನಿ ಅವರು ಸಿಎಸ್‌ಕೆಯಲ್ಲಿ ಯಾರೊಂದಿಗೂ ನಿವೃತ್ತಿ ಹೇಳುವುದಾಗಿ ತಿಳಿಸಿಲ್ಲ. ಅವರು ಅಂತಿಮ ನಿರ್ಧಾರ ತೆಗೆದುಕೊಳ್ಳುವ ಮೊದಲು ಒಂದೆರಡು ತಿಂಗಳು ಕಾಯುವುದಾಗಿ ಮ್ಯಾನೇಜ್‌ಮೆಂಟ್‌ಗೆ ತಿಳಿಸಿದ್ದಾರೆ, ಎಂದು ಸಿಎಸ್‌ಕೆ ಮೂಲಗಳು ತಿಳಿಸಿವೆ.

ಆರ್ ಸಿಬಿ ವಿರುದ್ಧ ಚೆನ್ನೈ ಗೆದ್ದಿದ್ದರೆ ಅದು ಪ್ಲೇಆಫ್‌ಗೆ ಪ್ರವೇಶ ಪಡೆಯುತ್ತಿತ್ತು. ಚೆನ್ನೈನ ಚೆಪಾಕ್ ಸ್ಟೇಡಿಯಂನಲ್ಲಿ ಫೈನಲ್‌ನಲ್ಲಿ ಧೋನಿ



ಐಪಿಎಲ್ ವಿದಾಯ ಪಂದ್ಯವನ್ನು ಆಡಲು ಸಾಧ್ಯವಾಗುತ್ತದೆ ಎಂದು ನಿರೀಕ್ಷಿಸಲಾಗಿತ್ತು. ಆದರೆ, ತವರಿನ ಅಂಗಳದಲ್ಲಿ ಆರ್‌ಸಿಬಿ ವಿಜಯಶಾಲಿಯಾಗಿ ಹೊರಹೊಮ್ಮಿದ್ದರಿಂದ ಸಿಎಸ್‌ಕೆ ತಂಡ ಯೋಜನೆಗಳು ತಲೆಕೆಳಗಾಯಿತು.

ಪಂದ್ಯದ ಅಂತಿಮ ಓವರ್‌ನಲ್ಲಿ 42 ವರ್ಷದ ಎಂಎಸ್ ಧೋನಿ ಅವರು ಯಶ್ ದಯಾಲ್ ಅವರ ಬೌಲಿಂಗ್‌ನ ಮೊದಲ ಎಸೆತವನ್ನು 110 ಮೀಟರ್‌ಗಳ ಬೃಹತ್ ಸಿಕ್ಸರ್ ಬಾರಿಸಿದಾಗ, ಚೆಂಡು ಮೈದಾನದ ಹೊರಗೆ ಹೋಯಿತು. ನಂತರ ಯಶ್ ದಯಾಳ್ ಗೆ ನೀಡಿದ ಹೊಸ ಚೆಂಡು ಒಣಗಿತ್ತು ಮತ್ತು ರನ್ ಗಳಿಸಲು ಕಷ್ಟವಾಯಿತು.

ಸಿಕ್ಸರ್ ಬಾರಿಸಿದಾಗ ಚೆಂಡು ಕಳೆದುಹೋಯಿತು ಮತ್ತು ಚೆಂಡು ಬದಲಾಯಿಸಬೇಕಾಯಿತು. ಯಶ್ ದಯಾಳ್ ಒಣ ಚೆಂಡನ್ನು ಪಡೆದರು ಮತ್ತು ಇದ್ದಕ್ಕಿದ್ದಂತೆ ಹೊಡೆಯುವುದು ಕಷ್ಟಕರವಾಯಿತು, ಎಂದು ಸಿಎಸ್‌ಕೆ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ಸೋಲಿನಿಂದ ಧೋನಿ ಸಿಟ್ಟು

**ಆರ್‌ಸಿಬಿ ಎದುರು ಸಿಎಸ್‌ಕೆ ಸೋಲಿನ ನಂತರ ಕಣ್ಣಿಗೆ ಕಂಡಂತೆ, ಸಿಟ್ಟುಗೊಂಡಿದ್ದ ಎಂಎಸ್ ಧೋನಿ ಪಂದ್ಯದ ನಂತರದ ಸಾಂಪ್ರದಾಯಿಕ ಹ್ಯಾಂಡ್‌ಶೇಕ್ ಸಮಯದಲ್ಲಿ ಆರ್‌ಸಿಬಿ ಆಟಗಾರರ ಕೈಕುಲುಕದೆ ಡ್ರೆಸ್ಸಿಂಗ್ ರೂಮ್ ಗೆ ತೆರಳಿದ್ದರು. ಹೀಗಾಗಿ ಸಿಎಸ್‌ಕೆ ಮೂಲಗಳ ಪ್ರಕಾರ, ಲೆಜೆಂಡ್ ಕ್ರಿಕೆಟಿಗ ಎಂಎಸ್ ಧೋನಿ ಇನ್ನೂ ಐಪಿಎಲ್‌ನಿಂದ ನಿವೃತ್ತಿಯಾಗುವುದು ಖಚಿತವಾಗಿ ನಿರ್ಧರಿಸಿಲ್ಲ ಎಂದು ಸೂಚಿಸುತ್ತವೆ. ಅಂದಹಾಗೆ ಮೇ 22ರಂದು ಅಹ್ಮದಾಬಾದ್‌ನಲ್ಲಿ ಎಲಿಮಿನೇಟರ್ 1ರಲ್ಲಿ ರಾಜಸ್ಥಾನ್ ರಾಯಲ್ಸ್ ವಿರುದ್ಧ ಸೆಣಸಲಿದೆ.**

# ಟೂರ್ನಿಯ ಜೆರ್ಸಿ ಬಿಡುಗಡೆ ಮಾಡಿದ ಐರ್ಲೆಂಡ್ ತಂಡ!

**ನವದೆಹಲಿ:** ಟಿ20 ವಿಶ್ವಕಪ್ ಟೂರ್ನಿ ನಿಮಿತ್ತ ಐರ್ಲೆಂಡ್ ತಂಡ ಕರ್ನಾಟಕ ಹಾಲು ಮಹಾಮಂಡಳಿ ''ನಂದಿನಿ''ಯ ಲೋಗೋ ಇರುವ ಜೆರ್ಸಿಯನ್ನು ಸೋಮವಾರ ಬಿಡುಗಡೆ ಮಾಡಿದೆ.

ಹೌದು.. ಕೆಲವು ದಿನಗಳ ಹಿಂದಷ್ಟೇ ನಂದಿನಿ ಲೋಗೋ ಇರುವ ಜೆರ್ಸಿಯನ್ನು 'ಕ್ರಿಕೆಟ್ ಸ್ಕಾಟ್ಲೆಂಡ್' ಅನಾವರಣಗೊಳಿಸಿತ್ತು. ಇದೀಗ ಐರ್ಲೆಂಡ್ ತಂಡ ಕೂಡ ನಂದಿನಿ ಲೋಗೋ ಇರುವ ಜೆರ್ಸಿಯನ್ನು ಪ್ರಕಟಿಸಿದೆ. ಇದು ಮಾತ್ರವಲ್ಲದೆ ಕ್ರಿಕೆಟ್ ಐರ್ಲೆಂಡ್ ತನ್ನ ಅಧಿಕೃತ ವೆಬ್‌ಸೈಟ್‌ನ ಫೋಟೊದಲ್ಲಿಯೂ ನಂದಿನಿ ಲೋಗೋ ಇರುವ ಜೆರ್ಸಿಯ ದೊಡ್ಡ ಫೋಟೊವನ್ನು ಹಾಕಿ 'ವೆಲ್‌ಕಮ್ ನಂದಿನಿ' ಎಂದು ಬರೆದುಕೊಂಡಿದೆ.

ಇನ್ನು ಜೆರ್ಸಿ ಬಿಡುಗಡೆಯ ಬಳಿಕ ಮಾತನಾಡಿದ, ಕ್ರಿಕೆಟ್ ಐರ್ಲೆಂಡ್‌ನ ಮುಖ್ಯ ಹಣಕಾಸು ಅಧಿಕಾರಿ ಆ?ಯಂಡ್ರ್ಯೂ ಮೇ,'' ಕರ್ನಾಟಕ ಹಾಲು ಒಕ್ಕೂಟವನ್ನು ಹೊಸ ಪಾಲುದಾರರಾಗಿ ಸ್ವಾಗತಿಸಲು ನಮಗೆ ಸಂತೋಷವಾಗುತ್ತಿದೆ. ಟಿ?20 ವಿಶ್ವಕಪ್ ನಲ್ಲಿ ಐರ್ಲೆಂಡ್ ಪುರುಷರ ತಂಡದ ಅಧಿಕೃತ



ಪ್ರಾಯೋಜಕರಾಗಿ ನಂದಿನಿಯನ್ನು ಘೋಷಿಸಲು ಸಂತಸವಾಗುತ್ತಿದೆ'' ಎಂದರು.

ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಎಂ.ಕೆ. ಜಗದೀಶ್ ನಮ್ಮ ಬ್ರಾಂಡ್ ಟಿ20 ವಿಶ್ವಕಪ್‌ನಲ್ಲಿ ಕಾಣಿಸಿಕೊಳ್ಳುವುದು ಕರ್ನಾಟಕದ ಪ್ರತಿಯೊಬ್ಬರಿಗೂ ಹೆಮ್ಮೆಯ ಕ್ಷಣವಾಗಿದೆ. ಶುದ್ಧತೆ ಮತ್ತು ಶ್ರೇಷ್ಠತೆಯ ಪ್ರತೀಕವಾಗಿರುವ ನಂದಿನಿಯು ಈಗ ಜಾಗತಿಕ ಬ್ರ್ಯಾಂಡ್ ಆಗಿ ಗುರುತಿಸಿಕೊಳ್ಳುವುದಕ್ಕೆ ಹೆಮ್ಮೆ ಎನಿಸುತ್ತದೆ. ಈ ಮೂಲಕ ನಂದಿನಿಯ ಮೌಲ್ಯ ಮತ್ತು ಜನಪ್ರಿಯತೆ ಮತ್ತಷ್ಟು ಹೆಚ್ಚಾಗಲಿದ್ದು, ಜನಪ್ರಿಯ ಕ್ರೀಡೆಯಾದ ಕ್ರಿಕೆಟ್ ತಂಡದ ಪ್ರಾಯೋಜಕತ್ವದಿಂದಾಗಿ ನಂದಿನಿ ಲೋಗೋ ವಿಶ್ವವ್ಯಾಪಿ ರಾರಾಜಿಸಲಿದೆ ಎಂದು ಹೇಳಿದರು.

ಸ್ಕಾಟ್ಲೆಂಡ್ ಮತ್ತು ಐರ್ಲೆಂಡ್ ತಂಡಗಳ ಎಡಗೈ ಬ್ಯಾಟ್ಸ್‌ಮನ್‌ಗಳಿಗೆ ಬಲಗೈ ಮತ್ತು ಬಲಗೈ ಬ್ಯಾಟ್ಸ್‌ಮನ್‌ಗಳ ಎಡಗೈ ಮೇಲೆ ನಂದಿನಿ ಲೋಗೋ ಕಾಣಿಸಿಕೊಳ್ಳಲಿದೆ. ಮಿನಿ ವಿಶ್ವಕಪ್ ಟೂರ್ನಿಯಲ್ಲಿ ಒಟ್ಟು 55 ಪಂದ್ಯಗಳು ನಡೆಯಲಿವೆ. ಜೂನ್ 1ರಿಂದ 18ರವರೆಗೆ ಗುಂಪು ಹಂತದಲ್ಲಿ 40 ಪಂದ್ಯಗಳು ನಡೆಯಲಿವೆ. ಜೂನ್ 19 ರಿಂದ 24 ರವರೆಗೆ ಸೂಪರ್ 8 ಪಂದ್ಯಗಳು ನಡೆಯಲಿವೆ.

## ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಹೇಳಿಕೆ

# ಸಂಸದ ತನಿಖೆ ಎದುರಿಸೋದು ಸೂಕ್ತ

**ಬೆಂಗಳೂರು:** ಆರೋಪ ಬಂದ ಮೇಲೆ ಸಂಸದ ಪ್ರಜ್ವಲ್ ರೇವಣ್ಣ ಎಸ್‌ಐಟಿ ತನಿಖೆ ಎದುರಿಸುವುದು ಸೂಕ್ತ ಎಂದು ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ.

ದೇವೇಗೌಡರ ನಿವಾಸದ ಬಳಿ ಸುದ್ದಿಗಾರರರೊಂದಿಗೆ ಅವರು ಮಾತನಾಡಿದ್ದಾರೆ.ಈ ವೇಳೆ ಘಟನೆ ಆದ ದಿನವೇ ಕುಮಾರಣ್ಣ, ಉಪ್ಪು ತಿಂದವರು ನೀರು ಕುಡಿಯಬೇಕು ಎಂದಿದ್ದರು. ಸಂಸದರು ಎಸ್‌ಐಟಿ ತನಿಖೆ ಎದರಿಸುವುದು ಸೂಕ್ತ. ಇದು ನನ್ನ ವೈಯಕ್ತಿಕ ಅಭಿಪ್ರಾಯ ಎಂದರು.ಇದೇ ವೇಳೆ ಪ್ರಜ್ವಲ್ ಅವರು ನನ್ನೊಂದಿಗೆ ಸಂಪರ್ಕದಲ್ಲಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಮಾಜಿ ಸಂಸದ ಶಿವರಾಮೇಗೌಡರದ್ದು ಎನ್ನಲಾದ ಆಡಿಯೋದಲ್ಲಿ ವಿಚಾರವಾಗಿ, ಶಿವರಾಮೇಗೌಡ ಸರ್ಕಾರದಲ್ಲಿರುವ ಒಬ್ಬ ವ್ಯಕ್ತಿಯ ಹೆಸರು ಉಲ್ಲೇಖಿಸಿದ್ದಾರೆ.ಇಡೀ ರಾಜ್ಯದ ಜನ ಶಿವರಾಮೇಗೌಡರ ಆಡಿಯೋ ಕೇಳಿದ್ದಾರೆ. ಕೆಂಪುಕೋಟೆ ಮೇಲೆ ಭಾವುಟ ಹಾರಿಸಿದ ಕನ್ನಡದ



ಹೆಮ್ಮೆಯ ಮಾಜಿ ಪ್ರಧಾನಿಗಳ ವಿರುದ್ಧ ಅವರ ಹೇಳಿಕೆ, ಅವರ ಸಂಸ್ಕೃತಿ, ಮನಸ್ಥಿತಿ ಹೇಗಿದೆ ಎನ್ನುವುದನ್ನು ತೋರಿಸುತ್ತದೆ.ರಾಜಕೀಯ ಮಾಡಿ, ಆದರೆ ಇನ್ನೊಬ್ಬರ ಸಾವನ್ನು ಬಯಸಿ ರಾಜಕೀಯ ಮಾಡೋದು ಸರಿಯಲ್ಲ ಎಂದಿದ್ದಾರೆ.

ಹಾಸನದ ಸಂಸದರ ವೀಡಿಯೋ ರಿಲೀಸ್ ಆದ ಬಳಿಕ ಸಂತ್ರಸ್ತೆಯರ ಮುಖವನ್ನ ಬ್ಲರ್ ಮಾಡಲಿಲ್ಲ. ವೀಡಿಯೋ ಬಿಡುಗಡೆ ಮಾಡಿ ಸಂತ್ರಸ್ತೆಯರ ಮಾನ ಹರಾಜು ಮಾಡೋದು ಯಾಕೆ? ವೀಡಿಯೋ ರಿಲೀಸ್ ಮಾಡಿದವರ ಬಗ್ಗೆ ಕ್ರಮ ಯಾಕೆ ಆಗ್ತಿಲ್ಲ ಎಂದು ಅವರು ಪ್ರಶ್ನಿಸಿದ್ದಾರೆ.

ದೇವರಾಜೇಗೌಡರಿಗೆ ನೂರು ಕೋಟಿ ಆಫರ್ ವಿಚಾರವಾಗಿ, ದೇವರಾಜೇಗೌಡರಿಗೂ ನನಗೂ ಸಂಪರ್ಕ ಇಲ್ಲ. ಈ ಎಲ್ಲಾ ವಿಚಾರವಾಗಿ ತಾರ್ಕಿಕ ಅಂತ್ಯ ಸಿಗಬೇಕು.ಇದರ ಹಿಂದೆ ರಾಜ್ಯ ಸರ್ಕಾರ ಮತ್ತು ಸರ್ಕಾರದ ಹಿಂದೆ ಇರುವವರ ಇರೋದು ಸ್ಪಷ್ಟವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಕುಮಾರಣ್ಣಗೆ ಮಗನ ಭವಿಷ್ಯದ ಚಿಂತೆ ಅಂತಾರೆ. ನನ್ನ ವಿಷಯದಲ್ಲಿ ದೊಡ್ಡ ಮಟ್ಟದಲ್ಲಿ ಕೂರಿಸಬೇಕು ಎನ್ನುವ ಚಿಂತನೆ ಕುಮಾರಣ್ಣರಿಗೆ ಇಲ್ಲ. ಅವರಿಗೆ ರಾಜ್ಯದ ಜನರ ಬಗ್ಗೆ ಚಿಂತೆ ಹಾಗೂ ಬದ್ಧತೆ ಇದೆ.ನಾನು ಸೋತ ಬಳಿಕ ಸಹ ರಾಮನಗರ ಮತ್ತು ಮಂಡ್ಯದಲ್ಲಿ ಓಡಾಡುತ್ತಿದ್ದೇನೆ. ಅನೇಕ ರಾಜಕಾರಣಿಗಳ ಮಕ್ಕಳು ಅಡ್ಜೆಸ್ಟ್‌ಮೆಂಟ್ ಮೂಲಕ ಉತ್ತಮ ಸ್ಥಾನದಲ್ಲಿದ್ದಾರೆ.ನನಗೆ ಹಾಗೇ ಆಗಿಲ್ಲ, ನಾನು ಒಬ್ಬನೇ ಓಡಾಡುತ್ತಿದ್ದೇನೆ ಎಂದಿದ್ದಾರೆ.

## ಜೈಲಲ್ಲಿ ದೇವರಾಜೇಗೌಡ ಜೀವಕ್ಕೆ ಕುತ್ತು

**ಮಂಡ್ಯ:** ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ವಕೀಲ ದೇವರಾಜೇಗೌಡ ಜೀವಕ್ಕೆ ಕಸ್ಟಡಿಯಲ್ಲಿರುವಾಗಲೇ ಅಪಾಯವಿದೆ ಎಂದು ಮಾಜಿ ಶಾಸಕ ಸುರೇಶಗೌಡ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ನಾಗಮಂಗಲದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದ್ದಾರೆ.ಈ ವೇಳೆ ಹಲವು ತಿಂಗಳುಗಳ ಕಾಲ ದೇವರಾಜೇಗೌಡರನ್ನು ಕಸ್ಟಡಿಯಲ್ಲೇ ಇಡಲು ಸಂಚು ನಡೆದಿದೆ.ಈ ವೇಳೆ ಅವರ ಜೀವಕ್ಕೆ ದೊಡ್ಡ ಅಪಾಯವಿದೆ. ಇದು ನೂರಕ್ಕೆ ನೂರರಷ್ಟು ಸತ್ಯ.ಪ್ರಕರಣದ ಖಳನಾಯಕರು, ಸಚಿವರು ಭಯೋತ್ಪಾದಕರಂತೆ ವರ್ತಿಸುತ್ತಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಪೆನ್ ಡ್ರೈವ್ ಪ್ರಕರಣದ ಮೂಲ ರೂವಾರಿಗಳಿಗೆ ಸರ್ಕಾರದಿಂದ ರಾಜಾತಿಥ್ಯ ನೀಡಲಾಗುತ್ತಿದೆ.ಇದುವರೆಗೆ ಅವರಿಗೆ ನೋಟಿಸ್ ನೀಡದೆ, ಬಂಧಿಸದೆ ಆಟ ಆಡುತ್ತಿದ್ದಾರೆ.ಇತ್ತ ದೇವರಾಜೇಗೌಡ ಅವರನ್ನು ಷಡ್ಯಂತ್ರ ಮಾಡಿ ಬಂಧನ ಮಾಡಲಾಗಿದೆ.ಕಾಂಗ್ರೆಸ್ ಸರ್ಕಾರಕ್ಕೆ ಸತ್ಯಾಸತ್ಯತೆ ಬೇಕಿಲ್ಲ. ಸಚಿವರ ಹೆಸರು ಹೇಳಿದ್ರೆ ಪರಿಗಣನೆ ಮಾಡಲ್ಲ. ಮೂಲ ಹುಡುಕಿ ತನಿಖೆಯನ್ನೂ ಮಾಡಲ್ಲ ಎಂದು ಅವರು ಆರೋಪಿಸಿದ್ದಾರೆ.



# ದೇವೇಗೌಡ್ರ ಮೇಲೆ ಗೌರವ ಇದ್ರೆ ಕೂಡ್ಲೇ ಬಂದು ತನಿಖೆ ಎದುರಿಸು

**ಬೆಂಗಳೂರು:** ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಮೇಲೆ ಗೌರವ ಇದ್ದರೆ ಈ ಕೂಡಲೇ ಬಂದು ತನಿಖೆ ಎದುರಿಸು ಎಂದು ಮಾಜಿ ಸಿಎಂ ಹೆಚ್‌ಡಿಕೆ ಕುಮಾರಸ್ವಾಮಿಯವರು ಸಂಸದ ಪ್ರಜ್ವಲ್ ರೇವಣ್ಣಗೆ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಯಾಕೆ ಹೆದರಬೇಕು. ತಪ್ಪು ಮಾಡಿದ್ರೆ ಶಿಕ್ಷೆ ಆಗಲಿ. ಕಾರ್ಯಕರ್ತರ ಮೇಲೆ ಪಕ್ಷ ಬೆಳೆದಿದೆ.ಅವರ ಆಶೀರ್ವಾದದಿಂದ ಬೆಳೆದಿದ್ದೇವೆ. ಹೀಗಾಗಿ ವಾಪಸ್ ಬಂದು ತನಿಖೆಗೆ ಸಹಕಾರ ಕೊಡುವಂತೆ ಪ್ರಜ್ವಲ್ ಗೆ ಕೈಮುಗಿದು ಕೇಳುತ್ತೇನೆ ಎಂದರು.

ಎಲ್ಲೇ ಇದ್ದರೂ ಬಂದು ತನಿಖೆ ಎದುರಿಸು. ಮುಂದಿನ 24, 48 ಗಂಟೆ ಒಳಗೋ ಬಂದು ತನಿಖೆ ಎದುರಿಸು.ಎಷ್ಟು ದಿನ ಈ ಕಳ್ಳ-ಪೊಲೀಸ್ ಆಟ. ದೇವೇಗೌಡರಿಗೆ ಮನವಿ ಮಾಡಿ ಅಂತ ಹೇಳಿದ್ದೆ.ಆದರೆ ಈಗ ನಾನೇ ಮನವಿ ಮಾಡ್ತೀನಿ. ಎಲ್ಲೇ ಇದ್ದರೂ ಬಂದು ತನಿಖೆ ಎದುರಿಸು ಎಂದು ಕುಮಾರಸ್ವಾಮಿ ಹೇಳಿದರು.

ಪೆನ್‌ಡ್ರೈವ್ ಪ್ರಕರಣ ಹೊರ ಬರುತ್ತಿದ್ದಂತೆಯೇ ಸಂಸದ ಪ್ರಜ್ವಲ್ ರೇವಣ್ಣ ವಿದೇಶಕ್ಕೆ ಹಾರಿದ್ದಾರೆ.ರೆಡ್ ಕಾರ್ನರ್ ನೋಟಿಸ್ ಜಾರಿ ಮಾಡಿದ್ರೂ, ಪ್ರಜ್ವಲ್ ಪತ್ತೆ ಇಲ್ಲ. ಇತ್ತ ಈ ಪ್ರಕರಣವು ದಿಕ್ಕೊಂದು ಟ್ವಿಸ್ಟ್ ಪಡೆದುಕೊಳ್ಳುತ್ತಿದೆ. ಶಿವರಾಮೇಗೌಡ ಹಾಗೂ ಬಿಜೆಪಿ ಮುಖಂಡ ಹಾಗೂ ವಕೀಲ ದೇವರಾಜೇಗೌಡ ನಡುವೆ ನಡೆದ ಸಂಭಾಷಣೆಯ ಒಂದೊಂದೇ ಆಡಿಯೋ ಕ್ಲಿಪ್ ಗಳು ಹೊರಬರುತ್ತಿದ್ದು, ಪ್ರಕರಣಕ್ಕೆ ಟ್ವಿಸ್ಟ್ ಕೊಡುತ್ತಿವೆ.



Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com